ಸಂಪುಟ: ೦೬/ ಸಂಚಿಕೆ: ೨೪೦/ಗುರುವಾರ ದಿನಾಂಕ: ೨೧-೧೧-೨೦೨೪/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 240/ THURSDAY Date : 21-11-2024/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

### ॥ ಸಪ್ತಋಷಿವಾಣಿ ॥

ಬದುಕಿನಲ್ಲಿ ನಿಮ್ಮ ಭವಿಷ್ಯವನ್ನು ನೀವು ಬದಲಾಯಿಸಲು ಸಾಧ್ಯವಿಲ್ಲ, ಆದರೆ ನಿಮ್ಮ ಅಭ್ಯಾಸವನ್ನು ನೀವು ಬದಲಾಯಿಸಬಹುದು, ಮತ್ತು ಖಂಡಿತವಾಗಿಯೂ ನಿಮ್ಮ ಅಭ್ಯಾಸಗಳು ನಿಮ್ಮ ಭವಿಷ್ಯವನ್ನು ಬದಲಾಯಿಸುತ್ತವೆ.

ಧಾರ್ಮಿಕ ಮಾರ್ಗದರ್ಶಕ
ಸಂತೋಷ ಆಚಾರ್ಯ, ಉಡುಪಿ

## ೭೧ ನೇ ಅಖಿಲ ಭಾರತ ಸಹಕಾರ ಸಪ್ತಾಹ ಸಮಾರೋಪ

# ರೈತರ ಆರ್ಥಿಕ ಸಂಕಷ್ಟ ಪರಿಹಾರಕ್ಕೆ ಸಹಕಾರ ಕ್ಷೇತ್ರ ನೆರವಾಗಿದೆ : ಕೆ.ಎನ್ ರಾಜಣ್ಣ



**ಬೆಳಗಾವಿ** :"ಸಹಕಾರಿ ಆಂದೋಲನ ಸಾರ್ವಜನಿಕರ ಆಂದೋಲನವಾಗಿದೆ. ಕೃಷಿ ಪತ್ತಿನ ಸಹಕಾರಿ ಸಂಘಗಳು ಗ್ರಾಮೀಣ ಭಾಗದ ರೈತರ ಸಂಕಷ್ಟ ಕಾಲದಲ್ಲಿ ಕೈ ಹಿಡಿದಿವೆ. ಪತ್ತಿನ ಸಹಕಾರಿ ವ್ಯವಸ್ಥೆ ಇಲ್ಲದೆ ಹೋದರೆ ರೈತರು ಆರ್ಥಿಕವಾಗಿ ಸಂಕಷ್ಟಕ್ಕೆ ಒಳಗಾಗುತ್ತಿದ್ದರು. ರೈತರಿಗೆ ಆರ್ಥಿಕ ಊರುಗೋಲಾಗಿ ಸಹಕಾರಿ ಕ್ಷೇತ್ರ ಕಾರ್ಯ ನಿರ್ವಹಿಸುತ್ತಿದೆ" ಎಂದು ಸಹಕಾರ ಸಚಿವ ಕೆ. ಎನ್ ರಾಜಣ್ಣ ಅವರು ತಿಳಿಸಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ ಬೆಂಗಳೂರು ಹಾಗೂ ಇತರೆ ಸಹಯೋಗದಲ್ಲಿ ನೆಹರು ನಗರದ ಜೆ.ಎನ್.ಎಂ.ಸಿ ಆವರಣದಲ್ಲಿರುವ ಡಾ. ಬಿ.ಎಸ್ ಜೀರಗೆ ಸಭಾಂಗಣದಲ್ಲಿ ಬುಧವಾರ (ನ.20) ನಡೆದ 71ನೇ ಅಖಿಲ ಭಾರತ ಸಹಕಾರ ಸಪ್ತಾಹ –2024ರ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಸಹಕಾರ ಸಂಘಗಳು ಸಾಲ ನೀಡದೆ ಹೋದರೆ ರಾಜ್ಯದ ಸಕ್ಕರೆ ಕಾರ್ಖಾನೆಗಳು ಆರ್ಥಿಕವಾಗಿ ಹಿಂದುಳಿಯುತಿದ್ದವು. ರಾಜ್ಯದ ಕಾರ್ಖಾನೆಗಳಿಗೆ ಬೆಂಬಲವಾಗಿ ನಿಂತಿದೆ. ಈಗಾಗಲೇ ರಾಜ್ಯದಲ್ಲಿ ಸಹಕಾರ ಕ್ಷೇತ್ರ ಪ್ರಗತಿಯತ್ತ ಸಾಗುತ್ತಿದ್ದು, ಇನ್ನಷ್ಟು ಅಭಿವೃದ್ಧಿಪಡಿಸುವ ಜವಾಬ್ದಾರಿ ನಮ್ಮಮೇಲಿದೆ. ಹಾಗಾಗಿ ಪ್ರಾಮಾಣಿಕವಾಗಿ ಜನಪರ ಸಹಕಾರ ಕ್ಷೇತ್ರವಾಗಿ ದೇಶದಲ್ಲೇ ಆರ್ಥಿಕವಾಗಿ ಮುಂಚೂಣಿಗೆ ಬರಲಿದೆ ಎಂದು ಹೇಳಿದರು.

ರೈತರ ಉತ್ಪಾದಿತ ವಸ್ತುಗಳಿಗೆ ಬೆಲೆ ನಿಗದಿಯಾಗಬೇಕು ಇದರಿಂದ ರೈತರ ಆರ್ಥಿಕತೆಗೆ ಶಕ್ತಿ ಬರಲಿದೆ. ರೈತರಿಗೆ ವಿವಿಧ ಸೌಲಭ್ಯಗಳನ್ನು ಸರಳವಾಗಿ ಒದಗಿಸುವ ನಿಟ್ಟಿನಲ್ಲಿ ಸಹಕಾರ ಕ್ಷೇತ್ರ ಮುನ್ನಡೆಯುತ್ತಿದೆ. "ನಾನು ಎಲ್ಲರಿಗಾಗಿ ಎಲ್ಲರೂ ನನಗಾಗಿ" ಎಂಬ ಧ್ಯೇಯವಾಕ್ಯದೊಂದಿಗೆ ಸಹಕಾರ ಕ್ಷೇತ್ರ ಬಂದಿದೆ ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ಹೇಳಿದರು.

ಬೆಳಗಾವಿ ಸಹಕಾರ ರಂಗದ ತವರು ಜಿಲ್ಲೆಯಾಗಿದೆ. ಅತೀ ಹೆಚ್ಚು ಸಹಕಾರ ಸಂಘಗಳನ್ನು ಬೆಳಗಾವಿ ಜಿಲ್ಲೆ ಹೊಂದಿದೆ. ರೈತ–ರಿಗೆ, ಪರಿಶಿಷ್ಟ ಜಾತಿ, ಪಂಗಡದ ವರ್ಗದವರಿಗೆ ವಿವಿಧ ಯೋಜನೆಗಳನ್ನು ಸಹಕಾರಿ ಸಂಘಗಳು ತಲುಪಿಸುತ್ತಿವೆ. ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ 5 ಲಕ್ಷ ವರೆಗೆ ಸಾಲ ಸೌಲಭ್ಯ ನೀಡಲಾಗುತ್ತಿದೆ ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಹೇಳಿದರು.

ಸಹಕಾರ ಚಳುವಳಿ ಗದಗ ಜಿಲ್ಲೆಯಿಂದ ಪ್ರಾರಂಭವಾಗಿ ಪ್ರಸ್ತುತ ದಿನಮಾನಗಳಲ್ಲಿ ಸಹಕಾರ ರಂಗ ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ. ಹುಕ್ಕೇರಿಯಲ್ಲಿ ಸಹಕಾರಿ ಶಾಲೆ ದೇಶದಲ್ಲೇ ಮಾದರಿಯಾಗಿದೆ.

ಸಹಕಾರ ರಂಗದಲ್ಲಿ ಸದಸ್ಯರ ಆಯ್ಕೆಯ ಮಾನದಂಡ ಬದಲಾಗಬೇಕಿದೆ. ಇನ್ನಷ್ಟು ಸುಲಭ ಮಾರ್ಗದಲ್ಲಿ ಸಹಕಾರ ಸಂಘಗಳ ಸದಸ್ಯರ ಆಯ್ಕೆ ನಿಯಮಗಳನ್ನು ರೂಪಿಸಬೇಕು. ಜಮೀನು ಪಹಣಿ ಹೊಂದಿದ ರೈತರಿಗೆ ಸದಸ್ಯತ್ವ ದೊರೆಯುವ ನಿಟ್ಟಿನಲ್ಲಿ ಡಿಜಿಟಲ್ ಮೂಲಕ ಸದಸ್ಯರ ಆಯ್ಕೆ ಪ್ರಕ್ರಿಯೆ ನಡೆಸಬೇಕು ಎಂದು ಸಚಿವ ಜಾರಕಿಹೊಳಿ ಹೇಳಿದರು.

ರೈತರಿಗೆ ಸುಲಭವಾಗಿ ಹೆಚ್ಚು ಸಾಲ ಸೌಲಭ್ಯ ನೀಡಲು ಸರಳೀಕರಣ ಮಾದರಿಯನ್ನು ಅನುಸ–ರಿಸಬೇಕು. ಈ ಪ್ರಕ್ರಿಯೆಯನ್ನು ಎಲ್ಲಾ ಸಹಕಾರಿ ಸಂಘಗಳು ನಿಯಮಾನುಸಾರ ಕಾನೂನು ಚೌಕಟ್ಟಿನಲ್ಲಿ ಜಾರಿಗೆ ತರಬೇಕು ಎಂದರು.

ಜಿಲ್ಲೆಯ ಎಲ್ಲಾ ರೈತರಿಗೆ ವಿವಿಧ ಸಹಕಾರಿ ಬ್ಯಾಂಕಗಳಿಂದ ರೈತರಿಗೆ ಸೌಲಭ್ಯಗಳನ್ನು ಒದಗಿಸುವ ಚಿಂತನೆಗಳನ್ನು ಬೆಳಸಿಕೊಳ್ಳಬೇಕು. ರೈತರು ಸ್ವಾಭಿಮಾನದ ಬದುಕ ಕಟ್ಟಿಕೊಳ್ಳಲು ಸಹಕಾರ ಸಂಘಗಳ ಸದಾ ಬೆಂಬಲವಾಗಿ ನಿಂತಿವೆ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಕೆ.ಎಲ್.ಇ ಸಂಸ್ಥೆಯ ಕಾರ್ಯಾಧ್ಯಕ್ಷ ಡಾ. ಪ್ರಭಾಕರ ಕೋರೆ ಮಾತನಾಡಿ, ಉತ್ತರ ಕರ್ನಾಟಕದ ಭಾಗದ ಜನರು ಸಹಕಾರ ಸಂಘದಲ್ಲಿ ಪ್ರಾಮಾಣಿಕವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಯಾವುದೇ ತಾರತಮ್ಯ ಇಲ್ಲದೇ ನಿಷ್ಠಾವಂತ ಸೇವೆ ಸಲ್ಲಿಸುತ್ತಿದ್ದಾರೆ. ಸರಕಾರಿ ಚಳುವಳಿ ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳಬೇಕಿದೆ ಎಂದರು.

ಸಹಕಾರಿ ಸಂಘಗಳಿಂದ ದೇಶದ ಆರ್ಥಿಕತೆಗೆ ಬಹಳಷ್ಟು ಬಲ ಬಂದಿದೆ. ರಾಜ್ಯದಲ್ಲಿ ಸಹಕಾರಿ ವಿಶ್ವವಿದ್ಯಾಲಯ ಸ್ಥಾಪನೆಯಾಗಬೇಕು ಅದೇ ರೀತಿಯಲ್ಲಿ ಜಿಲ್ಲೆಯಲ್ಲಿ ಮಹಾ ವಿದ್ಯಾಲಯವಾಗಬೇಕು ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಮಾತನಾಡಿ, ಸಹಕಾರ ಕ್ಷೇತ್ರವಿಲ್ಲದೆ ರಾಜ್ಯ, ದೇಶ ರೈತರ ಪ್ರಗತಿ ಸಾಧ್ಯವಿಲ್ಲ. ಗದಗ ಜಿಲ್ಲೆಯಲ್ಲಿ ದೇಶದಲ್ಲೇ ಮೊದಲ ಬಾರಿಗೆ ರೈತರಿಗೆ ಅನುಕೂಲವಾಗಲು ಸಹಕಾರ ಕ್ಷೇತ್ರ ಪ್ರಾರಂಭವಾಯಿತು. ಸಾಲದ ನೆರವು ನೀಡದೆ ಹೋದರೆ ರೈತಾಪಿ ವರ್ಗಕ್ಕೆ ಆರ್ಥಿಕ ಕಷ್ಟವಾಗುತ್ತಿತ್ತು. ಜವಾಹರ್ ಲಾಲ್ ನೆಹರೂ ಅವರ ಜನ್ಮ ದಿನದ ನಿಮಿತ್ಯ ನವಂಬರ್ 14 ರಿಂದ 7 ದಿನಗಳ ಕಾಲ ಸಹಕಾರ ಸಪ್ತಾಹ ಏರ್ಪಡಿಸಲಾಗುವುದು ಎಂದು ಹೇಳಿದರು.

ಹಾಲು ಮಾರಾಟ, ನೇಕಾರ, ರೈತರು, ಸೌಹಾರ್ದ, ಮಹಿಳಾ ಸೊಸೈಟಿ ಸೇರಿದಂತೆ ಎಲ್ಲ ವರ್ಗದಲ್ಲಿ ಸಹಕಾರ ಕ್ಷೇತ್ರ ಬೆಳೆದು ನಿಂತಿದೆ. ಜಿಲ್ಲೆಯಲ್ಲಿ ಸಹಕಾರಿ ಸಂಘಗಳು ಅತ್ಯುತ್ತಮವಾಗಿ ಕಾರ್ಯ ನಿರ್ವಹಿಸುತ್ತಿವೆ. ಅದೇ ರೀತಿಯಲ್ಲಿ ಸಹಕಾರ ಕ್ಷೇತ್ರ ಇನ್ನಷ್ಟು ಅಭಿವೃದ್ಧಿ ಹೊಂದಿಬೇಕು. ಸಹಕಾರ ಸಂಘಗಳು ಜನರ ವಿಶ್ವಾಸ ಉಳಿಕೊಳ್ಳುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಅಥಣಿ ವಿಧಾನಸಭಾ ಕ್ಷೇತ್ರದ ಶಾಸಕ ಲಕ್ಷ್ಮಣ ಸವದಿ ಮಾತನಾಡಿ, ಸಹಕಾರ ಕ್ಷೇತ್ರದ ಬೆಳವಣಿಗೆಗೆ ವರದಿಯನ್ನು ಸಹಕಾರ ಸಪ್ತಾಹ ಮೂಲಕ ಆಚರಣೆ ಮಾಡಲಾಗುವುದು. ಬೆಳಗಾವಿ ಜಿಲ್ಲೆ ಕಬ್ಬು ಬೆಳೆಯುವಲ್ಲಿ ಮುಂಚೂಣಿಯಲ್ಲಿದೆ. ಬಾಗಲಕೋಟೆ, ಬಿಜಾಪುರ, ತುಮಕೂರು ಸೇ–ರಿದಂತೆ ರಾಜ್ಯದಲ್ಲೇ ಸಹಕಾರ ಕ್ಷೇತ್ರ ಬೆಳೆದು ಹೆಮ್ಮರವಾಗುತ್ತಿದೆ. ಕೇಂದ್ರ ಸರ್ಕಾರಕ್ಕೆ ರಾಜ್ಯದಿಂದ 8 ರಿಂದ 9 ಸಾವಿರ ಕೋಟಿ ಜಿ.ಎಸ್.ಟಿ ಸಂದಾಯ ಮಾಡಲಾಗುತ್ತಿದೆ ಎಂದರು.

ಕೇಂದ್ರ ಸರ್ಕಾರದ ಹೊಸ ಯೋಜನೆಯಾದ ಕಬ್ಬಿನಿಂದ ಎಥನಾಲ್ ಉತ್ಪಾದನೆ ಪ್ರಾಜೆಕ್ಟ್ ಗೆ ಸಹಕಾರ ಕ್ಷೇತ್ರ ಪ್ರಮುಖ ಪಾತ್ರ ವಹಿಸಲಿದೆ. ಮುಂದಿನ ದಿನಗಳಲ್ಲಿ ದೇಶದ ಆರ್ಥಿಕತೆಗೆ ಸಹಕಾರ ಕ್ಷೇತ್ರ ಪ್ರಮುಖ ಪಾತ್ರ ನಿರ್ವಹಿಸಲಿದೆ ಎಂದು ಶಾಸಕ ಸವದಿ ಹೇಳಿದರು.

ವಿಶೇಷ ಸಂಚಿಕೆ ಬಿಡುಗಡೆ:

ಇದಕ್ಕೂ ಮುಂಚೆ ಸಹಕಾರ ಸಚಿವ ಕೆ.ಎನ್ ರಾಜಣ್ಣ, ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಸಪ್ತಾಹದ ಸಹಕಾರ ಕ್ಷೇತ್ರದ ಚಿಂತನ ಮಂತನ, ವಿಶೇಷ ಸಂಚಿಕೆ ಬಿಡುಗಡೆ ಮಾಡಿದರು. ರಾಮದುರ್ಗ ವಿಧಾನಸಭಾ ಶಾಸಕರು ಹಾಗೂ ಸರ್ಕಾರದ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ಬೆಳಗಾವಿ ಉತ್ತರ ವಿಧಾನಸಭಾ ಮತಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇತ, ರಾಯಬಾಗ ವಿಧಾನಸಭಾ ಕ್ಷೇತ್ರದ ಶಾಸಕ ದುರ್ಯೋಧನ ಐಹೊಳೆ, ರಾಜ್ಯ ಸಭಾ ಸದಸ್ಯ ಈರಣ್ಣ ಕಡಾಡಿ, ಬುಡಾ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ, ಮಾಜಿ ವಿಧಾನ ಪರಿಷತ್ ಸದಸ್ಯ ಮಹಾಂತೇಶ ಕವಟಗಿಮಠ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಹಾಗೂ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತದ ನಿರ್ದೇಶಕ ಜಗದೀಶ ಕವಟಗಿಮಠ,

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ, ಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಪ್ಪಾಸಾಹೇಬ ಕುಲಗುಡೆ, ಡಿಸಿಸಿ ಬ್ಯಾಂಕ್, ಜಿಲ್ಲಾ ಹಾಲು ಒಕ್ಕೂಟ, ಸಹಕಾರ ಸಕ್ಕರೆ ಕಾರ್ಖಾನೆಯ ನಿರ್ದೇಶಕರು, ಸದಸ್ಯರು, ಸಹಕಾರ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

## ಬರೋಬ್ಬರಿ 22 ಲಕ್ಷ ಬಿಪಿಎಲ್ ಕಾರ್ಡ್ ಅನರ್ಹ



**ಬೆಂಗಳೂರು:** ರಾಜ್ಯ ಸರ್ಕಾರದಿಂದ ಅನರ್ಹ ಬಿಪಿಎಲ್ ಕಾರ್ಡ್‌ದಾರರ ಮೆಗಾ ಆಪರೇಷನ್ ನಡೆಯುತ್ತಿದೆ. ಅನರ್ಹ ಬಿಪಿಎಲ್ ಕಾರ್ಡ್ ಫಲಾನುಭವಿಗಳೇ ಹೆಚ್ಚು ಇರುವ ಶಾಕಿಂಗ್ ಮಾಹಿತಿ ಬಯಲಾಗಿದೆ.

ರಾಜ್ಯದಲ್ಲಿ ಬರೋಬ್ಬರಿ 22 ಲಕ್ಷ ಅನರ್ಹ ಬಿಪಿಎಲ್ ಕಾರ್ಡ್‌ದಾರರು ಇದ್ದಾರೆ ಎಂಬ ಸತ್ಯಸಂಗತಿ ಬಯಲಾಗಿದೆ. ಕಳೆದ ಆಗಸ್ಟ್ ತಿಂಗಳಿನಲ್ಲೇ ಆಹಾರ ಇಲಾಖೆಗೆ ಇ ಗವರ್ನೆನ್ಸ್ ಇಲಾಖೆ ಮಾಹಿತಿ ಕೊಟ್ಟಿದೆ. ಇದೇ ಮಾಹಿತಿ ಇಟ್ಟುಕೊಂಡೇ 22 ಲಕ್ಷ ಅನರ್ಹ ಬಿಪಿಎಲ್ ಕಾರ್ಡ್‌ಗಳ ರದ್ದಾಗಲಿದೆಯೇ ಎಂಬ ಅನುಮಾನ ಈಗ ಮೂಡಿದೆ.

ಕಲಬುರಗಿ ಜಿಲ್ಲೆಯಲ್ಲೇ ಅತಿಗಹೆಚ್ಚು ಅನರ್ಹ–ರಿಗೆ ಬಿಪಿಎಲ್ ಕಾರ್ಡ್ ಕೊಟ್ಟಿರುವ ಮಾಹಿತಿ ಸಿಕ್ಕಿದೆ. ಕಲಬುರಗಿಯಲ್ಲಿ 78,058 ಮಂದಿ ಅನರ್ಹರಿಗೆ ಬಿಪಿಎಲ್ ಕಾರ್ಡ್ ನೀಡಲಾಗಿದೆ. ಬೆಂಗಳೂರಿನಲ್ಲಿ ಒಟ್ಟು 65,563 ಅನರ್ಹರ ಬಳಿ ಬಿಪಿಎಲ್ ಕಾರ್ಡ್ ಇದೆ. ಬೆಂಗಳೂರು ಪೂರ್ವದಲ್ಲಿ 9,129 ಅನರ್ಹ–ರಿಗೆ ಬಿಪಿಎಲ್ ಕಾರ್ಡ್ ನೀಡಲಾಗಿದೆ. ಬೆಂಗಳೂರು ಉತ್ತರದಲ್ಲಿ 17,382 ಅನರ್ಹರಿಗೆ ಬಿಪಿಎಲ್ ಕಾರ್ಡ್ ನೀಡಲಾಗಿದೆ. ಬೆಂಗಳೂರು ದಕ್ಷಿಣದಲ್ಲಿ 11,447 ಅನರ್ಹರಿಗೆ ಬಿಪಿಎಲ್ ಕಾರ್ಡ್ ನೀಡಲಾಗಿದೆ.

ಬಾಗಲಕೋಟೆಯಲ್ಲಿ ಬಿಪಿಎಲ್ ಕಾರ್ಡ್ ರದ್ದಿನಿಂದಾಗಿ ಪಡಿತರ ಸಿಗದೇ ವೃದ್ಧೆಯೊಬ್ಬರು ಕಣ್ಣೀರು ಹಾಕಿದ್ದಾರೆ. ಬೆಂಗಳೂರಿನ ಮಹಾಲಕ್ಷ್ಮೀ ಲೇಔಟ್‌ನ ವೃಷಭಾವತಿ ನಗರದಲ್ಲಿ ಹಲವು ಬಿಪಿಎಲ್ ಕಾರ್ಡ್‌ಗಳು ರದ್ದುಗೊಂಡಿವೆ. ಮನೆಗೆಲಸ, ಹಪ್ಪಳ ಮಾರಾಟ ಮಾಡಿ ಬದುಕು ಸಾಗಿಸುತ್ತಿದ್ದ ಜನರು ಕಾರ್ಡ್ ರದ್ದತಿಯಿಂದ ಸಮಸ್ಯೆ ಎದುರಿಸುತ್ತಿದ್ದೇವೆ ಎಂದು ಅಳಲು ತೋಡಿಕೊಂಡಿದ್ದಾರೆ.

ಇನ್ನು ಬಿಪಿಎಲ್ ಕಾರ್ಡ್ ಪರಿಷ್ಕರಣೆಯನ್ನೇ ಅಸ್ತ್ರ ಮಾಡ್ಕೊಂಡಿರುವ ಬಿಜೆಪಿ, ಸತ್ಯಶೋಧನೆ ನಡೆಸುತ್ತಿದೆ. ಬಿಪಿಎಲ್ ಕಾರ್ಡ್ ರದ್ದಾದವರ ಮನೆಗೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ಭೇಟಿ ನೀಡಿದ್ದಾರೆ. ಬೆಂಗಳೂರಿನ ಮಹಾಲಕ್ಷ್ಮಿ ಲೇಔಟ್ ಕ್ಷೇತ್ರದ ಜೈ ಮಾರುತಿ ನಗರದಲ್ಲಿ ಬಿಪಿಎಲ್ ಕಾರ್ಡ್ ರದ್ದಾದವರ ನಿವಾಸಕ್ಕೆ ಭೇಟಿ ನೀಡಿದ್ದಾರೆ. ಆರ್. ಅಶೋಕ್‌ಗೆ ಅಶ್ವಥ್ ನಾರಾಯಣ, ಕೆ.ಗೋಪಾಲಯ್ಯ ಸಾಥ್ ನೀಡಿದ್ದಾರೆ.

ಏತನ್ಮಧ್ಯೆ, ಯಾರಿಗೂ ಅನ್ಯಾಯ ಆಗಲು ಬಿಡುವುದಿಲ್ಲ ಎಂದು ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ಭರವಸೆ ನೀಡಿದ್ದಾರೆ. ಅರ್ಹ ಬಿಪಿಎಲ್ ಕಾರ್ಡ್‌ದಾರರು ಆತಂಕ ಆತಂಕಕ್ಕೊಳಗಾಗುವುದು ಬೇಡ ಎಂದಿದ್ದಾರೆ.

ಯಾರು ಬಡವರಿದ್ದಾರೆ, ಅವರಿಗೆ ಬಿಪಿಎಲ್ ಕಾರ್ಡ್ ಸಿಗಲಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ. ಸಚಿವ ಎಂಬಿ ಪಾಟೀಲ್ ಮಾತನಾಡಿ, ಬಡವರ ರೇಷನ್ ಕಾರ್ಡ್ ರದ್ದು ಮಾಡಲ್ಲ ಎಂದಿದ್ದಾರೆ.

## ಇಂದಿನಿಂದ ಬಿ.ಇಡಿ ಮೂಲ ದಾಖಲೆಗಳ ಪರಿಶೀಲನೆ

ಬೆಳಗಾವಿ : ಪ್ರಸಕ್ತ ಸಾಲಿನಲ್ಲಿ ಸರಕಾರಿ ಕೋಟಾದಡಿ ಬಿ.ಇಡಿ ದಾಖಲಾತಿಗಾಗಿ ಮೂಲ ದಾಖಲೆಗಳ ಪರಿಶೀಲನಾ ಕಾರ್ಯವನ್ನು ನವೆಂಬರ್ 21 ರಿಂದ ಪ್ರಾರಂಭಿಸಲಾಗಿತ್ತಿದ್ದು, ಪರಿಶೀಲನಾ ಪಟ್ಟಿಯಲ್ಲಿ ತಮಗೆ ನಿಗದಿಪಡಿಸಿದ ದಿನಾಂಕಗಳಂದು ನೋಡಲ್ ಕೇಂದ್ರಗಳಲ್ಲಿ ತಮ್ಮ ಮೂಲ ದಾಖಲೆಗಳನ್ನು ಪರಿಶೀಲಿಸಿಕೊಳ್ಳಲು ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ, chooleducation.kar.nic.in/cac cell ವೆಬ್‌ಸೈಟ್ ಅಥವಾ ಓ–08 ನೋಡಲ್ ಅಧಿಕಾರಿಗಳಾದ ಬಿ.ಡಿ ಕಾರದಗೆ ದೂ. 9535296956 ಸಂಖ್ಯೆಗೆ ಸಂಪರ್ಕಿಸಲು ಬೆಳಗಾವಿ ಸರಕಾರಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ (ಸಿ.ಟಿ.ಇ.) ಸಹನಿರ್ದೇಶಕರು/ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಧಾನಮಂಡಳ ಚಳಿಗಾಲ ಅಧಿವೇಶನ

# ಸಮರ್ಪಕ ವಸತಿ, ಸಾರಿಗೆ- ಊಟೋಪಹಾರ ವ್ಯವಸ್ಥೆ ಕಲ್ಪಿಸಲು ಜಿಲ್ಲಾಧಿಕಾರಿ ಸೂಚನೆ



**ಬೆಳಗಾವಿ** ನ.20 : ಪ್ರಸಕ್ತ ಸಾಲಿನ ವಿಧಾನಮಂಡಳ ಚಳಿಗಾಲ ಅಧಿವೇಶನ ಡಿ.9 ರಿಂದ ನಡೆಯಲಿದೆ. ಅಧಿವೇಶನ ಸಂದರ್ಭದಲ್ಲಿ ಸಮರ್ಪಕ ವಸತಿ, ಸಾರಿಗೆ, ಊಟೋಪಹಾರ ವ್ಯವಸ್ಥೆ ಕಲ್ಪಿಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ (ನ.20) ಜರುಗಿದ ವಿಧಾನಮಂಡಳ ಚಳಿಗಾಲ ಅಧಿವೇಶನ–2024 ರ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಈ ಬಾರಿಯ ಚಳಿಗಾಲದ ಅಧಿವೇಶನ ಸಿದ್ಧತೆಗೆ ಕಡಿಮೆ ಸಮಯಾವಕಾಶವಿದ್ದು, ಅಧಿವೇಶನ ಯಶಸ್ವಿಗಾಗಿ ಅಧಿಕಾರಿಗಳು, ತಮ್ಮ ಜವಾಬ್ದಾ–ರಿಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕೆಂದು ಹೇಳಿದರು.

ಅಧಿವೇಶನದ ಯಶಸ್ವಿಗಾಗಿ ಈಗಾಗಲೇ ವಸತಿ, ಆಹಾರ, ಸಾರಿಗೆ, ಆರೋಗ್ಯ, ದೂರು ನಿರ್ವಹಣಾ ಸೇರಿದಂತೆ ವಿವಿಧ ಸಮಿತಿಗಳನ್ನು ರಚಿಸಲಾಗಿದೆ. ಎಲ್ಲ ಸಮಿತಿಯ ಅಧಿಕಾ–ರಿಗಳು ಹಾಗೂ ಸಿಬ್ಬಂದಿ ತಮ್ಮ ಜವಾಬ್ದಾ–ರಿಗಳನ್ನು ಸಮರ್ಪಕವಾಗಿ ನಿರ್ವಹಿಸುವ ಮೂಲಕ ಯಾವುದೇ ಲೋಪದೋಷ ಉಂಟಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು.

ಅಧಿವೇಶನಕ್ಕೆ ಆಗಮಿಸುವ ಸಚಿವರು, ಹಿರಿಯ ಅಧಿಕಾರಿಗಳು, ಭದ್ರತಾ ಸಿಬ್ಬಂದಿ, ವಾಹನ ಚಾಲಕರರುಗಳಿಗೆ ಸೂಕ್ತ ವಸತಿ, ಊಟ ಹಾಗೂ ಸಾರಿಗೆ ವ್ಯವಸ್ಥೆಯನ್ನು ಒದಗಿಸಬೇಕು. ಅಧಿವೇಶನಕ್ಕಾಗಿ ಆಗಮಿಸುವ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿಗಳು, ಸಚಿವರುಗಳಿಗೆ ಶಿಷ್ಟಾಚಾರದಲ್ಲಿ ಯಾವುದೇ ಲೋಪವಾಗದಂತೆ ಸಂಬಂಧಿಸಿದ ಇಲಾಖಾ ಅಧಿಕಾರಿಗಳು ನಿಗಾವಹಿಸಬೇಕು.

ಅಧಿವೇಶನಕ್ಕೆ ಆಗಮಿಸುವ ಗಣ್ಯರುಗಳಿಗೆ ಸೂಕ್ತ ವಸತಿ ವ್ಯವಸ್ಥೆ ಒದಗಿಸಬೇಕು. ಈ ನಿಟ್ಟಿನಲ್ಲಿ ಸಂಬಂಧಿಸಿದ ಅಧಿಕಾರಿಗಳು ವಸತಿಗಾಗಿ ಗುರುತಿಸಲಾದ ಹೊಟೇಲ್ ಗಳನ್ನು ಪರಿಶೀಲಿಸಿ, ಅವುಗಳ ಮಾಲಿಕರೊಂದಿಗೆ ಚರ್ಚಿಸಿ ಕೊಠಡಿಗಳನ್ನು ಕಾಯ್ದಿರಿಸಲು ತಿಳಿಸಿದರು.

ಅಧಿವೇಶನದ ಸಂದರ್ಭದಲ್ಲಿ ಸುವರ್ಣ ಸೌಧದಲ್ಲಿ ಅಂತರ್ಜಾಲ ಸಂಪರ್ಕದಲ್ಲಿ ಯಾವುದೇ ಅಡೆತಡೆಗಳು ಆಗದಂತೆ ಅಗತ್ಯ ಕ್ರಮಗಳನ್ನು ಮುಂಚಿತವಾಗಿಯೇ ತೆಗೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ರೋಷನ್ ತಿಳಿಸಿದರು.

ವೈದ್ಯಕೀಯ ತಂಡಗಳ ನಿಯೋಜನೆ:

ಜನಪ್ರತಿನಿಧಿಗಳು, ಗಣ್ಯರು, ಅಧಿಕಾರಿಗಳು, ಮಾಧ್ಯಮ ಪ್ರತಿನಿಧಿಗಳು ಸೇರಿದಂತೆ ಅಧಿವೇಶನಕ್ಕೆ ಆಗಮಿಸಿದ ಎಲ್ಲರ ಆರೋಗ್ಯ ರಕ್ಷಣೆ ಹಾಗೂ ತುರ್ತು ವೈದ್ಯಕೀಯ ಸೌಲಭ್ಯ ಕಲ್ಪಿಸಲು ಅನುಕೂಲವಾಗುವಂತೆ ಎಲ್ಲ ವಸತಿ ಸ್ಥಳಗಳಲ್ಲಿ ಮತ್ತು ಸುವರ್ಣ ವಿಧಾನಸೌಧದಲ್ಲಿ ತುರ್ತು ವೈದ್ಯಕೀಯ ತಂಡಗಳನ್ನು ಮತ್ತು ಅಂಬ್ಯುಲೆನ್ಸ್ ಗಳನ್ನು ನಿಯೋಜಿಸಬೇಕು ಎಂದು ಸೂಚನೆ ನೀಡಿದರು.

ಒಟ್ಟಾರೆಯಾಗಿ ಪ್ರಸಕ್ತ ಸಾಲಿನ ಚಳಿಗಾಲದ ಅಧಿವೇಶನ ಸಂದರ್ಭದಲ್ಲಿ ಯಾವುದೇ ಲೋಪದೋಷಗಳಿಗೆ ಆಸ್ಪದ ನೀಡಬಾರದು. ಎಲ್ಲ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ತಮ್ಮ ಜವಾಬ್ದಾರಿಗಳನ್ನು ಅರಿತು ಅಧಿವೇಶನ ಯಶಸ್ವಿಗೊಳಿಸಬೇಕು.

ಎಲ್ಲ ಇಲಾಖೆಗಳು, ಸಮಿತಿಗಳಿ ಮತ್ತು ಅಧಿಕಾರಿಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿಗಳಾದ ಮೊಹಮ್ಮದ್ ರೋಷನ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ವಿಶೇಷ ಜಿಲ್ಲಾಧಿಕಾರಿ ಹರ್ಷ ಶೆಟ್ಟಿ, ಪಾಲಿಕೆ ಆಯುಕ್ತೆ ಶುಭಾ, ಜಿಲ್ಲಾ ಪಂಚಾಯತಿ ಮುಖ್ಯ ಯೋಜನಾ ನಿರ್ದೇಶಕ ಗಂಗಾಧರ ದಿವಟರ, ಕಾಡಾ ಆಡಳಿತಾಧಿಕಾರಿ ಸತೀಶಕುಮಾರ್, ಲೋಕೋಪಯೋಗಿ ಇಲಾಖೆ ಅಭಿಯಂತರ ಸೊಬರದ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಲ್ಲಿಕಾರ್ಜುನ ಕಲಾದಗಿ, ಆಹಾರ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ ನಾಯಕ, ಡಿಡಿಪಿಐ ಲೀಲಾವತಿ ಹಿರೇಮಠ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕಿ ವಿದ್ಯಾವತಿ ಭಜಂತ್ರಿ, ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

# ಕೆ ಎಚ್ ಡಿ ಸಿ ನೇಕಾರರ ಅನಿರ್ದಾಷ್ಟವಧಿ ಮುಷ್ಕರ



**ರಬಕವಿ–ಬನಹಟ್ಟಿ,** : ಬನಹಟ್ಟಿಯ ಕೆ ಎಚ್ ಡಿ ಸಿ ನೇಕಾರರು ತಮ್ಮ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಬುಧವಾರದಿಂದ ಬನಹಟ್ಟಿಯ ಕೆ ಎಚ್ ಡಿ ಸಿ ಕಾರ್ಯಾಲಯದ ಮುಂಭಾಗದಲ್ಲಿ ಅನಿರ್ದಾಷ್ಟವಧಿಯವರಿಗೆ ಮುಷ್ಕರ ಆರಂಭಿಸಿದರು.

ಕರ್ನಾಟಕ ರಾಜ್ಯ ನೇಕಾರ ಸೇವಾ ಸಂಘದ ಅಧ್ಯಕ್ಷ ಶಿವಲಿಂಗ ಟಿರಕಿ ಮಾತನಾಡಿ, ಹತ್ತಾರು ವರ್ಷಗಳಿಂದ ನಿಮಗದ ಅಡಿಯಲ್ಲಿ ನೇಕಾರಿಕೆ ಉದ್ಯೋಗ ಮಾಡುತ್ತಿರುವ ನೇಕಾರರು ಇಂದು ನಿವೇಶನ ದೊರೆಯದೆ ಬಾಡಿಗೆ ಮನೆಯಲ್ಲಿ ವಾಸ ಮಾಡುತ್ತಿದ್ದಾರೆ. ನಿಗಮದಲ್ಲಿ ವರ್ಷದಲ್ಲಿ ಕೇವಲ ಆರೇಳು ತಿಂಗಳು ಮಾತ್ರ ಉದ್ಯೋಗ ನೀಡುತ್ತಿದ್ದಾರೆ. ಬೆಳಗ್ಗೆಯಿಂದ ಸಂಜೆಯವರೆಗೆ ನೆಯ್ಗೆ ಮಾಡಿದರೂ ಉಪ ಜೀವನಕ್ಕೆ ಬೇಕಾದ ಕೂಲಿಯೂ ಕೂಡಾ ದೊರೆಯುತ್ತಿಲ್ಲ. ನಾಲ್ಕು ದಶಕಗಳಿಂದ ಮನೆ ಕಟ್ಟಿಕೊಂಡು ವಾಸ ಮಾಡುತ್ತಿರುವ ಮೂರು ನೂರಕ್ಕೂ ಹೆಚ್ಚು ಮನೆಗಳಿಗೆ ಸಿಟಿಎಸ್ ಉತಾರೆಯನ್ನು ಸಂಬಂಧಪಟ್ಟ ಇಲಾಖೆಯವರು ನೀಡುತ್ತಿಲ್ಲ. ಆದ್ದರಿಂದ ನೇಕಾರರು ಅನಿರ್ದಾಷ್ಟವಧಿಯವರೆಗೆ ಮುಷ್ಕರ ನಡೆಸುತ್ತಿದ್ದಾರೆ.

ಸಿಟಿಎಸ್ ಉತಾರೆಯನ್ನು ನೀಡುವ ಕುರಿತು ಮತ್ತು ನಿಗಮದಲ್ಲಿ ನೂರಾರು ಕೋಟಿ ಅವ್ಯವಹಾರ ನಡೆದಿದೆ. ಈ ಕುರಿತು ತನಿಖೆಯಾಗಬೇಕು ಎಂದು ಬನಹಟ್ಟಿಯಿಂದ ಹುಬ್ಬಳ್ಳಿಯವರೆಗೆ ನೂರಾರು ಸಂಖ್ಯೆಯಲ್ಲಿ ನೇಕಾರರು ಪಾದಯಾತ್ರೆ ನಡೆಸಿದರು.

ನಂತರ ನಿರಂತರ ಉದ್ಯೋಗ ಮತ್ತು ಮೂಲ ಸೌಕರ್ಯಗಳಿಗಾಗಿ 17 ದಿನಗಳ ಕಾಲ ಗಂಜಿ ಹೋರಾಟ ನಡೆಸಿ ಪ್ರತಿಭಟನೆಯನ್ನು ಮಾಡಲಾಯಿತು. ಆದರೂ ಯಾವುದೆ ರೀತಿಯಲ್ಲಿ ಪ್ರಯೋಜನವಾಗಿಲ್ಲ.

ಈ ಕುರಿತು ಮುಖ್ಯಮಂತ್ರಿ, ಜವಳಿ ಸಚಿವರಿಗೆ, ಶಿಕ್ಷಣ ಸಚಿವರಿಗೆ, ಸ್ಥಳೀಯ ಶಾಸಕ–ರಿಗೆ, ಸಂಸದರಿಗೆ ಹಾಗೂ ಸಂಬಂಧಪಟ್ಟ ಎಲ್ಲ ಇಲಾಖೆಯ ಅಧಿಕಾರಿಗಳಿಗೆ ಹಲವಾರು ಬಾರಿ ಮನವಿಯನ್ನು ಸಲ್ಲಿಸಿದರೂ ಯಾರು ನೇಕಾರರ ಸಮಸ್ಯೆಗಳ ಕುರಿತು ಮಾತನಾಡುತ್ತಿಲ್ಲ. ಮುಷ್ಕರ ನಡೆದಾಗ ಅಧಿಕಾರಿಗಳು ಬಂದು ಮೂಲ ಸೌಕರ್ಯ ಮತ್ತು ನಿರಂತರ ಉದ್ಯೋಗ ನೀಡುವುದಾಗಿ ಭರವಸೆಯನ್ನು ನೀಡುತ್ತಾರೆ. ಆದಷ್ಟು ಬೇಗನೆ ಸರ್ಕಾರ ನೇಕಾರರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟಕ್ಕೂ ಮುಂದಾಗುತ್ತೇವೆ ಎಂದು ಶಿವಲಿಂಗ ಟಿರಕಿ ಎಚ್ಚರಿಕೆಯನ್ನು ನೀಡಿದರು.

ನೇಕಾರರು ದಿ. ಪಿಎಂ. ಬಾಂಗಿಯವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮುಷ್ಕರ ಆರಂಭಿಸಿದರು.

ರಾಜೇಂದ್ರ ಮಿರ್ಜಿ, ಸದಾಶಿವ ಬರಗಿ, ಶ್ರೀಶೈಲ ಮುಗಳೊಳ್ಳಿ, ಬಸಪ್ಪಅಮಟಿ, ಸದಾಶಿವ ಗೊಂದಕರ್, ಮಲಿಕ್ ಜಮಾದಾರ, ಸಾವಿತ್ರಿ ಜಾಲಿಕಟ್ಟಿ, ಜಯವಂತ ಅಥಣಿ, ಶಂಕ್ರವ್ವ ಹುಣಶ್ಯಾಳ, ನಿರ್ಮಲಾ ಶಿವಮಾಳದೆ, ಅನಸೂಯಾ ನಿರ್ವಾಣಿ, ಸಂಗಪ್ಪ ಹೊಸೂರ, ಬಸು ದಡ್ಡಲಕ್ಕಣವ, ಶೇಖ ಸೇರಿದಂತೆ ಅನೇಕರು ಇದ್ದರು.

# ರಾಜ್ಯದಲ್ಲಿ ಬಂಡವಾಳ ಹೂಡಿಕೆಗೆ ಅಗತ್ಯ ನೆರವು : ಸಿದ್ದರಾಮಯ್ಯ

## ಮುಖ್ಯಮಂತ್ರಿಗಳನ್ನು ಭೇಟಿಯಾದ ಬ್ರಿಟಿಷ್ ಹೈಕಮಿಷನರ್

**ಬೆಂಗಳೂರು** : ಕರ್ನಾಟಕ ದೇಶದಲ್ಲೇ ಅತ್ಯಂತ ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ರಾಜ್ಯವಾಗಿದ್ದು, ಇಲ್ಲಿನ ಉದ್ಯಮಸ್ನೇಹಿ ವಾತಾವರಣ, ಪ್ರತಿಭೆಗಳನ್ನು ಬಳಸಿಕೊಂಡು ಬಂಡವಾಳ ಹೂಡಿಕೆ ಮಾಡಲು ಎಲ್ಲ ರೀತಿಯ ನೆರವು ಒದಗಿಸಲಾಗುವುದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಬುಧವಾರ ಗೃಹ ಕಚೇರಿ ಕೃಷ್ಣಾದಲ್ಲಿ ತಮ್ಮನ್ನು ಭೇಟಿಯಾದ ಭಾರತದಲ್ಲಿನ ಬ್ರಿಟಿಷ್ ಹೈಕಮಿಷನರ್ ಲಿಂಡೆ ಕ್ಯಾಮರೂನ್ ಅವರೊಂದಿಗೆ ವಿವಿಧ ವಿಷಯಗಳ ಕುರಿತು ಅವರು ಸಮಾಲೋಚನೆ ನಡೆಸಿದರು.

ಉದ್ಯಮಗಳಿಗೆ ಬೆಂಗಳೂರಿನಲ್ಲಿ ವಿಪುಲ ಅವಕಾಶಗಳಿದ್ದು, ಮುಂದಿನ ಫೆಬ್ರವರಿ ತಿಂಗಳಲ್ಲಿ ವಿಶ್ವ ಬಂಡವಾಳ ಹೂಡಿಕೆದಾರರ ಸಮಾವೇಶ ಇಲ್ಲಿ ನಡೆಯಲಿದೆ. ಸರಕಾರದ ಮಹತ್ವಾಕಾಂಕ್ಷೆಯ 'ಕ್ವಿನ್ ಸಿಟಿ' ಯೋಜನೆಯಡಿ ಸಹ ಅವಕಾಶಗಳನ್ನು ಬಳಸಿಕೊಳ್ಳಬಹುದಾಗಿದೆ ಎಂದು ಅವರು ಹೇಳಿದರು.

ನಮ್ಮ ರಾಜ್ಯದ ಕೈಗಾರಿಕಾ ನೀತಿಯು ಅತ್ಯಂತ ಪ್ರಗತಿಶೀಲವಾಗಿದೆ. ರಾಜ್ಯದ ಬಹುತೇಕ ನಗರಗಳಿಗೆ ಉತ್ತಮ ವಿಮಾನ ಯಾನ ಸಂಪರ್ಕವಿದ್ದು, ಇಂತಹ ಎರಡನೇ ಹಂತದ ನಗರಗಳಲ್ಲಿ ಬಂಡವಾಳ ತೊಡಗಿಸಲು ಸರಕಾರ ಎಲ್ಲ ನೆರವು ಒದಗಿಸಲಿದೆ ಎಂದು ಅವರು ಹೇಳಿದರು.



ಹೈಕಮಿಷನರ್ ಲಿಂಡೆ ಕ್ಯಾಮರೂನ್ ಮಾತನಾಡಿ, ಬೆಂಗಳೂ–ರಿನಲ್ಲಿ ಹಲವು ಬ್ರಿಟಿಷ್ ಕಂಪೆನಿಗಳು ಕಾರ್ಯನಿರ್ವಹಿಸುತ್ತಿವೆ. ಬೆಂಗಳೂ–ರಿನಲ್ಲಿ ನಡೆಯುತ್ತಿರುವ ಬೆಂಗಳೂರು ತಂತ್ರಜ್ಞಾನ ಶೃಂಗದಲ್ಲಿ 15 ಬ್ರಿಟಿಷ್ ಕಂಪೆನಿಗಳು ಭಾಗವಹಿಸುತ್ತಿವೆ. ಫೆಬ್ರವ–ರಿಯಲ್ಲಿ ನಡೆಯಲಿರುವ ವಿಶ್ವ ಬಂಡವಾಳ ಹೂಡಿಕೆದಾರರ ಸಮಾವೇಶ ಮತ್ತು ಏರೋ ಇಂಡಿಯಾ ಕಾರ್ಯಕ್ರಮದಲ್ಲಿ ಬ್ರಿಟನ್‌ನ ಹಲವು ನಿಯೋಗಗಳು ಭಾಗವಹಿಸಲಿವೆ ಎಂದರು.

ಪ್ರಸಕ್ತ ಕರ್ನಾಟಕದ ಸರಕಾರಿ ಕಾಲೇಜುಗಳ 30 ವಿದ್ಯಾರ್ಥಿಗಳು 15 ದಿನಗಳ ಅಕಾಡೆಮಿಕ್ ಅಧ್ಯಯನದ ಮೇಲೆ ಲಂಡನ್‌ನಲ್ಲಿ ತರಬೇತಿ ಪಡೆಯುತ್ತಿದ್ದಾರೆ. ಶೈಕ್ಷಣಿಕ ಕ್ಷೇತ್ರದಲ್ಲಿ ಹೆಣ್ಣು ಮಕ್ಕಳಿಗೆ ಬ್ರಿಟಿಷ್ ಹೈಕಮಿಷನ್ ಮತ್ತು ಕರ್ನಾಟಕ ಜಂಟಿ ಸಹಭಾಗಿತ್ವದಲ್ಲಿ ಸ್ಕಾಲರ್ಶಿಪ್ ಒದಗಿಸುವ ಪರಸ್ಪರ ಒಡಂಬಡಿಕೆ ರೂಪಿಸಲಾಗಿದೆ ಎಂದು ಅವರು ಹೇಳಿದರು.

ಇದರನ್ವಯ ಕರ್ನಾಟಕದಲ್ಲಿ ಅದರಲ್ಲೂ ಮುಖ್ಯವಾಗಿ ಸರಕಾರಿ ಕಾಲೇಜುಗಳಲ್ಲಿ ಪದವಿ ಪಡೆದ ಹೆಣ್ಣು ಮಕ್ಕಳಿಗೆ ಯುಕೆಯಲ್ಲಿ ಸ್ನಾತಕೋತ್ತರ ಪದವಿ ಪಡೆಯಲು ಸ್ಕಾಲರ್ಶಿಪ್ ಒದಗಿಸಲಾಗುವುದು.

ಮೂರು ವರ್ಷಗಳ ಒಡಂಬಡಿಕೆ ಇದಾಗಿದ್ದು, ಈ ವರ್ಷ 15 ಮಂದಿಗೆ ಸ್ಕಾಲರ್ಶಿಪ್ ಒದಗಿಸಲಾಗುವುದು ಎಂದು ಲಿಂಡೆ ಕ್ಯಾಮರೂನ್ ತಿಳಿಸಿದರು.

ಈ ಸಂದರ್ಭದಲ್ಲಿ ಮುಖ್ಯಮಂತ್ರಿಯ ರಾಜಕೀಯ ಕಾರ್ಯದರ್ಶಿಗಳಾದ ನಸೀರ್ ಅಹ್ಮದ್, ಗೋವಿಂದರಾಜು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಕನಕರ ತತ್ವಚಿಂತನೆ ಮನುಕುಲಕ್ಕೆ ಸಂಜೀವಿನಿ: ಮಾಲೋಜಿ



**ಜಮಖಂಡಿ:** ಕೀರ್ತನೆಗಳ ಹರಿಕಾರ ಭಕ್ತ ಕನಕದಾಸರ ಚರಿತ್ರೆ ಅವರ್ಣಿನೀಯವಾಗಿದೆ. ಅವರ ಸಕಲ ಚಿಂತನೆಗಳ ತತ್ವಸಾರಗಳು ಇಡೀ ಮನುಕುಲಕ್ಕೆ ಬೆಳಕಾಗಿವೆ. ಮನುತತ್ವದ ಒಳಗಣ್ಣು ತೆರೆಸಿವೆ. ಜ್ಞಾನೋದಯದ ರಸವೋನ್ನತಿ ಉಣಬಡಿಸಿದ್ದು, ಅವು ಬದುಕಿನ ಉನ್ಮಾದಕ್ಕೆ ಬೆಳಕಾಗಿವೆ ಎಂದು ಪ್ರಭಾರ ಮುಖ್ಯಶಿಕ್ಷಕ ಬಸವರಾಜ ಜಾಲೋಜಿ ಹೇಳಿದರು.

ತಾಲೂಕಿನ ಚಿಕ್ಕಪಡಸಲಗಿಯ ಗದಗ ತೋಂಟದಾರ್ಯ ವಿದ್ಯಾಪೀಠ ಸಂಸ್ಥೆ ಶಿವಶರಣ ಹರಳಯ್ಯ ಸ್ಮಾರಕ ಪ್ರೌಢ ಶಾಲೆಯಲ್ಲಿ ದಾಸಶ್ರೇಷ್ಠ ಕನಕದಾಸರ ಜಯಂತಿ ಹಾಗೂ ಕನ್ನಡ ಕುಲಗುರು ಲಿಂ,ತೋಂಟದ ಡಾ.ಸಿದ್ದಲಿಂಗಶ್ರೀ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಮಾಜದ ಹಿಂದುಳಿದ ಕುಟುಂಬದಲ್ಲಿ ಜನಿಸಿ ತಮ್ಮ ವೈಚಾರಿಕ ಕೃತಿಗಳ ಮೂಲಕ ಗುರುತಿಸಿಕೊಂಡಿರುವ ಕನಕರು ಶ್ರೇಷ್ಠ ವಿದ್ವಾಂಸರು. ಜಾತಿಮತ, ಕುಲಗೋತ್ರಗಳಿಗೆ ಅಂಟಿಕೊಳ್ಳದೇ ಮನುಕುಲದ ದಿವ್ಯತೆಗೆ ಮಹತ್ವ ನೀಡಿದ್ದಾರೆ. ತಮ್ಮದೇ ಬುದ್ದಿವಂತಿಕೆ, ಚುರುಕತನದ ಆಲೋಚನಾ ಲಹರಿಯ ಪ್ರಜ್ಞೆಯಿಂದ ಸಾಹಿತ್ಯ, ಕೃತಿಗಳ ಮೂಲಕ ಅನ್ಯೋನ್ಯ ಸಂದೇಶಗಳನ್ನು ಸಮಾಜದ ಒಳಿತಿಗೆ ನೀಡಿದ್ದಾರೆ. ದಾಸನಾಗು ವಿಶೇಷನಾಗು ಶ್ರೇಷ್ಠನಾಗು ಕನಕರ ಮೂಲಮಂತ್ರದ ಕೀರ್ತನಾತತ್ವ ಮನಮುಟ್ಟುವಂತೆ ಹೃದಯಗಳಿಗೆ ತಟ್ಟಿವೆ. ಅವರು ರಚಿಸಿದ ನೂರಾರು ಕಾವ್ಯ, ಕೀರ್ತನೆಗಳು ಇಂದಿಗೂ ಜನಮಾನಸದಲ್ಲಿ ನಲಿದಾಡುತ್ತಿವೆ. ಅಷ್ಟೊಂದು ಮೌಲ್ಯಭರಿತ ಶಕ್ತಿ ಹೊಂದಿವೆ ಎಂದರು. ವಿಶ್ರಾಂತ ಶಿಕ್ಷಕ ಬಸವರಾಜ ಅನಂತಪೂರ, ಸಮಾಜದ ಅಂಕುಡೊಂಕುಗಳನ್ನು ತಿದ್ದಿರುವ ದಾಸಶ್ರೇಷ್ಠ ಕನಕದಾಸರ ಸಾಧನೆ, ಬದುಕಿನ ಮೌಲ್ಯ ನಮಗೆಲ್ಲ ಪ್ರೇರಣೆಗಳಾಗಿವೆ. ಮಕ್ಕಳು ಇಂಥ ಸಾಧಕರ ಜೀವನ ಚರಿತ್ರೆಯನ್ನು ಮೆಲುಕು ಹಾಕಿ ತತ್ವಾದರ್ಶಗಳನ್ನ ಅಳವಡಿಸಿಕೊಳ್ಳಬೇಕು ಎಂದರು ವೇದಿಕೆಯಲ್ಲಿ ಶಿಕ್ಷಕರಾದ ಈರಪ್ಪ ದೇಸಾಯಿ, ಲೋಹಿತ ಮಿರ್ಜಿ, ಕುಮಾರ ವಾಣಿ, ಜಿ.ಆರ್.ಜಾಧವ, ಕವಿತಾ ಅಂಬಿ, ಸಹನಾ ಕಲ್ಯಾಣಿ (ಹತ್ತಳ್ಳಿ), ಪ್ರಮೀಳಾ ತೇಲಸಂಗ ಸಹಿತ ಹಲವರು ಇದ್ದರು.

# ಭಕ್ತಶ್ರೇಷ್ಠ ಶ್ರೀ ಕನಕದಾಸರ 537ನೇ ಜಯಂತಿ ಆಚರಣೆ



**ಮುದ್ದೇಬಿಹಾಳ:** ಸಮಾಜದ ಅಂಕುಡೊಂಕುಗಳನ್ನು ತಿದ್ದುವಂತಹ ಸರಳ ಕೀರ್ತನೆಗಳನ್ನು ರಚಿಸಿ ಕನಕದಾಸರು ಸಾಮಾಜಿಕ ಸುಧಾರಣೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ.ಎಂದು ಸರೂರ ರೇವಣಸಿದ್ದೇಶ್ವರ ಗುರುಗಳು ಶ್ರೀ ಶೈಲ್ ಗುರುವಿನ ಹೇಳಿದರು.

ತಾಲ್ಲೂಕಿನ ಚವನಭಾವಿ ಗ್ರಾಮದಲ್ಲಿ ಮಂಗಳವಾರ ಭಕ್ತಶ್ರೇಷ್ಠ ಶ್ರೀ ಕನಕದಾಸರ 537ನೇ ಜಯಂತಿಯನ್ನು ಗ್ರಾಮದ ಶ್ರೀ ಕನಕ ದಾಸರ ವೃತ್ತಕ್ಕೆ ವಿಶೇಷ ಪೂಜೆ ಸಲ್ಲಿಸಿ ಧ್ವಜಾರೋಹಣ ಮಾಡಿ ಅದ್ದೂರಿಯಾಗಿ ಆಚರಣೆ ಮಾಡಿ ಅವರ ಮಾತನಾಡಿ,

ಸಾಮಾಜಿಕ ಅಸಮಾನತೆ ತಾಂಡವವಾಡುತ್ತಿದ್ದ ಅಂದಿನ ಕಾಲಘಟ್ಟದಲ್ಲಿಜನರಿಗೆ ಅರ್ಥವಾಗುವ ಸರಳ ಭಾಷೆಯಲ್ಲಿ ಕೀರ್ತನೆಗಳನ್ನು ರಚಿಸಿ ಜನರನ್ನು ಬಡಿದೆಚ್ಚರಿಸಿದ ಕನಕದಾಸರು ಮನು ಕುಲದ ಒಳಿತಿಗೆ ದುಡಿದ ಮಹಾನ್ ಸಾಧಕರಾಗಿದ್ದಾರೆ. ಶತಮಾನದಲ್ಲಿ ಕನಕದಾಸರು ಅದೇ ದಾರಿಯಲ್ಲಿ ಜನರನ್ನು ಮುನ್ನೆಡೆಸಿದರು. ಕನಕದಾಸರ ಜೀವನ ಚರಿತ್ರೆಯನ್ನಾಧರಿಸಿದ 'ಭಕ್ತ ಕನಕದಾಸ' ಆ ಮೂಲಕ ಕನಕದಾಸರು ಜನ ಮಾನಸದಲ್ಲಿ ಅಚ್ಚಳಿಯದೇ ಚಿರಸ್ಥಾಯಿಯಾಗಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಕನಕ ದಾಸರ ಅಭಿಮಾನಿಗಳಾದ ಹುಲಗಪ್ಪ ನಾಲತವಾಡ, ಬಸಲಿಂಗಪ್ಪ ನಾಲತವಾಡ, ರೇವಣಪ್ಪ ಹಂಚಿನಾಳ, ಜಕ್ಕಪ್ಪ ನಾಲತವಾಡ, ರಾಯಪ್ಪ ಮದರಿ, ಗಂಗಪ್ಪ ಮುಲಿಮನಿ, ಹಣಮಂತ ಬಿರಾದಾರ, ಆಂಜನೇಯ ಪಾವಾರ, ಅಂಬ್ರೇಶ ನಾಲತವಾಡ, ಹಣಮಂತ ನಾಲತವಾಡ, ಬಸಪ್ಪ ನಾಲತವಾಡ, ಜುಮ್ಮಣ್ಣ ಕಾರಕೂರ, ಸುರೇಶ್ ಸೋಮನಾಳ, ಸಿದ್ದಪ್ಪ ಗುರಿಕಾರ,- ಅಂಬ್ರೇಶ ಹಂಚಿನಾಳ, ಗಂಗಪ್ಪ ನಾಯ್ಕೋಡಿ, ಭೀರಪ್ಪ ಸೋಮುನಾಳ, ಮಲ್ಲಪ್ಪ ಹಂಚಿನಾಳ, ಸೋಮು ಜಂಗಡಬಾವಿ, ಲಕ್ಷ್ಮಣ ಮದರಿ, ಶ್ರೀ ಕನಕ ದಾಸರ ಜಯಂತಿ ಆಚರಣೆಯಲ್ಲಿ ಚವನಭಾವಿ ಗ್ರಾಮಸ್ಥರು ಉಪಸ್ಥಿತರಿದ್ದರು.

### ಚೂರು-ಪಾರು

## ಪ್ರಸ್ತಾವನೆ ಆಹ್ವಾನ

**ಗದಗ** : 2024-25 ನೇ ಸಾಲಿಗೆ ನೇಕಾರರ ವಿಶೇಷ ಪ್ಯಾಕೇಜ್ ಯೋಜನೆಯ ವಿಶೇಷ ಘಟಕ/ ಗಿರಿಜನ ಉಪಯೋಜನೆಯಡಿಯ ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಸಣ್ಣ ಮತ್ತು ಅತೀ ಸಣ್ಣ ಎಸ್.ಎಮ್.ಇ. ಘಟಕ ಸ್ಥಾಪನೆಗೆ ಸಹಾಯಧನ ನೀಡುವ ಯೋಜನೆಗೆ ಸಂಬಂಧಿಸಿದಂತೆ ಗದಗ ಜಿಲ್ಲೆಗೆ ವಿಶೇಷ ಘಟಕ ಯೋಜನೆಯಡಿ ಭೌತಿಕ ಗುರಿ ನಿಗದಿಪಡಿಸಲಾಗಿದೆ. ಅದರಂತೆ ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಸಣ್ಣ ಮತ್ತು ಅತೀ ಸಣ್ಣ ಎಸ್.ಎಮ್.ಇ. ಘಟಕ ಸ್ಥಾಪಿಸಲು ಇಚ್ಚಿಸಿರುವ ಪರಿಶಿಷ್ಟ ಜಾತಿ ಫಲಾನುಭವಿಗಳು ನವೆಂಬರ್ 30 ರೊಳಗಾಗಿ ಉಪನಿರ್ದೇಶಕರ ಕಚೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್, ಗದಗ ಈ ಕಚೇರಿಗೆ ಪ್ರಸ್ತಾವನೆಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ಕೊಠಡಿ ಸಂಖ್ಯೆ 206 ಜಿಲ್ಲಾ ಪಂಚಾಯತ್ ಕಚೇರಿಯನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ.

## ಅರ್ಜಿ ಆಹ್ವಾನ

**ಗದಗ** : ಗದಗ ಜಿಲ್ಲಾ ಪಂಚಾಯತ್‌ನ ಸ್ವಚ್ಛ ಭಾರತ ಮಿಷನ್ ( ಗ್ರಾ) ಯೋಜನೆಯಡಿ ಗದಗ ಜಿಲ್ಲೆಗೆ ಮಂಜೂರಾಗಿರುವ ಜಿಲ್ಲಾ ಎಂ. ಐ.ಎಸ್. ಸಮಾಲೋಚಕರ ಖಾಲಿ ಇರುವ ಹುದ್ದೆಯನ್ನು ಭರ್ತಿ ಮಾಡುವ ಬಗ್ಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆನ್‌ಲೈನ್ ಮೂಲಕ ಕರೆಯಲಾಗಿದೆ. ಆಸಕ್ತ ಅಭ್ಯರ್ಥಿಗಳು ತಮ್ಮ ಅರ್ಜಿಗಳನ್ನು ನಿಗದಿತ ಅವಧಿಯೊಳಗೆ ಆನ್‌ಲೈನ್ ಮೂಲಕ www.gadag.nic.in ವೆಬ್ ಸೈಟ್ ನಲ್ಲಿ ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ಡಿಸೆಂಬರ್ 5 ಕೊನೆಯ ದಿನವಾಗಿದೆ. ಅಭ್ಯರ್ಥಿಗಳ ದಾಖಲಾತಿಗಳ ಪರಿಶೀಲನೆ ದಿನಾಂಕ ಡಿಸೆಂಬರ್ 9 ಆಗಿದ್ದು ಮೆರಿಟ್ ಪಟ್ಟಿಗೆ ಆಕ್ಷೇಪಣೆಯನ್ನು ಡಿಸೆಂಬರ್ 16 ರಂದು ಸಲ್ಲಿಸಬಹುದಾಗಿದೆ. ಅಂತಿಮ ಆಯ್ಕೆ ಪಟ್ಟಿಯನ್ನು ಡಿಸೆಂಬರ್ 17 ರಂದು ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ www.gadag.nic.in ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸುವ ಕುರಿತು ಹೆಚ್ಚಿನ ಮಾಹಿತಿಗಾಗಿ ಮಂಜುನಾಥ ಭಜಂತ್ರಿ ದೂರವಾಣಿ ಸಂಖ್ಯೆ 9632128173 ಸಂಪರ್ಕಿಸಬಹುದಾಗಿದೆ.

## ಗದಗ ಬೆಟಗೇರಿ ನಗರದ ವಿವಿಧೆಡೆ ನೀರು ಪೂರೈಕೆ

**ಗದಗ** : ಗದಗ ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ನವೆಂಬರ್ 21 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ: ವಾರ್ಡ್ 30, 31, 32 – ದಾಸರ ಓಣಿ, ಭಜಂತ್ರಿ ಓಣಿ, ಚಿಕ್ಕಲಿಗಾರ ಓಣಿ, ಯಲ್ಲಮ್ಮನ ಗುಡಿ, ತ್ರಿಕೋಟೇಶ್ವರ ಗುಡಿ ರಸ್ತೆ, ಜೋಡ ಮಾರುತಿ ಗುಡಿ ಲೈನ, ಹಳೆ ಕಚೇರಿ ರಸ್ತೆ, ಗುಜ್ಜರಬಸ್ತಿ, ಜಂಡಾ ಕಟ್ಟಿ, ಕಿಲ್ಲಾ, ರಂಗನವಾಡ, 76 ಪ್ಲಾಟ, ಹುಬ್ಬಳ್ಳಿ ಲೇಔಟ, ಹನುಮಂತರವರ ಲೈನ, ಸಾಲ ಮನೆ, 8 ನಂಬರ ಶಾಲೆ ಉಳಿದ ಕೆಲವು ಭಾಗಗಳು. ವಾರ್ಡ್ 33 – ಜಾಕಿರ ಹುಸೇನ ಕಾಲೋನಿ, ಕೇಶವ ನಗರ, ಬ್ಯಾಂಕರ್ಸ ಕಾಲೋನಿ ಉಳಿದ ಕೆಲವು ಭಾಗಗಳು. ವಾರ್ಡ್ 22 – ಅಮರೇಶ್ವರ ನಗರ ಉಳಿದ ಕೆಲವು ಭಾಗಗಳು. ವಾರ್ಡ್ 11 – ಶಿವಬಸವ ನಗರ, ಗಾಣಿಗೇರ ಭವನ, ಹನುಮಂತ ದೇವರ ಗುಡಿ, ಕಾಶಿ ವಿಶ್ವನಾಥ ಮಂದಿರ, ಗಣಪತಿ ಕಟ್ಟಿ ಉಳಿದ ಕೆಲವು ಭಾಗಗಳು. ವಾರ್ಡ್ 16 – ಡಿ ಸಿ ಮಿಲ ರಸ್ತೆ. ವಾರ್ಡ್ 30, 27 – ಕಾಶಿ ವಿಶ್ವನಾಥನಗರ, ಅಸೂಟಿಯವರ ಲೈನ, ಹನುಮಂತ ದೇವರ ಗುಡಿ, ಕಣವಿಯವರ ಲೈನ, ದುರ್ಗಮ್ಮ ಗುಡಿ, ಮಾಳಕೋಟೇಶ್ವರ ಗುಡಿ, ವಿ ಆರ ಎಲ ಆಫೀಸ, ರೋಣದವರ ಲೈನ, ಕೇಶವ ನಗರ, ಸಂಕಣ್ಣವರ ಲೈನ ಎಸ ಪಿ ಆಫೀಸ, ಸಂಬಾಪುರ ರಸ್ತೆ, ಪೊಲೀಸ ಕ್ವಾರ್ಟರ್ಸ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನ.21ರಂದು ನೀರಾವರಿ ಸಲಹಾ ಸಮಿತಿ ಸಭೆ

**ಕೊಪ್ಪಳ** : ತುಂಗಭದ್ರಾ ಜಲಾಶಯದ ಹಿಂಗಾರು ಹಂಗಾಮಿಗೆ ಲಭ್ಯವಾಗುವ ನೀರನ್ನು ಒದಗಿಸುವ ಕುರಿತು ನಿರ್ಣಯಿಸಲು ತುಂಗಭದ್ರಾ ಯೋಜನೆಯ ಮತ್ತು ವಿಜಯನಗರ ಕಾಲುವೆಗಳ 122ನೇ ನೀರಾವರಿ ಸಲಹಾ ಸಮಿತಿ ಸಭೆಯನ್ನು ನವೆಂಬರ್ 21ರಂದು ಮಧ್ಯಾಹ್ನ 3.30 ಗಂಟೆಗೆ ಬೆಂಗಳೂರಿನ ವಿಕಾಸ ಸೌಧ 4ನೇ ಮಹಡಿಯ ಕೊಠಡಿ ಸಂಖ್ಯೆ:419ರ ಸಮ್ಮೇಳನ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ನೀರಾವರಿ ಸಲಹಾ ಸಮಿತಿ ಅಧ್ಯಕ್ಷರು ಆಗಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್ ತಂಗಡಗಿ ಅವರು ಸಭೆಯ ಅಧ್ಯಕ್ಷತೆ ವಹಿಸುವರು.

ಕೊಪ್ಪಳ, ವಿಜಯನಗರ, ಬಳ್ಳಾರಿ ಹಾಗೂ ರಾಯಚೂರು ಜಿಲ್ಲೆಗಳ ಸಚಿವರುಗಳು, ಲೋಕಸಭಾ, ವಿಧಾನಸಭಾ, ವಿಧಾನ ಪರಿಷತ್ ಮತ್ತು ರಾಜ್ಯಸಭಾ ಸದಸ್ಯರುಗಳು ಹಾಗೂ ನೀರಾವರಿ ಸಲಹಾ ಸಮಿತಿಯ ಸದಸ್ಯರುಗಳು ಈ ಸಭೆಗೆ ಆಗಮಿಸಿ ತಮ್ಮ ಸಲಹೆ, ಸೂಚನೆಗಳನ್ನು ನೀಡಬೇಕು ಎಂದು ತುಂಗಭದ್ರಾ ಯೋಜನಾ ವೃತ್ತ ಮುನಿರಾಬಾದ್‌ನ ಅಧೀಕ್ಷಕ ಅಭಿಯಂತರರು ಹಾಗೂ ತುಂಗಭದ್ರಾ ಯೋಜನೆ ಮತ್ತು ವಿಜಯನಗರ ಕಾಲುವೆಗಳ ನೀರಾವರಿ ಸಲಹಾ ಸಮಿತಿ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುರಗೋಡ ಪಟ್ಟಣ ತಾಲೂಕು ಕೇಂದ್ರ ಎಂದು ಘೋಷಿಸಲು ಆಗ್ರಹಿಸಿ ಕರವೇ- ವಿವಿಧ ಸಂಘಟನೆಗಳ ಬೃಹತ್ ಪ್ರತಿಭಟನೆ



**ಯರಗಟ್ಟಿ:** ಸಮೀಪದ ಮುರಗೋಡ ಪಟ್ಟಣವನ್ನು ತಾಲೂಕು ಕೇಂದ್ರ ಎಂದು ಘೋಷಿಸಲು ಆಗ್ರಹಿಸಿ ಕರವೇ ಹಾಗೂ ವಿವಿಧ ಸಂಘಟನೆಗಳ ಸಹಭಾಗಿತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಮುರಗೋಡ ತಾಲೂಕು ಹೋರಾಟ ಸಮಿತಿಯ ಯುವ ಘಟಕದಿಂದ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಕನ್ನಡಪರ ದಲಿತಪರ ಮತ್ತು ರೈತಪರ ಸೇರಿದಂತೆ ಅನೇಕ ಸಂಘಟನೆಗಳು ಭಾಗವಹಿಸಿದ್ದವು.

ಪಟ್ಟಣದ ಮಹಾಂತೇಶ್ವರ ವೃತ್ತದಲ್ಲಿ ಜಮಾಯಿಸಿದ ಸಾವಿರಕ್ಕೂ ಹೆಚ್ಚು ಜನ ಹೋರಾಟಗಾರರು ಸರ್ಕಾರದ ವಿಳಂಬ ಧೋರಣೆಯನ್ನು ಖಂಡಿಸಿ ಘೋಷಣೆಗಳನ್ನು ಕೂಗಿದರು.ಈ ಸಂದರ್ಭದಲ್ಲಿ ಅನೇಕ ಮುಖಂಡರು ಮಾತನಾಡಿ, ನಾವು 42 ವರ್ಷಗಳಿಂದ ಹೋರಾಟ ಮಾಡುತ್ತಾ ಮುರಗೋಡ ತಾಲೂಕು ಎಂದು ಘೋಷಣೆ ಮಾಡಲು ಒತ್ತಾಯಿಸುತ್ತಿದ್ದೇವೆ. ಈಗ ಕರವೇ ಘಟಕದ ನೇತೃತ್ವದಲ್ಲಿ ಹೋರಾಟ ಆರಂಭಿಸಿದ್ದು ಶೀಘ್ರದಲ್ಲಿ ಮುರಗೋಡ ತಾಲೂಕು ಎಂದು ಘೋಷಿಸದಿದ್ದಲ್ಲಿ ಬೆಳಗಾವಿವರೆಗೆ ಪಾದಯಾತ್ರೆ ನಡೆಸಿ ಜೊತೆಗೆ ಅಧಿವೇಶನದಲ್ಲಿಯೇ ವಿಧಾನಸೌಧ ಮುತ್ತಿಗೆ ಹಾಕುವುದಾಗಿ ಎಚ್ಚರಿಸಿದ ಕರವೇ ಅಧ್ಯಕ್ಷ ಉದಯಕುಮಾರ ಚಿಕ್ಕಣ್ಣವರ ಆಗ್ರಹಿಸಿದರು. ಪ್ರತಿಭಟನೆಯಿಂದ ಕೆಳಹೊತ್ತು ರಸ್ತೆ ತಡೆದ ಪರಿಣಾಮ ಟ್ರಾಫಿಕ್ ಜಾಮ್ ಆಯ್ತು ಪ್ರಯಾಣಿಕರು ಪರದಾಡುವ ಸ್ಥಿತಿ ನಿರ್ಮಾಣವಾಯಿತು.

ಈ ವೇಳೆ ಮುರಗೋಡ ಶ್ರೀಮಠದ ಪೂಜ್ಯ ನೀಲಕಂಠ ಮಹಾಸ್ವಾಮಿಗಳು ಸವದತ್ತಿ ತಹಶಿಲ್ದಾರ ಮಲ್ಲಿಕಾರ್ಜುನ ಹೆಗ್ಗನ್ನವರ,

ತಾಲೂಕ ಆರೋಗ್ಯ ಅಧಿಕಾರಿ ಶ್ರೀಪಾದ್ ಸಬನೆಸ್,

ಬೈಲಹೊಂಗಲ ಲೋಕೋಪಯೋಗಿ ಇಲಾಖೆಯ ಎಇಇ ಬಸವರಾಜ ಹಾಲಗಿ, ಸವದತ್ತಿ ಸಿಪಿಐ ಧರ್ಮಾಕರ ಧರ್ಮಟ್ಟಿ, ಮುರಗೋಡ ತಹಶಿಲ್ದಾರ ಡಿ. ಬಿ. ಅಲ್ಲಯ್ಯನವರಮಠ, ಪಿ.ಡಿ.ಓ ಆರ್. ಎಲ್. ಬಾಗಿಲದ ಇನ್ನೂ ಹಲವಾರು ತಾಲೂಕು ಮಟ್ಟದ ಅಧಿಕಾರಿಗಳು ಈ ಹೋರಾಟದ ಸ್ಥಳಕ್ಕೆ ಬೇಟಿ ನೀಡಿ ಮನವಿಯನ್ನು ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಭೀಮಶಿ ಕಿವಡಿ, ಕಿರಣ ಸಂಪಗಾಂವ, ಶೇಖರ ಸಣ್ಣಕಲ್ಲ, ಗಿರೀಶ ಆಳಾಜ, ಯುಸುಫ್ ಬಾಗೇವಾಡಿ, ದೀಪಕ ಬಾಳಿಕಾಯಿ, ಆದಿತ್ಯಾ ಬಾಳಿಕಾಯಿ, ಮುತ್ತು ಚಿಣ್ಣನ್ನವರ, ಮಲ್ಲು ಮಲ್ಲಕಾಜನವರ, ನಾಗರಾಜ ಹುಡೇದ, ಪ್ರಕಾಶ ಮನವಳ್ಳಿ, ಮಹಾಂತೇಶ ದೊಡ್ಡವಾಡ, ಮಹಾಂತೇಶ ಬಡಿಗೇರ, ಸಾಧಿಕ್ ಸೂಣದೋಳಿ, ಸಾದ್ ಕಿತ್ತೂರು ಸೇರಿದಂತೆ ಹಲವಾರು ಕರವೇ ಕಾರ್ಯಕರ್ತರು ಇದ್ದರು.

## ದೇಶದ ಪ್ರಗತಿಯಲ್ಲಿ ಯುವಕರ ಪಾತ್ರ ಮಹತ್ವದ್ದು : ಕೊಪ್ಪದ



**ಜಮಖಂಡಿ:** ದೇಶದ ಪ್ರಗ್ರತಿಯಲ್ಲಿ ವಿದ್ಯಾರ್ಥಿಗಳ ಪಾತ್ರ ಬಹಳ ಮಹತ್ವಾಗಿದೆ ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡುವದರೊಂದಿಗೆ ಯೋಗ್ಯವಾದ ವ್ಯಕ್ತಿಯನ್ನು ಅಯ್ಕೆ ಮಾಡಬೇಕು ಎಂದು ಹುನ್ನೂರಿನ ಸರಕಾರಿ ಪ.ಪೂ. ಕಾಲೇಜು ಉಪನ್ಯಾಸಕ ಎಂ.ಎಸ್.ಕೊಪ್ಪದ ಹೇಳಿದರು.

ತಾಲೂಕಿನ ಮಧುರಖಂಡಿ ಗ್ರಾಮದ ಬೀರಸಿದ್ದೇಶರ ದೇವಸ್ಥಾನದಲ್ಲಿ ಬಾಲಕರ ಸರಕಾರಿ ಪ.ಭಾ. ಪದವಿ ಪೂರ್ವ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ಶಿಬಿರದಲ್ಲಿ ಮಾತನಾಡಿದರು.

ಡಾ. ಲಿಂಗಾನಂದ ಗವಿಮಠ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ಶಿಬಿರಾಧಿಕಾರಿ ಐ.ಎಸ್.ಹೆಬ್ಬಾಳ, ಉಪನ್ಯಾಸಕ ಶ್ರೀಕಾಂತ ಮಾದರ ಐ. ಎಮ್. ಕರಡಿ, ಸುನೀಲ ಕೋರೆ, ಶಂಕರ ಸಂಗಾನಟ್ಟಿ ಕೆ.ಎಸ್. ಪೂಜಾರಿ ಸಹಿತ ಹಲವರು ಇದ್ದರು.

## ಮಾಲಾಪೂರ ಪಿಕೆಪಿಎಸ್.ಗೆ ಅಧ್ಯಕ್ಷರಾಗಿ ಪಾಟೀಲ ಆಯ್ಕೆ



**ಮುಧೋಳ:** ತಾಲೂಕಿನ ಮಾಲಾಪೂರ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ನೂತನ ಅಧ್ಯಕ್ಷರಾಗಿ ಭೀಮನಗೌಡ ಪಾಟೀಲ, ಹಾಗೂ ಉಪಾಧ್ಯಕ್ಷರಾಗಿ ಮಾರುತಿ ಕದಂ ಅವರು ಅವಿರೋಧ ಆಯ್ಕೆಯಾಗಿದ್ದಾರೆ ಎಂದು ಚುನಾನಾವಣಾ ಅಧಿಕಾರಿ ಸಂಜಯ ಲಾಳಗೆ ಹಾಗೂ ಸಂಘದ ಸಿಇಓ. ಸದಾಶಿವ ತಳವಾರ ತಿಳಿಸಿದ್ದಾರೆ.

ಸಂಘದ ಆಡಳಿತ ಮಂಡಳಿಯ ಸದಸ್ಯರು, ಗ್ರಾಮದ ಹಿರಿಯ, ಆರ್.ಎಂ. ಪಾಟೀಲ, ಐ.ಬಿ. ಯಂಕಾಚಿ, ಎಚ್.ಎಸ್. ಹಿರೇಮಠ, ಎಸ್.ಸಿ. ಪಾಟೀಲ, ರಾವಸಾಹೇಬ ಪಾಟೀಲ, ಎಸ್ .ಎಸ್.ಟಿಕಿ9, ಎಸ್.ಪಿ. ಘಟ್ನಟ್ಟಿ ಇತರರಿದ್ದರು.

# ಕನಕದಾಸರ ಕೀರ್ತನೆಗಳು ಸಾರ್ವಕಾಲಿಕ: ಶಾಸಕ ಮಹಾಂತೇಶ ಕೌಜಲಗಿ



**ಬೈಲಹೊಂಗಲ ;** ಕುಲ ಕುಲ ಕುಲವೆಂದು ಹೊಡೆದಾಡದಿರಿ ಎಂದು ಸಮಾನತೆಯ ಸಂದೇಶ ಸಾರಿದ ದಾಸಶ್ರೇಷ್ಠ ಕನಕದಾಸರ ಕೀರ್ತನೆಗಳು ಸಾರ್ವಕಾಲಿಕವಾಗಿವೆ ಎಂದು ಶಾಸಕ ಮಹಾಂತೇಶ ಕೌಜಲಗಿ ಹೇಳಿದರು.

ಪಟ್ಟಣದ ಕುರುಬರ ಗಲ್ಲಿಯಲ್ಲಿನ ಶ್ರೀ ಬೀರದೇವರ ದೇವಸ್ಥಾನದಲ್ಲಿ ಕನಕದಾಸರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ತಿರುಪತಿ ತಿಮ್ಮಪ್ಪನ ವರ ಪ್ರಸಾದದಿಂದ ಜನಿಸಿದ ಕನಕದಾಸರು ಸಮಾಜದಲ್ಲಿನ ಅಸಮಾನತೆ ನೀಗಲು 16 ನೇ ಶತಮಾನದಲ್ಲಿ ತಮ್ಮ ಕೀರ್ತನೆಗಳ ಮೂಲಕ ಸಮಾಜವನ್ನು ತಿದ್ದುವ ಮಹತ್ಕಾರ್ಯದಲ್ಲಿ ತೊಡಗಿಕೊಂಡಿದ್ದರು.

ಭಗವಂತನ ಸಾಕ್ಷಾತ್ಕಾರಕ್ಕೆ ಪಾತ್ರರಾಗಿದ್ದ ಕನಕರಿಗೆ ಉಡುಪಿಯಲ್ಲಿ ಶ್ರೀ ಕೃಷ್ಣ ಪರಮಾತ್ಮ ಗೋಡೆ ಒಡೆದು ದರ್ಶನ ನೀಡಿದ್ದ ಎಂಬುದನ್ನು ಈಗಲೂ ಕೂಡ ಉಡುಪಿಯಲ್ಲಿ ನೋಡಬಹುದಾಗಿದೆ.

ದಾಸರಲ್ಲಿಯೇ ಶ್ರೇಷ್ಠ ಎನಿಸಿರುವ ಕನಕದಾಸರ ಕೀರ್ತನೆಗಳು ಇಂದಿಗೂ ಎಂದೆಂದಿಗೂ ಸಾರ್ವಕಾಲಿಕವಾಗಿದ್ದು ಅವರ ಕೀರ್ತನೆಗಳಲ್ಲಿನ ಆದರ್ಶಗಳನ್ನು ಅಳವಡಿಸಿಕೊಂಡು ನಡೆದರೆ ಜೀವನ ಸಾರ್ಥಕವೆಂದು ತಿಳಿಸಿದರು.

ಪ್ರದೇಶ ಕುರುಬರ ಸಂಘದ ತಾಲೂಕು ಘಟಕದ ಅಧ್ಯಕ್ಷ ವಿಜಯಕುಮಾರ ದಳವಾಯಿ ಮಾತನಾಡಿ ಸಮಾಜದಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಈಗಾಗಲೇ ಗ್ರಾಮೀಣ ಮಟ್ಟದಿಂದ ಕುರುಬ ಸಮಾಜದ ಸಂಘಟನೆ ಮಾಡುವ ಕಾರ್ಯ ಜಾರಿಯಲ್ಲಿದೆ.

ಸಮಾಜದ ಮುಗ್ಧ ಜನರಿಗೆ ನ್ಯಾಯ ಒದಗಿಸಲು ಕರ್ನಾಟಕ ಪ್ರದೇಶ ಕುರುಬರ ಸಂಘ ಸದಾ ಸಿದ್ಧವಿದೆ ಎಂದು ಭರವಸೆ ನೀಡಿದರು.

ಪೂಜ್ಯ ಯಲ್ಲಪ್ಪಜ್ಜ ದಳವಾಯಿ,ಪುರಸಭೆ ಉಪಾಧ್ಯಕ್ಷ ಬುಡ್ಡೆಸಾಬ ಶಿರಸಂಗಿ, ಪುರಸಭೆ ಮುಖ್ಯಾಧಿಕಾರಿ ವೀರೇಶ ಹಸಬಿ, ಮಾಜಿ ಪುರಸಭೆ ಅಧ್ಯಕ್ಷ ಬಾಬು ಕೂಡಸೋಮಣ್ಣವರ,ಕನಕದಾಸ ಉತ್ಸವ ಸಮಿತಿ ಅಧ್ಯಕ್ಷ ಮುಖಂಡರಾದ ಲಕ್ಷ್ಮಣ ಸೋಮನಟ್ಟಿ ಮುಖಂಡರಾದ ಮಾರುತಿ ಇಂಗಳಗಿ, ಸುನೀಲ ಪಟಾತ, ಮಂಜುನಾಥ ಗೋವನಕೊಪ್ಪ,ಫಕ್ಕಿರಪ್ಪ ಕರಿಗಾರ,

ಸಿದ್ದಪ್ಪ ಗೋವನಕೊಪ್ಪ,ಚಂದ್ರು ಅಜ್ಜನಕಟ್ಟಿ,ಮಹಾಂತೇಶ ಗೋವನಕೊಪ್ಪ, ಮಹಾಂತೇಶ ದುಬ್ಬನಮರಡಿ ಸೇರಿದಂತೆ ತಹಸೀಲ್ದಾರ, ಪುರಸಭೆ ಕಾರ್ಯಾಲಯದ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ದರಪಟ್ಟಿ ಆಹ್ವಾನ

**ಗದಗ** : ಜಿಲ್ಲಾ ಪಂಚಾಯತ್ ಕಾರ್ಯಾಲಯದ ವಿವಿಧ ಶಾಖೆಗಳಿಗೆ ಅವಶ್ಯವಿರುವ ಲೇಖನಿ ಸಾಮಗ್ರಿಗಳು ಹಾಗೂ ಇತರೆ ಸಾಮಗ್ರಿಗಳು ಸೇರಿದಂತೆ ಒಂದು ವರ್ಷದ ಅವಧಿಗೆ ಪೂರೈಸಲು ಅಧಿಕೃತ ಮಾರಾಟಗಾರರು ಹಾಗೂ ಸರಬರಾಜುದಾರರಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದ.


ಅಧಿಕೃತ ಮಾರಾಟಗಾರರು ಹಾಗೂ ಸರಬರಾಜುದಾರರು ದರಪಟ್ಟಿಗಳನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಕಚೇರಿ, ಗದಗ ಇಲ್ಲಿ ನವೆಂಬರ್ 30 ರಂದು ಸಂಜೆ 5 ಗಂಟೆಯೊಳಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪಂಚಾಯತ್ ಕಾರ್ಯಾಲಯ, ಗದಗ ದೂರವಾಣಿ ಸಂಖ್ಯೆ 08372-234375 ಸಂಪರ್ಕಿಸಬಹುದಾಗಿದೆ.

# ಅಂಗಡಿಗಳನ್ನು ತೆರವುಗೊಳಿಸಿರುವದು ಸರಿಯಲ್ಲಾ-ಯಲ್ಲಪ್ಪ

**ತಾಳಿಕೋಟೆ** – ಪಟ್ಟಣದಲ್ಲಿ ಅತೀಕ್ರಮಣ ತೆರವು ಕಾರ್ಯಚರಣೆಯಲ್ಲಿ ಬಸ್ ನಿಲ್ದಾಣದ ಮುಂಭಾಗದ ಸಮಗಾರ ಸಮೂದಾಯದ ಬಡ ಕುಟುಂಭಗಳ ಅಂಗಡಿಗಳನ್ನು ತೆರವುಗೊಳಿಸಿರುವದು ಸರಿಯಲ್ಲಾವೆಂದು ಭಹುಜನ ಸಮಾಜ ಪಾರ್ಟಿಯ ರಾಜ್ಯ ಕಾರ್ಯದರ್ಶಿ ಹಾಗೂ ಕರ್ನಾಟಕ ರಾಜ್ಯ ಸಮಗಾರ ಹರಳಯ್ಯ ಸಂಘ ನಾಗರಾಬಾವಿಯ ಯಲ್ಲಪ್ಪ ಸನಕ್ಯಾನವರ ಅವರು ಹೇಳಿದರು.

ಮಂಗಳವಾರರಂದು ಪಟ್ಟಣದ ಬಸ್ ನಿಲ್ದಾಣದ ಮುಂಭಾಗದ 23 ಡಬ್ಬಾ ಅಂಗಡಿಕಾರರು ನಡೆಸುತ್ತಿರುವ ಧರಣಿ ಸತ್ಯಾಗ್ರಹದಲ್ಲಿ ಪಾಲ್ಗೊಂಡು ಮಾತನಾಡಿದ ಅವರು 65 ವರ್ಷಗಳ ಹಿಂದಿನಿಂದಲೂ ಡಬ್ಬಾ ಅಂಗಡಿಗಳನ್ನು ಇಟ್ಟುಕೊಂಡು ಕೆಲಸ ಮಾಡುತ್ತಿದ್ದರು ಈ ಅಂಗಡಿಕಾರರಿಗೆ ಹಿಂದೆಯೇ ಲಿಡ್ಕರ್ ಸ್ಕೀಮಿನಲ್ಲಿ ಅಂಗಡಿಗಳನ್ನು ಇಟ್ಟುಕೊಟ್ಟಿದ್ದಾರೆ ಅಂತಹ ಅಂಗಡಿಗಳನ್ನು ತೆರವುಗೊಳಿಸಬೇಕೆಂದರೆ 15ದಿನದ ಮುಂಚೆ ನೋಟೀಸು ಕೊಡಬೇಕು ಮತ್ತು ಅವರಿಗೆ ಪರ್ಯಾಯ ವ್ಯವಸ್ಥೆ ಮಾಡಿ ಅಂಗಡಿಗಳನ್ನು ತೆರವುಗೊಳಿಸಬೇಕೆಂಬ ನಿಯಮವಿದೆ ಆದರೆ ಅದ್ಯಾವುದನ್ನು ಲೆಕ್ಕಿಸದೇ ಪುರಸಭೆ ಅಧಿಕಾರಿಗಳು ಅತೀಕ್ರಮಣದ ತೆರವು ಕಾರ್ಯಚರಣೆಯಲ್ಲಿ ತೆರವುಗೊಳಿಸಿದ್ದಾರೆ ಈ ಡಬ್ಬಾ ಅಂಗಡಿಗಳನ್ನು ತೆರವು ಕಾರ್ಯಚರಣೆ ಸಮಯದಲ್ಲಿ ನ್ಯಾಯಾಲಯದ ತಡೆಯಾಜ್ಞೆಯನ್ನು ತೋರಿಸಿದರೂ ಕೂಡಾ ಅದ್ಯಾವುದನ್ನು ಲೆಕ್ಕಿಸದೇ ತೆರವುಗೊಳಿಸಿದ್ದಾರೆ ಅವರು ಕೈಕೊಂಡ ಅತೀಕ್ರಮಣ ತೆರವು ಕಾರ್ಯಚರಣೆಗೆ ನಮದೇನು ಅಬ್ಯಂತರವಿಲ್ಲಾ ಆದರೆ ಕಾನೂನಿನ ನಿಯಮದ ಮೂಲಕ ತೆರವುಗೊಳಿಸಬೇಕು ಅದೆಲ್ಲವನ್ನು ಇಲ್ಲಿ ಗಾಳಿಗೆ ತೋರಲಾಗಿದೆ ಎಂದು ಆರೋಪಿಸಿದರು.

ಇನ್ನೋರ್ವ ಕರ್ನಾಟಕ ರಾಜ್ಯ ಸಮಗಾರ ಹರಳಯ್ಯ ಸಂಘದ ಕಾರ್ಯಕಾರಿಣಿ ಸದಸ್ಯ ಅಶೋಕ ಸೌದಾಗರ ಅವರು ಮಾತನಾಡಿ ಸಮಗಾರ ಸಮಾಜದ 23 ಅಂಗಡಿಕಾರರು ಬಡ ಕುಟುಂಭದವರಾಗಿದ್ದಾರೆ ಅವರ ಅಂಗಡಿಗಳನ್ನು ಏಕಾ ಏಕಿ ತೆರವುಗೊಳಿಸಿರುವದು ಖಂಡನೀಯವಾಗಿದೆ ಎಂದ ಅವರು ಸಮಾಜ ಬಾಂದವರು ಇಂತಹ ಹೋರಾಟದಲ್ಲಿ ಒಗ್ಗಟ್ಟನ್ನು ಪ್ರದರ್ಶಿಸಬೇಕು ಎಂದ ಅವರು ಸರ್ಕಾರವು ಕೂಡಲೇ ಈ ಕುಟುಂಭಗಳಿಗೆ ಪರ್ಯಾಯ ವ್ಯವಸ್ಥೆ ಮಾಡಬೇಕು ಅವರ ಕುಟುಂಭದ ಸಹಾಯಕ್ಕೆ ಬರಬೇಕೆಂದು ಒತ್ತಾಯಿಸಿದರು.



ಇನ್ನೋರ್ವ ಕರವೇ ಸ್ವಾಭಿಮಾನಿ ಬಳಗದ ಮುಖಂಡ ಜಗದೇಶ ಸೂರ್ಯವಂಶಿ ಅವರು ಮಾತನಾಡಿ ಹರಳಯ್ಯ ಸಮಾಜದವರ ಮೇಲೆ ನಡೆದಿರುವದು ಬಹು ದೊಡ್ಡ ಅನ್ಯಾಯವಾಗಿದೆ ಈ ವಿಷಯ ಕುರಿತು ನಮ್ಮ ಸಂಘಟನೆಯ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸುತ್ತೇವೆ ಸರ್ಕಾರವು ಕೂಡಲೇ ಎಚ್ಚೆತ್ತುಕೊಳ್ಳದಿದ್ದರೆ ನಮ್ಮ ಸಂಘಟನೆಯ ರಾಜ್ಯಾಧ್ಯಕ್ಷರ ನಧುರಿಗೆ ಈ ವಿಷಯವನ್ನು ತಂದು ಹೋರಾಟದ ಹಾದಿ ಹಿಡಿಯುತ್ತೇವೆಂದರು.

ಕರ್ನಾಟಕ ರಾಜ್ಯ ಹರಳಯ್ಯ ಸಂಘದ ನಾಗರಭಾವಿಯ ಮಾಜಿ ಕಾರ್ಯದರ್ಶಿಯಾದ ವಸಂತ ಮನಗೂಳಿ, ಮುತ್ತಣ್ಣ ಕಬಾಡೆ ಅವರು ಮಾತನಾಡಿ ಹರಳಯ್ಯ ಸಮಾಜದ ಬಡ ಕುಟುಂಭದವರ ಅಂಗಡಿಗಳನ್ನು ತೆರವುಗೊಳಿಸಿರುವದು ಸರಿಯಲ್ಲಾ ದಲಿತರಿಗೆ ಅನ್ಯಾಯವಾದಾಗ ಎಲ್ಲರೂ ಬರಬೇಕು ಆದರೆ ಇಲ್ಲಿಯ ಜನರು ಲೀಡರ್‌ಗಳು ಮಾಡುತ್ತಿರುವದು ತುಂಬಾ ಅನ್ಯಾಯವಾಗಿದೆ ಇಲ್ಲಿಯ ದಲಿತ ಮುಖಂಡರು, ದಲಿತರೇ ದಲಿತರಿಗೆ ಅನ್ಯಾಯವಾದಾಗ ಬೆಂಬಲಕ್ಕೆ ನಿಲ್ಲುತ್ತಿಲ್ಲಾ ಕೆಲವು ಜನರು ಸಮಗಾರ ಸಮಾಜದ ಜನರು ಒಗ್ಗಟ್ಟಿಲ್ಲಾ ಈಗಾಗಿ ಅವರಿಗೆ ಬೆಂಬಲಕ್ಕೆ ನಿಲ್ಲುತ್ತಿಲ್ಲಾವೆಂದು ಹೇಳುತ್ತಿದ್ದಾರೆ ನಾವು ಎಲ್ಲ ಹೋರಾಟಗಳಲ್ಲಿಯೂ ಭಾಗಿಯಾಗುತ್ತಿದ್ದೇವೆ ನಮ್ಮ ದಲಿತರ ಒಂದು ಗುಂಪಿಗೆ ಅನ್ಯಾಯವಾದಾಗ ಇನ್ನೊಂದು ದಲಿತ ಬಾಂದವರು ಬರದಿರುವದು ತುಂಬಾ ಅನ್ಯಾಯ ವೆಸಗಿದಂತಾಗುತ್ತದೆ ಎಂದ ಅವರು ಮುಂದಿನ ದಿನಗಳಲ್ಲಿ ಹೋರಾಟದ ರೂಪ ರೇಶ ಬದಲಾಗಲಿದೆ ಎಂದರು.

ಇನ್ನೋರ್ವ ತಾಳಿಕೋಟೆ ಹರಳಯ್ಯ ಸಮಾಜದ ಮುಖಂಡ ರಾಘವೇಂದ್ರ ಬಿಜಾಪೂರ ಮಾತನಾಡಿ ಸಾರ್ವಜನಿಕರಿಗೆ ತೊಂದರೆಯಾಗಬಾರದೆಂಬ ಉದ್ದೇಶದಿಂದ ಹಿರಿಯ ಮಾರ್ಗದರ್ಶನದ ಮೇಲೆ ರಸ್ತೆಯ ಮೇಲಿನ ಹೋರಾಟವನ್ನು ಬಿಟ್ಟು ಫುಟ್‌ಪಾತ್ ಮೇಲೆ ಹೋರಾಟಕ್ಕೆ ಅಣಿಯಾಗಿದ್ದೇವೆ ನಮ್ಮ ಹೋರಾಟ ನ್ಯಾಯ ಸಿಗುವರೆಗೂ ನಡೆಯಲಿದೆ ಎಂದರು.

ಇದೇ ಸಮಯದಲ್ಲಿ ತಾಲೂಕಾ ತಹಶಿಲ್ದಾರ ಶ್ರೀಮತಿ ಕೀರ್ತಿ ಚಾಲಕ ಅವರಿಗೆ ಮನವಿ ಪತ್ರವನ್ನು ಸಲ್ಲಿಸಿದರು.

ಈ ಸಮಯದಲ್ಲಿ ಸಿದ್ದರಾಮಪ್ಪ ಹೊನ್ನಮೋರೆ, ಸಾಯಬಣ್ಣ ನಿರಂಜನ, ಮಲ್ಲೇಶಿ ಕಬಾಡೆ, ಶನಶಪ್ಪ ಪಂಡರಪೂರ, ಆನಂದ ಕುಂದರಗಿ, ಲಕ್ಷ್ಮಣ ವಿಜಾಪೂರ, ಕೃಷ್ಣಾ ಮಬ್ರುಮಕರ, ಚಂದ್ರಶೇಖರ ವಿಜಾಪೂರ, ರಾಜು ವಿಜಾಪೂರ, ಕಾಶಿನಾಥ ಮಬ್ರುಮಕರ, ಜಗದೀಶ ವಿಜಾಪೂರ, ಪರಶುರಾಮ ವಿಜಾಪೂರ, ರಾಮಕೃಷ್ಣ ವಿಜಾಪೂರ, ಬಸವರಾಜ ವಿಜಾಪೂರ, ಗೋಪಾಲ ವಿಜಾಪೂರ, ನಾಗರಾಜ ವಿಜಾಪೂರ, ಮೊದಲಾದವರು ಇದ್ದರು.

# ಕಂಪ್ಯೂಟರ್ ವಿಷನ್ ಸಿಂಡ್ರೋಮ್ ಎಂದು ಕರೆಯಲ್ಪಡುವ "ಡಿಜಿಟಲ್ ಐ ಸ್ಟ್ರೇನ್" ಕುರಿತು ಎಚ್ಚರವಿರಲಿ



ಇಂದಿನ ಡಿಜಿಟಲ್ ಯುಗದಲ್ಲಿ ಲ್ಯಾಪ್‌ಟಾಪ್, ಕಂಪ್ಯೂಟರ್, ಮೋಬೈಲ್ ಫೋನ್‌ಗಳು ನಮ್ಮ ದೈನಂದಿನ ಜೀವನದ ಅವಿಭಾಜ್ಯ ಅಂಗವಾಗಿವೆ. ಈ ಆಧುನಿಕ ಜೀವನಶೈಲಿಯಲ್ಲಿ ಕುಳಿತಲ್ಲಿಂದಲೇ ಎಲ್ಲಾ ಕಾರ್ಯವನ್ನು ಒಂದು ಟಚ್ ಮೂಲಕ ಮಾಡಬಹುದು.

ಈ ಕಾರಣಕ್ಕಾಗಿಯೇ ಮೋಬೈಲ್ ಬಳಕೆದಾರರ ಸಂಖ್ಯೆ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದೆ. ಇತ್ತೀಚಿನ ದಿನಗಳಲ್ಲಿ ಮೋಬೈಲ್ ಸೇರಿದಂತೆ ಇಲೆಕ್ಟ್ರಾನಿಕ್ ಸಾಧನಗಳ ಬಳಕೆ ಅತಿಯಾಗಿ, ಸಮಾಜದ ಎಲ್ಲಾ ವರ್ಗದ ಜನರು ಒಂದಿಲ್ಲೊಂದು ದೈಹಿಕ ಸಮಸ್ಯಗಳಿಂದ ಬಳಲುತ್ತಿರುವುದನ್ನ ಕಾಣುತ್ತಿದ್ದೇವೆ.

ಪಾಶ್ಚಾತ್ಯ ಸಂಸ್ಕøತಿಯನ್ನು ನಮ್ಮ ದೇಶದ ಯುವಕರು ಹೆಚ್ಚು ಇಷ್ಟಪಡುತ್ತಿರುವುದೇ ಈ ಸಮಸ್ಯಗಳಿಗೆಲ್ಲ ಕಾರಣ. ಮುಖ್ಯವಾಗಿ ಐ.ಟಿ, ಬಿಟಿ, ಕಾಲ್ ಸೆಂಟರ್ ಕೆಲಸಗಳು, ಯುವಕರಲ್ಲಿ ಮಾನಸಿಕ ಒತ್ತಡವನ್ನು ಹೆಚ್ಚಿಸುತ್ತಿವೆ. ರಾತ್ರಿ ಹಗಲಾಗಿ, ಹಗಲು ರಾತ್ರಿಯಾಗಿ, ಹೊತ್ತಿಲ್ಲದ ಹೊತ್ತಿನಲ್ಲಿ ನಿದ್ರೆ, ಕೆಲಸ ಮತ್ತು ಆಹಾರ ಸೇವನೆಯಿಂದ ಬೊಜ್ಜು, ಮಧುಮೇಹ ಮೊದಲಾದ ಸಮಸ್ಯಗಳಿಗೆ ಬಲಿಯಾಗುತ್ತಿದ್ದಾರೆ.

ದೇಶದ ಜೀವಾಳ ಎಂದೇ ಪರಿಗಣಿಸಲ್ಪಡುವ ಯುವಶಕ್ತಿ ರೋಗಗಳ ಗೂಡಾಗುತ್ತಿದೆ. ಸಾಮಾನ್ಯವಾಗಿ 40 ವರ್ಷದ ನಂತರ ಕಾಣಿಸಿಕೊಳ್ಳುತ್ತಿದ್ದ ಸಮಸ್ಯಗಳೆಲ್ಲ ಇಂದು 20 ವರ್ಷದ ಯುವಕರಲ್ಲಿ ಕಾಣಿಸಿಕೊಳ್ಳುತ್ತಿವೆ. ಯುವಕರಲ್ಲಿ ಆರೋಗ್ಯದ ಬಗ್ಗೆ ಕಾಳಜಿ ಕಡಿಮೆಯಾಗುತ್ತಿದೆ.

ಯುವ ಜನರಲ್ಲಿ ಡಿಜಿಟಲ್ ಗೀಳು ಹೆಚ್ಚಾಗಿ ಪದೆ ಪದೆ ವಾಟ್ಸ್‌ಆ್ಯಪ್ ತೆರೆಯುವುದು, ತುಂಬಾ ಹೊತ್ತು ಇ-ಮೇಲ್ ನೋಡದಿದ್ದರೆ ಚಡಪಡಿಸುವದು. ಮೋಬೈಲ್‌ಗಳಲ್ಲಿ ಹೆಚ್ಚುಹೊತ್ತು ರೀಲ್ಸ್ ನೋಡುವುದು ಇತ್ಯಾದಿಗಳಿಂದ ಮಾನಸಿಕ ನೆಮ್ಮದಿಯನ್ನು ಕಳೆದುಕೊಂಡು, ಮಾನಸಿಕ ರೋಗಗಳು ಉದ್ಭವಿಸುತ್ತಿರುವುದನ್ನ ಕಾಣುತ್ತಿದ್ದೇವೆ. ನಿರಂತರ ಇ-ಮೇಲ್‌ಗಳು ಸಂದೇಶಗಳು ಮತ್ತು ಸಾಮಾಜಿಕ ಮಾಧ್ಯಮ ಅಪ್‌ಡೇಟಗಳ ನಿರಂತರ ಚಟುವಟಿಕೆಗಳು ನೆಮ್ಮದಿಯನ್ನು ಕಸಿಯುವದರಲ್ಲಿ ಎರಡು ಮಾತಿಲ್ಲ.

ಡಿಜಿಟಲ್ ಸಾಧನಗಳ ಅತಿಯಾದ ಬಳಕೆಯಿಂದ ನಿದ್ರಾಹೀನತೆ. ಅತಿ ಒತ್ತಡ ಮತ್ತು ಹದಗೆಡುವ ಮಾನಸಿಕ ಅನಾರೋಗ್ಯದಂಥ ಸಮಸ್ಯಗಳು ಸೃಷ್ಠಿಯಾಗುತ್ತಿವೆ. ದಿನನಿತ್ಯದ ಜೀವನದಲ್ಲಿ ಮೋಬೈಲ್ ಫೋನ್ ಸೇ-ರಿದಂತೆ ಇತರ ಇಲೆಕ್ಟ್ರಾನಿಕ್ ಸಾಧನಗಳು ಇಂದು ಜೀವನದಲ್ಲಿ ಅನಿವಾರ್ಯವಾಗಿರುವದು ನಿಜವಾದರೂ ಅವುಗಳ ಬಳಕೆ ಅತಿಯಾಗಿ, ಅತಿಯಾದ ಅಮೃತವು ವಿಷವೆಂಬಂತೆ ಮೋಬೈಲ್ ಎಷ್ಟು ಉಪಯುಕ್ತವೋ ಅಷ್ಟೇ ಅಪಾಯಕಾರಿಯಾಗಿದೆ.


ಈ ಕುರಿತಾಗಿ ಡಾ.ಕೋಡ್ಕನಿ ಕಣ್ಣಿನ ಆಸ್ಪತ್ರೆ ಬೆಳಗಾವಿಯ ಕಣ್ಣಿನ ಶಸ್ತ್ರಚಿಕಿತ್ಸಕ ತಜ್ಞವೈಧ್ಯ ಡಾ.ಆನಂದ ಪುರಾಣಿಕ್‌ಮಠ ಅವರು "ಡಿಜಿಟಲ್ ಐ ಸ್ಟ್ರೇನ್" ಕು-ರಿತಾಗಿ ಒಂದಿಷ್ಟು ಮಾಹಿತಿ ಹಾಗೂ ಸಲಹೆಗಳನ್ನು ನೀಡಿದ್ದಾರೆ. ಅದನ್ನು ವೈಧ್ಯಕೀಯ ಲೇಖನ ರೂಪದಲ್ಲಿ ಬರೆದು ಜನಸಾಮಾನ್ಯರಲ್ಲಿ ಅರಿವನ್ನು ಮೂಡಿಸುವ ಪ್ರಯತ್ನ ನನ್ನದು ಅಷ್ಟೆ.

ಡಾ.ಆನಂದ ಅವರು ಹೇಳುವಂತೆ ನಮ್ಮ ಪ್ರಪಂಚವು ಹಾಗೂ ತಂತ್ರಜ್ಞಾನ ಬುದ್ಧಿವಂತ ವ್ಯಕ್ತಿಗಳಿಂದ ತುಂಬಿದೆ ಎಂಬುವುದರಲ್ಲಿ ಎರಡು ಮಾತಿಲ್ಲ. ನಮ್ಮ ಆಧುನಿಕ ತಂತ್ರಜ್ಞಾನ ಸಾಧನಗಳ ಸಾಧಕ-ಬಾಧಕಗಳ ಕುರಿತು ಚರ್ಚಿಸುವುದು ಅಷ್ಟೆ ಅಗತ್ಯ. ಏಕೆಂದರೆ ಅವುಗಳಿಂದ ನಿರಂತರ ಹೊರಸೂಸುವ ವಿಕಿರಣ, ರೇಡಿಯೋ-ಫ್ರೀಕ್ವೆನ್ಸಿ ವಾತಾವರಣದಲ್ಲಿ ನಾಮ್ಮ ದೈನಂದಿನ ಜೀವನ ಸಾಗುತ್ತಿದ್ದು, ವಿಶೇಷವಾಗಿ ಮಕ್ಕಳ ಬೆಳವಣಿಗೆಯಲ್ಲಿ ಅವರ ಮೆದಳುಗಳು, ಮತ್ತು ಕಣ್ಣು ದೇಹಗಳು ವಿಕಿರಣದ ಪರಿಣಾಮಗಳಿಗೆ ಹೆಚ್ಚು ಒಳಗಾಗುತ್ತಿವೆ.


ಟಿ.ವಿ, ಕಂಪ್ಯೂಟರ್, ಲ್ಯಾಪ್‌ಟಾಪ್, ಮೊಬೈಲ್ ಫೋನ್‌ಗಳು, ಗೇಮಿಂಗ ಸಿಸ್ಟಮ್‌ಗಳಂತಹ ಎಲ್ಲಾ ಡಿಜಿಟಲ್ ಸಾಧನಗಳನ್ನು ದೀರ್ಘಕಾಲದವರೆಗೆ ಬಳಸಿದಾಗ ಅವುಗಳ ಪರದೆಯಿಂದ ಹೊರಸೂಸುವ ಕಿರಣಗಳಿಂದ ಕಣ್ಣುಗಳು ನಿರ್ದಿಷ್ಟ ಒತ್ತಡ ಹಾಗೂ ಆಯಾಸಕ್ಕೆ ಒಳಗಾಗಿ ಕಣ್ಣುಗಳು ಒಣಗುತ್ತವೆ, ಕೆಂಪಾಗುತ್ತವೆ, ಕಣ್ಣುಗಳಲ್ಲಿ ಉರಿಯ ಅನುಭವ, ದೃಷ್ಠಿ ಮಸಕಾಗುತ್ತದೆ. ಕುತ್ತಿಗೆ ಮತ್ತು ಭುಜದ ನೋವು, ಬೆನ್ನು ನೋವು, ತಲೆ ನೋವು ನಿದ್ರಾ ಹೀನತೆ, ನರದ ಸಮಸ್ಯೆ ಇತ್ಯಾದಿಗಳು ಸಂಭವಿಸಬಹುದು.

ಚಿಕ್ಕ ಮಕ್ಕಳು ಸಹ ಇಲೆಕ್ಟಾನಿಕ್ ಸಾಧನಗಳ ದಾಸರಾಗುತ್ತಿರುವುದು ಖೇದದ ಸಂಗತಿಯಾಗಿದ್ದು, ಜಡಸ್ವಭಾವನ್ನು ತಮ್ಮದಾಗಿಸಿಕೊಂಡು ದೈಹಿಕ ಚಟುವಟಿಕೆಗಳು ಇಲ್ಲದಂತಾಗಿವೆ.

ದೀರ್ಘಾವದಿ ಡಿಜಿಟಲ್ ಪರದೆಗಳನ್ನು ನೋಡುವುದರಿಂದ ಕಣ್ಣಿನ ಆಯಾಸ, ನಿಧಾನವಾಗಿ




ದೃಷ್ಟಿಗುಂದುತ್ತಾ ಹೋಗುವುದು ಮಸುಕಾದ ದೃಷ್ಟಿ ಮತ್ತು ತಲೆನೋವುಗಳಂತಹ ರೋಗಲಕ್ಷಣಗಳಿಗೆ ಕಾರಣವಾಗಬಹುದು. ಸಮೀಪ ದೃಷ್ಟಿಯ ಅಪಾಯವನ್ನು ಹೆಚ್ಚಿಸುತ್ತದೆ. ಸಣ್ಣ ವಯಸ್ಸಿನಲ್ಲಿಯೇ ಕನ್ನಡಕ ಬಳಸುವ ಅನಿವಾರ್ಯತೆ ಬರುತ್ತದೆ. ಅಲ್ಲದೆ ಡಿಜಿಟಲ್ ಸಾಧನಗಳನ್ನು ಬಳಸುವಾಗ ತಪ್ಪಾದ ಆಂಗಿಕ ಭಂಗಿಯನ್ನು ಅಭ್ಯಾಸ ಮಾಡುವುದರಿಂದ ಬೆನ್ನಿನ ಮತ್ತು ಕುತ್ತಗೆಯ ಸ್ನಾಯುಗಳಲ್ಲಿ ಬಿಗಿತ ಉಂಟಾಗಿ ಬೆನ್ನು ಬಾಗಿಸಿ ನಡೆಯುವುದು ಅಥವಾ ಭುಜಗಳನ್ನು ಇಳಿಬಿಟ್ಟಂತೆ ನಿಲ್ಲುವುದು ಸೇರಿದಂತೆ ಮುಂತಾದ ಆರೋಗ್ಯ ಸಮಸ್ಯ ಉದ್ಭವಿಸುತ್ತಿವೆ. ಸ್ಮಾರ್ಟ ಫೋನ್ ಬಳಕೆದಾರರಿಗೆ ಬೆನ್ನು ಹುರಿ, ಹಾಗೂ ಕುತ್ತಿಗೆ ನೋವು ಸಮಸ್ಯೆ ಹೆಚ್ಚಾಗಿ ಕಂಡುಬರುತ್ತಿದೆ ಎಂದು ಇತ್ತೀಚಿನ ಅಧ್ಯಯನ ವರದಿಯಿಂದ ತಿಳಿದುಬರುತ್ತದೆ.



ಈ ರೋಗ ಲಕ್ಷಣಗಳು ಕಡಿಮೆ ಬೆಳಕು, ಕಂಪ್ಯೂಟರ್ ಪರದೆಯ ಪ್ರಜ್ವಲಿಕೆ, ಉಪಯೋಗಿಸುವ ಇಲೆಕ್ಟ್ರಾನಿಕ್ ಸಾಧನಗಳಿಂದ ಅಸಮರ್ಪಕ ವೀಕ್ಷಣಾ ದೂರ, ಹಾಗೂ ಇಲೆಕ್ಟ್ರಾನಿಕ್ ಸಾಧನಗಳನ್ನು ಉಪಯೋಗಿಸುವಾಗ ಅಸಮರ್ಪಕ ಆಸನ ಭಂಗಿಗಳು ಮತ್ತು ದೃಷ್ಟಿ ಸಮಸ್ಯಗಳನ್ನು ನಿರ್ಲಕ್ಷಿಸುವುದರಿಂದ ಸಂಭವಿಸಬಹುದಾಗಿವೆ ಎಂದು ಡಾ.ಆನಂದ ಅವರು ಹೇಳುತ್ತಾರೆ.

ಮೋಬೈಲ್ ಫೋನ್ ಬಳಕೆಯ ಮತ್ತೊಂದು ಆತಂಕಕಾರಿ ಪರಿಣಾಮವೆಂದರೆ ಅದು ಅವರ ನಿದ್ರೆಯ ಮಾದರಿಗಳ ಮೇಲೆ ಪರಿಣಾಮ ಬೀರುತ್ತಿದ್ದು, ಈ ಸಾಧನಗಳು ಹೊರಸೂಸುವ ನೀಲಿ ಬೆಳಕು ನಿದ್ರೆಯನ್ನು ನಿಯಂತ್ರಿಸುವ ಹಾರ್ಮೋನ್ "ಮೆಲಟೋನಿನ್" ಉತ್ಪಾದನೆಯನ್ನು ಕಡಿಮೆ ಮಾಡುತ್ತದೆ.

ಮಲಗುವ ಮುನ್ನ ಮೋಬೈಲ್ ಫೋನ್ ಸೇರಿದಂತೆ ಡಿಜಿಟಲ್ ಸಾಧನಗಳನ್ನು ನಿರಂತರವಾಗಿ ಉಪಯೋಗಿಸುವುದರಿಂದ ಮನುಷ್ಯನ ನೈಸರ್ಗಿಕ ನಿದ್ರೆ-ಎಚ್ಚರ ಚಕ್ರಕ್ಕೆ ತೊಂದರೆಯಾಗಿ ನಿದ್ರಾಹೀನತೆ ಮತ್ತು ಹಗಲಿನ ಅರೆನಿದ್ರಾವಸ್ಥೆಗೆ ಕಾರಣವಾಗುತ್ತದೆ. ಮೋಬೈಲ್ ನಮಗೆ ಅವಶ್ಯಕವೆ ಹೊರತು ಅನಿವಾರ್ಯವಲ್ಲವೆಂದು ತಿಳಿಯುವುದು ಅವಶ್ಯ.

ಮೋಬೈಲ್ ಫೋನ್ ಚಟವನ್ನು ಹೊಂದಿರುವ ಯುವಕರು ಟಾಯ್ಲೆಟ್‌ಗೆ ತೆರಳುವಾಗ ಮೋಬೈಲ್ ಫೋನ್ ಕೊಂಡಯ್ಯುತ್ತಾರೆ. ಇದರಿಂದ ಟಾಯ್ಲೆಟ್‌ನಲ್ಲಿ ಅವಿತಿರುವ ಬ್ಯಾಕ್ಟೇರಿಯಾ ಮೋಬೈಲ್ ಮೂಲಕ ವ್ಯಕ್ತಿಯ ಮೇಲೆ ವೇಗವಾದ ಪರಿಣಾಮ ಬೀರುತ್ತವೆ.

ದೀರ್ಘಾವದಿ ಡಿಜಿಟಲ್ (ಪರದೆ) ಸಾಧನಗಳನ್ನು ಉಪಯೋಗಿಸುತ್ತಿದ್ದರೆ, ಕೆಲಸದಲ್ಲಿ ಪ್ರತಿ 20 ನಿಮಿಷಗಳಿಗಳ ಕಾಲ ಕೆಲಸ ಮಾಡಿದ ನಂತರ 20 ಸೆಕೆಂಡುಗಳ ಕಾಲ ದೃಷ್ಠಿಯನ್ನು ಬೇರೆಡೆಗೆ ತಿರುಗಿಸಿ ವಿರಾಮ ತೆಗೆದುಕೊಳ್ಳಿ ನಂತರ 20 ಅಡಿ ದೂರದಲ್ಲಿರುವ ಇತರ ವಸ್ತುಗಳನ್ನು 20 ಸೆಕೆಂಡುಗಳ ಕಾಲ ನೋಡಿ, ಹೀಗೆ ಮಾಡುವುದರಿಂದ ಕಣ್ಣಿನ ಸ್ನಾಯುಗಳು ಸಡಿಲಗೊಳ್ಳುತ್ತವೆ. ಇದರಿಂದ ಕಣ್ಣು ಆರೋಗ್ಯವಾಗಿರುತ್ತದೆ.

ಕಂಪ್ಯೂಟರ್/ಲ್ಯಾಪಟಾಪ್ ಪರದೆಗಳನ್ನು ತೋಳಿನ ಉದ್ದದಲ್ಲಿ ಇರಿಸಿ ಕಣ್ಣು ಮತ್ತು ಕಂಪ್ಯೂಟರ್‌ಗೆ ಕನಿಷ್ಟ 2 ಫೂಟುಗಳ ಅಂತರವಿರಲಿ.


ಮಾನಿಟರ್ ವೀಕ್ಷಣಾ ಕೋನವು ಅಂದಾಜು 35 ಡಿಗ್ರಿಗಳಾಗಿರಬೇಕು.

ಆಗಾಗ್ಗೆ ಕಣ್ಣನ್ನು ಮಿಟುಕಿಸಿ, ಕಣ್ಣನ್ನು ಮಿಟುಕಿಸಿದಾಗ ಕಣ್ಣಿನ ನಾಳಗಳು ಸ್ರವಿಸುವಿಕೆಯನ್ನು ಉತ್ಪಾದಿಸುವುದ-ರಿಂದ ಕಣ್ಣುಗಳು ತೇವವಾಗುತ್ತವೆ. ಹೀಗಾಗಿ ಕಣ್ಣಿನ ಶುಷ್ಕತೆಯನ್ನು ತಡೆಯುತ್ತದೆ.

ಪೋಷಕರು ಮಕ್ಕಳನ್ನು ಹೊರಾಂಗಣ ಚಟುವಟಿ-ಕೆಗಳು, ಕ್ರೀಡೆಗಳು ಮತ್ತು ವ್ಯಾಯಾಮಗಳಲ್ಲಿ ಭಾಗವಹಿಸಲು ಪ್ರೋತ್ಸಾಹಿಸುವುದು ಮುಖ್ಯವಾಗಿದ್ದು ಅದರಿಂದ ಮೋಬೈಲ್ ಫೋನ್ ಬಳಕೆಯನ್ನು ಮಿತಿಗೊಳಿಸಬಹುದಾಗಿದೆ.

6 ತಿಂಗಳುಗಳಿಗೊಮ್ಮೆ ತಜ್ಞ ವೈಧ್ಯರನ್ನು ಸಂಪರ್ಕಿಸಿ ಕಣ್ಣಿನ ತಪಾಸಣೆ ಮಾಡಿಸಿಕೊಳ್ಳಿರಿ. ತಜ್ಞ ವೈಧ್ಯರ ಸಲಹೆ ಮೇರೆಗೆ ಕೃತಕ ಕಣ್ಣೀರಿನ ಕಣ್ಣಿನ ಹನಿಗಳನ್ನು (ಔಷಧವನ್ನು) ಉಪಯೋಗಿಸಿ ಇದರಿಂದ ಕಣ್ಣುಗಳ ಶುಷ್ಕತೆಯನ್ನು ತಡೆಯಬಹುದು ಎಂದು ಡಾ.ಆನಂದ ಪುರಾಣಿಕ್‌ಮಠ , ಕಣ್ಣಿನ ಶಸ್ತ್ರಚಿಕಿತ್ಸಕ ತಜ್ಞವೈಧ್ಯ ಹೇಳುತ್ತಾರೆ.

ಮೋಬೈಲ್ ಫೋನ್, ಡಿಜಿಟಲ್ ಸಾಧನಗಳ ಉಪಯೋಗ ಇಂದು ಅನಿವಾರ್ಯವಾಗಿರುವುದು ಒಪ್ಪುವ ವಿಷಯವಾದರೂ ಅವುಗಳ ಅತಿಯಾದ/ನಿರಂತರ ಬಳಕೆಯಿಂದ ಆಗುವ ದುಷ್ಪರಿಣಾಮಗಳಚನ್ನು ತಗ್ಗಿಸಲು ದೈನಂದಿನ ಡಿಜಿಟಲ್ ಪರದೆಯ ಸಮಯವನ್ನು ಮಿತಿಗೊಳಿಸಿ ಆರೋಗ್ಯಕರ ಜೀವನ ಶೈಲಿಯನ್ನು ನಮ್ಮದಾಗಿಸಿಕೊಂಡು ಹೊಸ ತಂತ್ರಜ್ಞಾನದ ಉಪಯೋಗಗಳನ್ನು ಆನಂದಿಸಬಹುದು.



ಲೇಖಕರು: ಅನಂತ ಪಪ್ಪು

## ಜಿಲ್ಲೆಯಾದ್ಯಂತ ನಮ್ಮ ಶೌಚಾಲಯ ನಮ್ಮ ಗೌರವ ವಿಶೇಷ ಅಭಿಯಾನ ಕಾರ್ಯಕ್ರಮ...

ವಿಶ್ವ ಶೌಚಾಲಯ ಮತ್ತು ವಿಶ್ವ ಮಾನವ ಹಕ್ಕುಗಳ ದಿನಾಚರಣೆಗಳ ಪ್ರಯುಕ್ತ ಪ್ರಸ್ತುತ ವರ್ಷ "ನಮ್ಮ ಶೌಚಾಲಯ ನಮ್ಮ ಗೌರವ" ಎಂಬ ಶೀರ್ಷಿಕೆ ಹಾಗೂ "ಅಂದದ ಶೌಚಾಲಯ ಆನಂದದ ಜೀವನ" ಎಂಬ ಘೋಷ ವಾಕ್ಯದೊಂದಿಗೆ ನವೆಂಬರ್ 19 ರಿಂದ ಡಿಸೆಂಬರ್ 10 ರವರೆಗೆ ಜಿಲ್ಲೆಯಾದ್ಯಂತ ವಿಶೇಷ ಆ0ದೋಲನ ನಡೆಯಲಿದೆ.



ಗ್ರಾಮೀಣ ಸಮುದಾಯದಲ್ಲಿ ಸುರಕ್ಷಿತ ನೈರ್ಮಲ್ಯ, ಶುಚಿತ್ವ ಕು-ರಿತು ಜಾಗೃತಿ ಮೂಡಿಸಿ ಶೌಚಾಲಯಗಳನ್ನು ನಿರಂತರವಾಗಿ ಬಳಸುವಂತೆ ಪ್ರೇರೇಪಿಸುವ ಉದ್ದೇಶದೊಂದಿಗೆ ಪ್ರತಿ ವರ್ಷ ನವೆಂಬರ್ 19 ರಂದು ವಿಶ್ವ ಶೌಚಾಲಯ ದಿನವನ್ನಾಗಿ ಆಚರಿಸಲಾಗುತ್ತಿದೆ. ಬಯಲು ಬಹಿರ್ದೆಸೆ ಮುಕ್ತ ಸ್ಥಿತಿಯ ಸ್ಥಾನ ಮಾನವನ್ನು ಉಳಿಸಿಕೊಳ್ಳುವಲ್ಲಿ ಈ ದಿನಾಚರಣೆ ಪ್ರಮುಖ ಪಾತ್ರ ವಹಿಸುತ್ತಿದೆ.

ಈ ವಿಶೇಷ ಆಂದೋಲನದ ಅವಧಿಯಲ್ಲಿ ಜಿಲ್ಲೆಯಲ್ಲಿ ಕಾರ್ಯತ್ಮಕವಲ್ಲದ / ನಿರುಪಯುಕ್ತ ಸಮುದಾಯ ಶೌಚಾಲಯಗಳನ್ನು ಗುರುತಿಸಲು ಸಮೀಕ್ಷೆ ನಡೆಸಲಾಗುವುದು. ಮತ್ತು

ನೀರು ಮತ್ತು ನೈರ್ಮಲ್ಯ ವಿಷಯಗಳಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿನ ಪ್ರಸ್ತುತ ಸ್ಥಿತಿಗತಿ ಮತ್ತು ತೆಗೆದುಕೊಳ್ಳಬೇಕಾದ ಪರಿಹಾರ/ಯೋಜನಾ ಕ್ರಮಗಳ ಬಗ್ಗೆ ಚರ್ಚಿಸಿ ನಿರ್ಣಯಗಳನ್ನು ಕೈಗೊಳ್ಳಲಾಗುವುದು.

ನಿರುಪಯುಕ್ತ ಸಮುದಾಯ ಶೌಚಾಲಯಗಳ ದುರಸ್ತಿ, ಮರು ಸ್ಥಾಪನೆ ಮತ್ತು ಪರಿಷ್ಕರಣೆಯ ಕಾರ್ಯ ಚಟುವಟಿ-ಕೆಗಳನ್ನು ಹಮ್ಮಿಕೊಳ್ಳಲಾಗುವುದು. ಇದರೊಂದಿಗೆ ವೈಯಕ್ತಿಕ ಶೌಚಾಲಯ ಮತ್ತು ಸಮುದಾಯ ಶೌಚಾಲಯಗಳನ್ನು ಸುಂದ-ರೀಕರಣಗೊಳಿಸಲು ಸಮುದಾಯ ಮಟ್ಟದಲ್ಲಿ ಜಾಗೃತಿ ಮೂಡಿಸಿ, ಸಮುದಾಯವನ್ನು ಈ ಕಾರ್ಯದಲ್ಲಿ ತೊಡಗಿಸಿಕೊಳ್ಳುವಂತೆ ಪ್ರೇರೇಪಿಸಲಾಗುವುದು.

ಗ್ರಾಮೀಣ ಸಮುದಾಯದಲ್ಲಿ ಶೌಚಾಲಯಗಳ ಬಳಕೆಯನ್ನು ಉತ್ತೇಜನೆ,ವೈಯಕ್ತಿಕ ಗೃಹ ಶೌಚಾಲಯಗಳಿಗೆ ಮಂಜೂರಾತಿ ಪತ್ರಗಳನ್ನು ವಿತರಿಸಲಾಗುವುದು.

ವೈಯಕ್ತಿಕ ಗೃಹ ಶೌಚಾಲಯಗಳು ಮತ್ತು ಸಮುದಾಯ ಶೌಚಾಲಯಗಳ ಅಂತಿಮ ಸಮೀಕ್ಷೆ ಮಾಡಿ, ಶೌಚಾಲಯಗಳ ಕಾರ್ಯನಿರ್ವಹಣೆ, ಶೌಚಾಲಯಗಳನ್ನು ಅಂದಗೊಳಿಸಲು ಬಿಡಿಸಿರುವ ಚಿತ್ರಕಲೆ, ಗೋಡೆ ಬರಹ, ಸೌಂದರೀಕರಣ ಹಾಗೂ ಉತ್ತಮ ವೈಯಕ್ತಿಕ ಶೌಚಾಲಯ ಮತ್ತು ಸಮುದಾಯ ಶೌಚಾಲಯಗಳನ್ನು ಮೌಲ್ಯಮಾಪನ ಮಾಡಿ, ಪುರಸ್ಕಾರ/ ನಗದು ಬಹುಮಾನಕ್ಕಾಗಿ ನೀಡಲಾಗುವುದು.

ಗ್ರಾಮ ಪಂಚಾಯಿತಿ ಹಂತದಲ್ಲಿ ಸ್ವಚ್ಛ, ಸುಂದರ ವೈಯಕ್ತಿಕ ಗೃಹ ಶೌಚಾಲಯ (ಉತ್ತಮ ಶೌಚಾಲಯ) ಸ್ಪರ್ಧೆ ಮತ್ತು ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಉತ್ತಮ ಸಮುದಾಯ ಶೌಚಾಲಯ ಸ್ಪರ್ಧೆಗಳನ್ನು ಆಯೋಜಿಸಿ, ವಿಜೇತರಿಗೆ ಪುರಸ್ಕಾರಗಳನ್ನು ನೀಡಿ ಗೌರವಿಸಲಾಗುವುದು.

ಜಿಲ್ಲೆಗಳಲ್ಲಿರುವ ಕೈಗಾರಿಕೆಗಳು, ಸ್ವಯಂ ಸೇವಾ ಸಂಘಗಳು, ಸರ್ಕಾರೇತರ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು, ಇತರ ಸಾಂಸ್ಥಿಕ ಸಂಸ್ಥೆಗಳನ್ನು ಗುರುತಿಸಿ, ಈ ಆಂದೋಲನದ ಭಾಗವಾಗಿರುವ ಫಲಾನುಭವಿಗಳಿಗೆ ಪುರಸ್ಕಾರ ವಿತರಣೆ, ಶೌಚಾಲಯಗಳ ಸೌಂದರ್ಯಕರಣ ಪುರಸ್ಕಾರ ನೀಡಲಾಗುವುದು.

# ತೂಕ ಕಡಿಮೆ ಮಾಡಿಕೊಳ್ಳಲು ಬೆಲ್ಲದ ಟೀ ಎಷ್ಟು ಸಹಾಯ ಮಾಡುತ್ತೆ ಗೊತ್ತಾ?

ತೂಕ ಹೆಚ್ಚಾದ ಪ್ರತಿಯೊಬ್ಬರೂ ಹೇಗಪ್ಪಾ ತೂಕವನ್ನು ಕಮ್ಮಿ ಮಾಡಿಕೊಳ್ಳುವುದು ಎಂದು ಯೋಚಿಸುತ್ತಿರುತ್ತಾರೆ. ಬೇರೆ ಬೇರೆ ವಿಧಾನಗಳನ್ನು ಟ್ರೈ ಮಾಡಿ ಫಲಿತಾಂಶ ಸಿಗದೇ ಇದ್ದರೆ, ಸಿಹಿಯಾದ ಬೆಲ್ಲದ ಚಹಾ ಕುಡಿದು ಕಮ್ಮಿ ಮಾಡಿಕೊಳ್ಳಿ ಎಂದು ನಾವು ಹೇಳುತ್ತೇವೆ. ಇದು ಹೇಗೆ ನೆರವಾಗುತ್ತದೆ ಎಂದು ಈ ಲೇಖನದಲ್ಲಿ ಮುಂದೆ ಓದಿ.

ಈಗ ಚಳಿಗಾಲ ಆಗಿರುವುದ-ರಿಂದ ಯಾರೂ ಸಹ ಬೆಳಗಿನ ಸಮಯದಲ್ಲಿ ಮನೆಯಿಂದ ಹೊರಗೆ ಬಂದು ಮೊದಲಿನ ಹಾಗೆ ವಾಕಿಂಗ್ ಮಾಡಲು ಇಷ್ಟಪಡುವುದಿಲ್ಲ. ಸಾಧ್ಯವಾದಷ್ಟು ಜಡ ಜೀವನ ಶೈಲಿಯನ್ನು ಅನುಸ-ರಿಸಲು ಮುಂದಾಗುತ್ತಾರೆ. ಅಂ-ದರೆ ಮನೆಯಲ್ಲಿ ಒಂದು ಕಡೆ ಬೆಚ್ಚಗೆ ಕೂರೋಣ ಎನಿಸುತ್ತದೆ. ಈ ಸಂದರ್ಭದಲ್ಲಿ ನಮ್ಮ ದೇಹಕ್ಕೆ ಅನಾರೋಗ್ಯ ಪರಿಸ್ಥಿತಿ ನಿರ್ಮಾಣವಾಗುತ್ತದೆ ಎನ್ನುವುದರಲ್ಲಿ ಯಾವುದೇ ಅನುಮಾನವಿಲ್ಲ. ನಮ್ಮ ರೋಗ ನಿರೋಧಕ ಶಕ್ತಿ ಕೂಡ ಕುಸಿಯುತ್ತದೆ.

ಮುಖ್ಯವಾಗಿ ಈ ಸಂದರ್ಭದಲ್ಲಿ ನಮ್ಮ ದೇಹದಲ್ಲಿ ಬೊಜ್ಜು ಮತ್ತು ಕೊಲೆಸ್ಟ್ರಾಲ್ ಹೆಚ್ಚಾಗುವ ಸಾಧ್ಯತೆ ದಟ್ಟವಾಗಿರುತ್ತದೆ. ಮೊದಲೇ ದೇಹದ ತೂಕ ಹೆಚ್ಚಾಗಿರುವವರಿಗೆ ಇದು ಮಾರಕವಾಗುತ್ತದೆ ಎನ್ನುವುದರಲ್ಲಿ ಅನುಮಾನವಿಲ್ಲ. ಹೀಗಾಗಿ ದೇಹದ ತೂಕವನ್ನು ಕಡಿಮೆ ಮಾಡಿಕೊಳ್ಳಬೇಕು ಎಂದು ಆಲೋಚನೆ ಮಾಡುತ್ತಾರೆ. ಸಂಶೋಧನೆಗಳನ್ನು ಹೇಳುವ ಹಾಗೆ ದೇಹದ ತೂಕ ಮತ್ತು ಬೊಜ್ಜು ಎರಡನ್ನೂ ಕಡಿಮೆ ಮಾಡುವ ಸಾಮರ್ಥ್ಯ ಬೆಲ್ಲದ ಚಹಾಗೆ ಇದೆ. ಚಹಾ ತಯಾರು ಮಾಡುವಾಗ ಅದಕ್ಕೆ ಬೆಲ್ಲ ಸೇರಿಸಿ ಕುಡಿಯುವುದು ಈ ನಿಟ್ಟಿನಲ್ಲಿ ಅತ್ಯಂತ ಪರಿಣಾಮಕಾರಿ ಎಂದು ಹೇಳುತ್ತಾರೆ. ಬೆಲ್ಲದ ಚಹಾದ ಇನ್ನಿತರ ಆರೋಗ್ಯ ಪ್ರಯೋಜನಗಳನ್ನು ನೋಡೋಣ.

**ಜೀರ್ಣಶಕ್ತಿ ಹೆಚ್ಚಿಸುತ್ತೆ**

ಚಹಾಗೆ ಬೆಲ್ಲ ಹಾಕಿ ಕುಡಿಯುವುದು ನಾವು ಸೇವಿಸಿದ ಆಹಾರ ನಮ್ಮ ದೇಹದಲ್ಲಿ ಚೆನ್ನಾಗಿ ಜೀರ್ಣ ಆಗುವಂತೆ ಮಾಡುತ್ತದೆ. ಉತ್ತಮ ಜೀರ್ಣ ಶಕ್ತಿ ಇರುವವರಿಗೆ ಯಾವುದೇ ಆಹಾರ ಸೇವಿಸಿದರೂ ಜೀರ್ಣ ಪ್ರಕ್ರಿಯೆ ಚೆನ್ನಾಗಿ ನಡೆಯುತ್ತದೆ.

ಅಂದರೆ ಹೊಟ್ಟೆಯ ಭಾಗದಲ್ಲಿ ಕೊಬ್ಬಿನ ಅಂಶ ಶೇಖರಣೆ ಆಗುವುದಿಲ್ಲ. ತುಂಬಾ ಜನರು ಬೆಲ್ಲದ ಸಿಹಿ ಅಂಶದ ಕಾರಣದಿಂದ ಕೊಬ್ಬು ಶೇಖರಣೆ ಆಗುವ ಹಾಗೆ ಮಾಡುತ್ತದೆ ಎಂದುಕೊಂಡಿದ್ದಾರೆ. ಆದರೆ ಇದು ನಮ್ಮ ಜೀರ್ಣಶಕ್ತಿಯನ್ನು ಹೆಚ್ಚಿಸುವುದರ ಜೊತೆಗೆ ಮೆಟಬಾಲಿಸಂ ಪ್ರಕ್ರಿಯೆಯನ್ನು ವೃದ್ಧಿಸುತ್ತದೆ, ದೇಹದ ತೂಕ ನಿಯಂತ್ರಣದಲ್ಲಿ ಸಹಾಯ ಮಾಡುತ್ತದೆ.

**ಮೆಟಬಾಲಿಸಂ ಚುರುಕಾಗಿಸುತ್ತದೆ**

ಮೆಟಬಾಲಿಸಂ ಪ್ರಕ್ರಿಯೆ ಎನ್ನುವುದು ನಮ್ಮ ದೇಹದಲ್ಲಿ ನಾವು ಸೇವಿಸಿದ ಆಹಾರವನ್ನು ಶಕ್ತಿಯಾಗಿ ಪರಿವರ್ತನೆ ಮಾಡುವುದರಲ್ಲಿ ಸಹಾಯ ಮಾಡುತ್ತದೆ. ಬಲವಾದ ಮೆಟಬಾಲಿಸಂ ಆರೋಗ್ಯಕರವಾದ ತೂಕವನ್ನು ನಿರ್ವಹಣೆ ಮಾಡಲು ನೆರವಾಗುತ್ತದೆ.

ಅಧ್ಯಯನಗಳು ಹೇಳುವಂತೆ ಬೆಲ್ಲ ತನ್ನಲ್ಲಿ ಪೋಟಾಸಿಯಂ ಪ್ರಮಾಣ ವನ್ನು ಒಳಗೊಂಡಿದ್ದು, ಎಲೆಕ್ಟ್ರೋಲೈಟ್ ಸಮ ತೋಲನ ಉಂಟು ಮಾಡುತ್ತದೆ. ಇದು ನಮ್ಮ ದೇಹದ ಮಾಂಸ ಖಂಡಗಳನ್ನು ಬಲಪಡಿಸುವ ಜೊತೆಗೆ ಮೆಟಬಾಲಿಸಂ ವೃದ್ಧಿಸಲು ನೆರವಾಗುತ್ತದೆ. ಉತ್ತಮ ಮೆಟಬಾಲಿಸಂ ಪ್ರಕ್ರಿಯೆ ನಮ್ಮ ದೇಹದಲ್ಲಿ ಹೆಚ್ಚುವರಿ ಕ್ಯಾಲೋ-ರಿಗಳನ್ನು ಕರಗಿಸುವುದು ಜೊತೆಗೆ ದೇಹದ ತೂಕವನ್ನು ಕಡಿಮೆ ಮಾಡುವಲ್ಲಿ ನೆರವಾಗುತ್ತದೆ.?

**ಅನಿಮಿಯ ಅಥವಾ ರಕ್ತಹೀನತೆ ನಿರ್ವಹಣೆಗೆ ಸಹಕಾರಿ**

ನಮ್ಮ ದೇಹದಲ್ಲಿ ಒಂದು ವೇಳೆ ಕಬ್ಬಿಣದ ಅಂಶ ಕಡಿಮೆಯಾದರೆ ಅದು ಅನಿಮಿಯ ಬರುವಂತೆ ಮಾಡುತ್ತದೆ. ಇದು ದೇಹದ ತೂಕ ಹೆಚ್ಚಾಗಲು ಕಾರಣವಾಗುತ್ತದೆ. ಅಧ್ಯಯನಗಳು ಹೇಳುವಂತೆ ಬೆಲ್ಲ ನಮ್ಮ ದೇಹಕ್ಕೆ ಸಕಾರಾತ್ಮಕ ಪ್ರಭಾವಗಳನ್ನು ಉಂಟು ಮಾಡುವುದರ ಜೊತೆಗೆ ಅನೀಮಿಯ ತರಹದ ಸಮಸ್ಯೆಗಳನ್ನು ದೂರ ಮಾಡಲು ಸಹಾಯ ಮಾಡುತ್ತದೆ.

ನ್ಯಾಷನಲ್ ಸೆಂಟ-ರ್ ಫಾರ್ ಬಯೋಟೆಕ್ನಾಲಜಿಕಲ್ ಇನ್ಫಾರ್ಮಷನ್ ತನ್ನ ಅಧ್ಯಯನದಲ್ಲಿ ಪ್ರಕಟಪಡಿಸಿದ ಹಾಗೆ ಬೆಲ್ಲ ಅನಿಮಿಯ ವಿರುದ್ಧ ಹೋರಾಡಲು ನೆರವಾಗುತ್ತದೆ.

**ಬೆಲ್ಲದ ಚಹಾ ಕುಡಿಯುವುದರ ಇನ್ನಿತರ ಪ್ರಯೋಜನಗಳು**

ಬೆಲ್ಲದ ಚಹಾ ಕುಡಿಯುವುದು ಕೇವಲ ದೇಹದ ತೂಕವನ್ನು ಕಡಿಮೆ ಮಾಡಿಕೊಳ್ಳಲು ಮಾತ್ರವಲ್ಲ ಬದಲಿಗೆ ಬೆಲ್ಲದಲ್ಲಿ ನಮ್ಮ ದೇಹಕ್ಕೆ ಅಗತ್ಯವಾಗಿ ಬೇಕಾದ ಅನೇಕ ವಿಟಮಿನ್ ಅಂಶಗಳು ಅಂದರೆ ವಿಟಮಿನ್ ಎ, ವಿಟಮಿನ್ ಬಿ ಹಾಗೂ ಖನಿಜಾಂಶಗಳಾದ ಕ್ಯಾಲ್ಸಿಯಂ, ಮೆಗ್ನೀಷಿಯಂ, ಫಾಸ್ಪರಸ್ ಮತ್ತು ಪೊಟ್ಯಾಶಿಯಂ ಸಿಗುತ್ತವೆ. ಇದು





ನಮ್ಮ ದೇಹದಲ್ಲಿ ರಕ್ತ ಪರಿಚಲನೆಗೆ ಮತ್ತು ಸಂಪೂರ್ಣ ಆರೋಗ್ಯಕ್ಕೆ ನೆರವಾಗುತ್ತದೆ.

**ಬೆಲ್ಲದ ಚಹಾ ಮಾಡುವುದು ಹೇಗೆ?**

ಬೆಲ್ಲದ ಚಹಾ ತನ್ನಲ್ಲಿ ಅಪಾರ ಪ್ರಮಾಣದ ಪೋಷಕಾಂಶಗಳನ್ನು ಒಳ ಗೊಂಡಿದೆ ಮತ್ತು ಅಷ್ಟೇ ಆರೋಗ್ಯ ಪ್ರಯೋಜನಗಳನ್ನು ಕೂಡ ನೀಡುತ್ತದೆ. ದೇಹದ ತೂಕ ನಿಯಂತ್ರಣದಲ್ಲಿ ಇದು ಹೆಚ್ಚು ಸಹಕಾರಿ. ಜೊತೆಗೆ ಇದರಲ್ಲಿ ಬಳಸುವ ತುಳಸಿ, ದಾಲ್ಚಿನ್ನಿ ಮತ್ತು ಕಾಳು ಮೆಣಸು ಸೇವಿಸುವ ಚಹವನ್ನು ಮತ್ತಷ್ಟು ಆರೋಗ್ಯಕರವಾಗಿರಿಸುತ್ತದೆ.

**ಬೆಲ್ಲದ ಚಹಾ ತಯಾರು ಮಾಡಲು ಬೇಕಾಗಿರುವ ಸಾಮಗ್ರಿಗಳು**

ಎರಡು ಕಪ್ ನೀರು

ಎರಡರಿಂದ ಮೂರು ಟೇಬಲ್ ಚಮಚ ಬೆಲ್ಲಒಂದು ಟೀ ಚಮಚ ಚಹಾದ ಎಲೆಗಳು

1 ಇಂಚು ತುರಿದ ಶುಂಠಿ

ಎರಡರಿಂದ ಮೂರು ಏಲಕ್ಕಿ

ಒಂದು ಸಣ್ಣ ಚೂರು ದಾಲ್ಚಿನ್ನಿ

ಸ್ವಲ್ಪ ಕಾಳು ಮೆಣಸಿನ ಪುಡಿ

**ಬೆಲ್ಲದ ಚಹಾ ತಯಾರು ಮಾಡುವ ಪ್ರಕ್ರಿಯೆ**

ಮೊದಲಿಗೆ ಒಂದು ಪ್ಯಾನ್ ನಲ್ಲಿ ನೀರು ಹಾಕಿ ಅದಕ್ಕೆ ಶುಂಠಿ, ಏಲಕ್ಕಿ, ತುಳಸಿ ಎಲೆಗಳು ಮತ್ತು ದಾಲ್ಚಿನ್ನಿಯನ್ನು ಸೇರಿಸಿ.

ಐದು ನಿಮಿಷಗಳ ಕಾಲ ಚಹಾವನ್ನು ಚೆನ್ನಾಗಿ ಕುದಿಸಿ ಅದಕ್ಕೆ ಕಪ್ಪು ಕಾಳುಮೆಣಸು ಪುಡಿಯನ್ನು ಸೇರಿಸಿ.

ಕುದಿಯುವ ಸಂದರ್ಭದಲ್ಲಿ ಚಹಾದ ಎಲೆಗಳು ಮತ್ತು ಬೆಲ್ಲವನ್ನು ನಿಮ್ಮ ರುಚಿಗೆ ತಕ್ಕಂತೆ ಸೇರಿಸಿ.

ಈಗ ಗ್ಯಾಸ್ ಆಫ್ ಮಾಡಿ ಆನಂತರ ಚಹಾವನ್ನು ಸೋಸಿಕೊಳ್ಳಿ

ನಿಮ್ಮ ಬೆಲ್ಲದ ಚಹಾ ಈಗ ಕುಡಿಯಲು ತಯಾರಿದೆ.

ಊಟ ಆದ ನಂತರ ಅರ್ಧ ಗಂಟೆ ಬಿಟ್ಟು ಬೆಲ್ಲದ ಚಹಾ ಕುಡಿಯುವುದು ಆರೋಗ್ಯಕ್ಕೆ ತುಂಬಾ ಒಳ್ಳೆಯದು ಮತ್ತು ಸೊಂಟದ ಭಾಗದ ಕೊಬ್ಬು ಕರಗಲು ಸಹಾಯ ಮಾಡುತ್ತದೆ.





# ದಿ. ಶ್ರೀಮತಿ ಇಂದಿರಾ ಗಾಂಧಿ ಅವರ ಜನ್ಮದಿನದ ಪ್ರಯುಕ್ತ ನಿಮಿತ್ಯ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಕೆ



**ರಾಯಬಾಗ :** ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ರಾಯಬಾಗ ಕಾಂಗ್ರೆಸ್ ಕಾಯಾ9ಲಯದಲ್ಲಿ ಭಾರತದ ಮಾಜಿ ಪ್ರಧಾನಿ ಉಕ್ಕಿನ ಮಹಿಳೆ ದಿ. ಶ್ರೀಮತಿ ಇಂದಿರಾ ಗಾಂಧಿ ಅವರ ಜನ್ಮದಿನದ ಪ್ರಯುಕ್ತ ದಿ. ಇಂದಿರಾ ಗಾಂಧಿ ಅವರ ಭಾವಚಿತ್ರಕ್ಕೆ ಮಾನ್ಯ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಬಾಗ ವಿಧಾನ ಸಭಾ ಕ್ಷೇತ್ರದ ಕಾಂಗ್ರೆಸ್ ಮುಖಂಡರಾದ ಸನ್ಮಾನ್ಯ ಶ್ರೀ ಮಹಾವೀರ ಮೋಹಿತೆ ಅವರು ಪುಷ್ಪ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಅಜು9ನ ಬಂಡಗರ ದಿಲೀಪ್ ಜಮಾದಾರ ತಮ್ಮಣ್ಣಿ ನಿಂಗನೂರೆ ನಿಮ9ಲಾ ಪಾಟೀಲ್ ಶ್ರವಣ ಕಾಂಬಳೆ ಕಿರಣ ಕಾಂಬಳೆ ದಿಲೀಪ್ ಪಾಯನ್ನವರ ಸಿದ್ರಾಮ ಪೂಜೇರಿ ಲಕ್ಕಪ್ಪ ಪೂಜೇರಿ ಸುರೇಶ್ ಕಾಂಬಳೆ ಕೃಷ್ಣಾ ಜೋಶಿ ರಾಕೇಶ್ ಕಾಂಬಳೆ ಲೋಕೇಶ್ ಕಾಂಬಳೆ ರೀಯಾನಾ ನದಾಫ ತನುಜಾ ಶಿಂಗೆ ಭೀಮ ಕಾಂಬಳೆ ಗಂಗಾಧರ ಕಾಂಬಳೆ ಪ್ರಶಾಂತ ಕಾಂಬಳೆ ಚೇತನ ಕಾಂಬಳೆ ಶೈಲಜಾ ಕ-ರಿಬಿಂಮ್ಮಗೋಳ ಪ್ರೇಮ ಕಾಂಬಳೆ ವಿನಾಯಕ ಕಾಂಬಳೆ ಹಾಗೂ ಅಪಾರ ಕಾಂಗ್ರೆಸ್ ಮುಖಂಡರು ಕಾರ್ಯಕರ್ತರು ಅಭಿಮಾನಿಗಳು ಉಪಸ್ಥಿತರಿದ್ದರು.

# ಗದಗ ಜಿಲ್ಲಾ ಮಹಿಳಾ ಕಾಂಗ್ರೆಸ್ ವತಿಯಿಂದ ದಿ. ಪ್ರಧಾನಿ ಇಂದಿರಾ ಗಾಂಧಿ ಜನ್ಮ ದಿನಾಚರಣೆ



**ಗದಗ:** ನಗರದ ದಿ. ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿನ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಜಿಲ್ಲಾ ಮಹಿಳಾ ಕಾಂಗ್ರೆಸ್ ಘಟಕದ ವತಿಯಿಂದ ಮಂಗಳವಾರ ದಿ. ಪ್ರಧಾನಿ ಇಂದಿರಾ ಗಾಂಧಿ ಅವರ 107ನೇ ಜನ್ಮದಿನವನ್ನು ಆಚರಿಸಲಾಯಿತು.

ಜಿಲ್ಲಾ ಮಹಿಳಾ ಕಾಂಗ್ರೆಸ್ ಘಟಕದ ಅಧ್ಯಕ್ಷೆ ನೀಲಮ್ಮ ಬೋಳನವರ ಮಾತನಾಡಿ, ಇಂದಿರಾ ಗಾಂಧಿ ಅವರು ಬಡವರಿಗಾಗಿ, ಮಹಿಳೆಯರಿಗಾಗಿ, ದೀನದಲಿತರ ಬಗ್ಗೆ ಕಾಳಜಿ ಹೊಂದಿದ್ದರು. ಅವರು ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ಬಡವರ, ಶ್ರಮಿಕರ ಕಲ್ಯಾಣಕ್ಕಾಗಿ ಶ್ರಮಿಸಿದರು. ಇಂದಿರಾ ಗಾಂಧಿ ಅವರು ಇಂದಿನ ಮಹಿಳೆಯರಿಗೆ ಮಾದರಿಯಾಗಿದ್ದಾರೆ ಎಂದು ಹೇಳಿದರು.

ಕೆಪಿಸಿಸಿ ಸದಸ್ಯೆ ಸುಜಾತಾ ದೊಡ್ಡಮನಿ, ಮುಖಂಡರಾದ ಮುಸ್ಕಾನ ಸಯ್ಯದ್, ಶಕುಂತಲಾ ಅಕ್ಕಿ, ಲಲಿತ ಗೊಳಗೊಳಕಿ, ವಹೀದ ಖಲೀಫ್, ಜಾನಕಿ ಮಲ್ಲಾಪೂರ, ಸಾವಿತ್ರಿ ಹೂಗಾರ, ಪರವೀನಬಾನು ಮುಲ್ಲಾ, ರೇಖಾ ಬದಿ, ಸಹೀರಾಬಾನು ಬಳ್ಳಾರಿ, ದ್ರಾಕ್ಷಾಯಿಣಿ ಹಾಸಿಲಕರ, ಗೀತಾ ಹಬೀಬ, ಶೋಭಾ ಕೆರಕಲಮಟ್ಟಿ, ರಾಜೇಶ್ವರಿ ಮೇಗೂರ, ಲಕ್ಷ್ಮೀ ಜಾಲಿಕಟ್ಟಿ, ಚೇತನಾ ಸೀತಾರಹಳ್ಳಿ ಸೇರಿ ಹಲವರಿದ್ದರು

# ಸರ್ವೋತ್ತಮ ಜಾರಕಿಹೊಳಿ ೨೪ನೇ ಹುಟ್ಟು ಹಬ್ಬದ ನಿಮಿತ್ತ ರೋಗಿಗಳಿಗೆ ಬೆಳಗಿನ ಉಪಹಾರ ವಿತರಣೆ




**ಗೋಕಾಕ:** ಯುವ ನಾಯಕರು, ಲಕ್ಷ್ಮೀ ಶಿಕ್ಷಣ ಸಂಸ್ಥೆಯ ನಿರ್ದೇಶಕರೂ ಆಗಿರುವ ಸರ್ವೋತ್ತಮ ಜಾರಕಿಹೊಳಿ ಅವರ 24ನೇ ಹುಟ್ಟು ಹಬ್ಬದ ನಿಮಿತ್ತ ಅವರ ಅಭಿಮಾನಿ ಕಾರ್ಯಕರ್ತರು ನಗರದ ಸಾರ್ವಜನಿಕ ಆಸ್ಪತ್ರೆಯ ರೋಗಿಗಳಿಗೆ ಬೆಳಗಿನ ಉಪಹಾರ ವಿತರಿಸಿದರು.

ಶಾಸಕ ಬಾಲಚಂದ್ರ ಜಾರಕಿಹೊಳಿ ಅವರ ಆಪ್ತ ಸಹಾಯಕ ಲಕ್ಕಪ್ಪ ಲೋಕುರಿ ಮಾತನಾಡಿ, ಸರ್ವೋತ್ತಮ ಜಾರಕಿಹೊಳಿ ಅವರು ಶಿಕ್ಷಣ, ಸಾಮಾಜಿಕ ಕ್ಷೇತ್ರಗಳಲ್ಲಿ ವಿಶಿಷ್ಟವಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಜೊತೆಗೆ ಶಾಸಕ ಮತ್ತು ಬೆಮ್ಯುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರ ಸಮರ್ಥ ಮಾರ್ಗದರ್ಶನದಲ್ಲಿ ಅರಭಾವಿ ಮತಕ್ಷೇತ್ರದಲ್ಲಿ ಮಿಂಚಿನ ಸಂಘಟನೆಯಲ್ಲಿ ತೊಡಗುವ ಮೂಲಕ ಯುವಕರಲ್ಲಿ ಉತ್ಸಾಹ ತುಂಬುವ ಕೆಲಸ ಮಾಡುತ್ತಿದ್ದಾರೆ. ಭಗವಂತನು ಸರ್ವೋತ್ತಮ ಅವರಿಗೆ ಸುಖ, ಸಮೃದ್ಧಿ, ಆಯುರಾರೋಗ್ಯ ನೀಡಿ ಕರುಣಿಸಲಿ ಎಂದು ಶುಭ ಕೋ-ರಿದರು.

ಇನ್ನೋರ್ವ ಆಪ್ತ ಸಹಾಯಕ ನಿಂಗಪ್ಪ ಕುರಬೇಟ ಮಾತನಾಡಿ, ಸರ್ವೋತ್ತಮ ಜಾರಕಿಹೊಳಿ ಅವರ ಹುಟ್ಟು ಹಬ್ಬವನ್ನು ಈ ಬಾರಿ ವಿನೂತನ ರೀತಿಯಲ್ಲಿ ಆಚ-ರಿಸುತ್ತಿದ್ದೇವೆ.

ಯೋಗಿಕೊಳ್ಳದ ಗೋಶಾಲೆಯಲ್ಲಿ ಸೇವೆ ಸಲ್ಲಿಸಲಾಗಿದೆ. ರೋಗಿಗಳಿಗೆ ಹಣ್ಣು ಹಂಪಲಗಳನ್ನು ನೀಡಲಾಗಿದೆ. ಯಾದವಾಡ ಡಾಲ್ಮೀಯಾ ಕಾರ್ಖಾನೆಯ ಮುಂಭಾಗದಲ್ಲಿ ಸಸಿಗಳನ್ನು ನೆಡಲಾಗುತ್ತಿದೆ. ಜಿಲ್ಲೆಯಾದ್ಯಂತ ಸುಮಾರು 24ಸಾವಿರ ಸಸಿಗಳನ್ನು ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಗೋಕಾಕ ತಾಲೂಕು ಆರೋಗ್ಯ ಅಧಿಕಾರಿ ಡಾ.ಮುತ್ತಣ್ಣ ಕೊಪ್ಪದ, ಅಬ್ದುಲ ಮಿರ್ಜಾನಾಯಿಕ, ಕೃಷ್ಣಾ ಮುಳಗುಂದ, ಮಹಾದೇವ ಗುಡೇರ, ಮಂಜು ಪ್ರಭುನಟ್ಟಿ, ಪಾಂಡುರಂಗ ದೊಡಮನಿ, ಪರಶುರಾಮ ಭಂಡಾರಿ, ಪ್ರಸಾದ ಸುತಾರ, ಕಿರಣ ಗಂಗರಡ್ಡಿ, ಸಂತೋಷ ಕೋಲಕಾರ, ಅಡಿವೆಪ್ಪ ಕಂಕಾಳಿ, ಚಂದನ ಮಗದುಮ್ಮ, ಆನಂದ ಖಾನಪ್ಪನವರ, ಗಿರೀಶ ತಳವಾರ, ಅಜೀತ ಪಾಟೀಲ ಮುಂತಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# 7 ದಿನಗಳ ರಾಷ್ಟ್ರೀಯ ಸೇವಾ ಯೋಜನೆ ಶಿಬಿರಕ್ಕೆ ಚಾಲನೆ



**ಅಥಣಿ.** ಶ್ರೀ ಭಾರತ ಮಾತಾ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯ ಮರಗುಂಡಿ ರಾಷ್ಟ್ರೀಯ ಸೇವಾ ಯೋಜನೆ ಏಳು ದಿನಗಳ ವಿಶೇಷ ಶಿಬಿರ ದತ್ತು ಗ್ರಾಮ ಮಸರಗುಪ್ಪಿಯಲ್ಲಿ ಹಮ್ಮಿಕೊಳ್ಳಲಾಗಿ-ತ್ತು. ದಿ. 13 ರಂದು ಉದ್ಘಾಟನೆ ನೆರವೇರಿಸಲಾಯಿತು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಶಾಲೆ ಅಧ್ಯಕ್ಷರು ದಿಲೀಪ ರಾಜ ಮೊಸರುಗುಪ್ಪಿ,ಉದ್ಘಾಟಕರಾಗಿ ಅಥ-ಣಿ ಡಿ ವೈ ಎಸ್ ಪಿ ಪ್ರಶಾಂತ ಜಿ ಮುನ್ನೋಳ್ಳಿ ಇವರು ಆಗಮಿಸಿದರು. ಅಧ್ಯಕ್ಷತೆಯನ್ನು ಅಥಣಿ ಭಾರತಿ ಶಿಕ್ಷಣ ಸಂಸ್ಥೆಯ ಬಾಬುರಾವ ಸತ್ಯಪ್ಪ ವಾಗಮೋಡೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಮಸರಗುಪ್ಪಿ ಗ್ರಾ ಪಂ ಸದಸ್ಯರಾದ ಮಲ್ಲಿಕಾರ್ಜುನ ದರೂರ ಮೊಸರುಗುಪ್ಪಿ ಎಲ್ಲಾ ಪದಾಧಿಕಾರಿಗಳು ಪಾಲ್ಗೊಂಡಿದ್ದರು. ರಾಷ್ಟ್ರೀಯ ಸ್ವಯಂಸೇವಾ ಯೋಜನೆಯ ಬಗ್ಗೆ ಹಳ್ಳಿಗಳಿಂದ ದೇಶ ಎಂಬಂತೆ ಹಳ್ಳಿಗಳು ಸುಧಾರಣೆಯಾದರೆ ದೇಶವೇ ಸುಧಾರಣೆಯಾದಂತೆ ಎಂದು ಧಾರ್ಮಿಕವಾಗಿ ಎನ್ ಎಸ್ ಎಸ್ ಸ್ವಯಂಸೇವಕರಿಗೆ ಒಂದು ಮಾರ್ಗದರ್ಶನವನ್ನು ನೀಡಿದರು.

# ಸ್ಥಳೀಯ ಸಂಸ್ಥೆಗಳ ಉಪ ಚುನಾವಣೆ : ಪ್ರತಿಬಂಧಕಾಜ್ಞೆ ಜಾರಿ

**ಬಾಗಲಕೋಟೆ:** : ಸ್ಥಳೀಯ ಸಂಸ್ಥೆಗಳ ಉಪ ಚುನಾವಣೆಗೆ ಸಂಬಂಧಿಸಿದಂತೆ ಚುನಾವಣೆ ಜರುಗಲಿರುವ ಪ್ರದೇಶಗಳಲ್ಲಿ ನವೆಂಬರ 23 ರಂದು ಮತದಾನ ದಿನದ ನಿಮಿತ್ಯ ಪ್ರತಿಬಂಧಕಾಜ್ಞೆ ಜಾರಿ ಮಾಡಿ ಜಿಲ್ಲಾಧಿಕಾರಿ ಆಗಿರುವ ಜಿಲ್ಲಾ ದಂಡಾಧಿಕಾರಿ ಜಾನಕಿ ಕೆ.ಎಂ ಆದೇಶ ಹೊರಡಿಸಿದ್ದಾರೆ.

ಮತದಾನ ನಡೆಯುವ ಪ್ರದೇಶಗಳಲ್ಲಿ 5 ವ್ಯಕ್ತಿಗಳಿಗಿಂತ ಹೆಚ್ಚಿನ ಜನರು ಜೊತೆಗೂಡಿ, ಗುಂಪಾಗಿ ಸಂಚರಿಸುವಂತಿಲ್ಲ. ಸಾರ್ವಜನಿಕ ಸಭೆ ನಡೆಸುವುದು, ಶಾಂತತೆಗೆ ಭಂಗ ಉಂಟು ಮಾಡುವುದು, ಕಾನೂನು ಮತ್ತು ಸುವ್ಯವಸ್ಥೆಗೆ ದಕ್ಕೆ ತರುವುದು ಹಾಗೂ ಅಹಿತಕರ ಘಟನೆ ನಡೆಯದಂತೆ ಮತದಾನ ಕೇಂದ್ರದ ಸುತ್ತಮುತ್ತ 100 ವ್ಯಾಪ್ತಿಯಲ್ಲಿ ಬೆಳಿಗ್ಗೆ 6 ರಿಂದ ಮತದಾನ ಮುಕ್ತಾಯವಾಗುವವರೆಗೆ ಪ್ರತಿಬಂಧಕಾಜ್ಞೆ ಜಾರಿ ಮಾಡಿ ಆದೇಶ ಹೊರಡಿಸಿದ್ದಾರೆ.

ಶಸ್ತ್ರಾಸ್ತ್ರಗಳ ಜಮೆಗೆ ಸೂಚನೆ

ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿನ್ನಲೆಯಲ್ಲಿ ಚುನಾವಣೆ ನಡೆಯುವ ಇಳಕಲ್ಲ ನಗರಸಭೆ ಹಾಗೂ ಬೀಳಗಿ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಎಲ್ಲ ಲೈಸನ್ಸ್ ದಾರರು ತಮ್ಮ ಶಸ್ತ್ರಾಸ್ತ್ರಗಳನ್ನು ಹಾಗೂ ಮದ್ದುಗುಂಡುಗಳನ್ನು ಸಂಬಂಧಿಸಿದ ಪೊಲೀಸ್ ಠಾಣೆಯಲ್ಲಿ ಜಮೆ ಮಾಡಿ ಸೂಕ್ತ ರಶೀದಿ ಪಡೆಯತಕ್ಕದ್ದು. ನವೆಂಬರ 26ರ ನಂತರ ವಾಪಸ ಪಡೆಯುವಂತೆ ಆದೇಶ ಹೊರಡಿಸಿದ್ದಾರೆ.

****

# ಶ್ರೀ ಲಕ್ಷ್ಮೀದೇವಿ ಪಾದಗಟ್ಟಿಯ ೨೩ನೇ ಕಾರ್ತಿಕೋತ್ಸವ

**ಗೋಕಾಕ:** ನಗರದ ಶ್ರೀ ಲಕ್ಷ್ಮೀದೇವಿ ಪಾದಗಟ್ಟಿಯ 23ನೇ ಕಾರ್ತಿಕೋತ್ಸವವು ದಿ.22, 23, 24ರಂದು ವಿಜೃಂಭಣೆಯಿಂದ ಜರುಗಲಿದೆ.

ದಿ.22 ರಂದು ಮುಂಜಾನೆ 4.30ಗಂಟೆಗೆ ಶ್ರೀ ಲಕ್ಷ್ಮೀದೇವಿಗೆ ಅಭಿಷೇಕ, 5ಗಂಟೆಗೆ ಪಾದಗಟ್ಟಿಯ ಶ್ರೀ ಲಕ್ಷ್ಮೀದೇವಿಗೆ ಅಭಿಷೇಕ, 10ಗಂಟೆಗೆ ಉಡಿ ತುಂಬುವ ಕಾರ್ಯಕ್ರಮ ಜರುಗುವದು. ಸಂಜೆ 6ಗಂಟೆಗೆ ಕಾರ್ತಿಕೋತ್ಸವ ಉದ್ಘಾಟನೆಯನ್ನು ವಿಧಾನ ಪರಿಷತ ಸದಸ್ಯ ಲಖನ ಜಾರಕಿಹೊಳಿ ನೆರವೇರಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾರ್ತಿಕೋತ್ಸವ ಸಮಿತಿ ಅಧ್ಯಕ್ಷ ವೀರುಪಾಕ್ಷಿ ಮಿರ್ಜಿ ವಹಿಸಲಿದ್ದು, ಮುಖ್ಯಅತಿಥಿಗಳಾಗಿ ಜಿಲ್ಲಾ ಉಸ್ತುವಾರಿ ಹಾಗೂ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ, ರೋಟರಿ ಸಂಸ್ಥೆಯ ಅಧ್ಯಕ್ಷ ಸಿದ್ದಣ್ಣ ಕಮತ, ಜಿಪಂ ಮಾಜಿ ಸದಸ್ಯರುಗಳಾದ ಟಿ ಆರ್ ಕಾಗಲ, ಮಡ್ಡೆಪ್ಪ ತೋಳಿನವರ ಆಗಮಿಸಲಿದ್ದಾರೆ. 7ಗಂಟೆಗೆ ಜನ್ ಪಾರ್ಕ ಬರ್ಡ್ಸ ಪ್ಲೇ ನರ್ಸರಿ ಶಾಲಾ ಮಕ್ಕಳಿಂದ ಮನರಂಜನಾ ಕಾರ್ಯಕ್ರಮ ಹಾಗೂ ಅಕ್ಕಮಹಾದೇವಿ ಮಹಿಳಾ ಮಂಡಳದಿಂದ ಮತ್ತು ವಚನಾಮೃತ ಮಹಿಳಾ ಮಂಡಳದಿಂದ ಸಂಗೀತ ಕಾರ್ಯಕ್ರಮ ನಡೆಯಲಿದೆ.

ದಿ.23ರಂದು ಸಾಯಂಕಾಲ 4ಗಂಟೆಗೆ ಮಹಿಳೆಯರು ಹಾಗೂ ಪುರುಷರಿಗಾಗಿ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಸಂಜೆ 6ಗಂಟೆಗೆ ನಡೆಯಲಿರುವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಲಕ್ಷ್ಮೀದೇವಿ ಪಾದಗಟ್ಟಿ ಮಹಿಳಾ ಮಂಡಳದ ಅಧ್ಯಕ್ಷೆ ಜಯಾ ಕಮತ ವಹಿಸಲಿದ್ದು, ಮುಖ್ಯಅತಿಥಿಗಳಾಗಿ ಸಂಸದೆ ಪ್ರೀಯಾಂಕಾ ಜಾರಕಿಹೊಳಿ ಆಗಮಿಸಲಿದ್ದಾರೆ. ಅತಿಥಿಗಳಾಗಿ ನಿವೃತ್ತ ಪ್ರಾಚಾರ್ಯೆ ಅನುಪಾ ಕೌಶಿಕ, ಡಾ.ಪ್ರೀತಿ ವಣ್ಣೂರ, ಡಾ.ಪೂರ್ಣಿಮಾ ಜನ್ಮಟ್ಟಿ, ಡಾ.ಶೃತಿ ಹೊಸಮನಿ ಉಪಸ್ಥಿತರಿರುವರು. ಸಂಜೆ 7ಗಂಟೆಗೆ ವಿದ್ಯಾ ಮಗದುಮ ಹಾಗೂ ಸಂಗಡಿಗರಿಂದ ಸಂಗೀತ ಸಂಜೆ ಹಾಗೂ ಶ್ರೀ ಲಕ್ಷ್ಮೀದೇವಿ ಪಾದಗಟ್ಟಿ ಮಹಿಳಾ ಮಂಡಳದಿಂದ ಮನರಂಜನಾ ಕಾರ್ಯಕ್ರಮ ಜರುಗಲಿವೆ.

ದಿ.24ರಂದು ಮಧ್ಯಾಹ್ನ 12.30ಗಂಟೆಗೆ ಲಖನ್ ಜಾರಕಿಹೊಳಿ ಮತ್ತು ಸಹೋದರ-ರಿಂದ ಮಹಾಪ್ರಸಾದದ ವ್ಯವಸ್ಥೆ ಮಾಡಲಾಗಿದೆ. ಸಂಜೆ 6ಗಂಟೆಗೆ ನಡೆಯುವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ರಮೇಶ ಜಾರಕಿಹೊಳಿ ವಹಿಸಲಿದ್ದು, ಅತಿಥಿಗಳಾಗಿ ಶಾಸಕ ಬಾಲಚಂದ್ರ ಜಾರಕಿಹೊಳಿ, ಕಾರ್ಮಿಕ ಮುಖಂಡ ಅಂಬಿರಾವ ಪಾಟೀಲ, ಭಾರತ ಸ್ಕೌಟ್ಸ್ ಗೈಡ್‌ನ ಉಪಾಧ್ಯಕ್ಷ ಗಜಾನನ ಮನ್ನಿಕೇರಿ, ನಗರಸಭೆ ಅಧ್ಯಕ್ಷ ಪ್ರಕಾಶ ಮುರಾರಿ, ಸದಸ್ಯ ಜಯಾನಂದ ಹುಣ್ಣಚ್ಯಾಳಿ, ಪೌರಾಯುಕ್ತ ರಮೇಶ ಜಾಧವ ಹಾಗೂ ಪಾದಗಟ್ಟಿಯ ಸೇವಾ ಸಮಿತಿ ಉಪಾಧ್ಯಕ್ಷ ಡಿ ಬಿ ರಾವುತ ಆಗಮಿಸಲಿದ್ದಾರೆ. ರಾತ್ರಿ 9ಗಂಟೆಗೆ ಮಂಡಲಗಿರಿಯ ಶ್ರೀಗುರು ತೋಂಟದಾರ್ಯ ನಾಟ್ಯ ಸಂಘ ಇವರಿಂದ ಅತ್ತಿ ಸಿಂಗಾರಿ ಸೋಸಿ ಬಂಗಾರಿ ಎಂಬ ಸುಂದರ ಸಾಮಾಜಿಕ ನಾಟಕವನ್ನು ಆಯೋಜಿಸಲಾಗಿದೆ. ಈ ಮೂರು ದಿನಗಳಂದು ಆಹಾರ ಮೇಳ ಹಮ್ಮಿಕೊಳ್ಳಲಾಗಿದೆ. ಭಕ್ತಾಧಿಕಾಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಶ್ರೀ ಲಕ್ಷ್ಮೀದೇವಿಯ ಅನುಗ್ರಹಕ್ಕೆ ಪಾತ್ರರಾಗಬೇಕೆಂದು ಶ್ರೀ ಲಕ್ಷ್ಮೀದೇವಿ ಪಾದಗಟ್ಟಿ ಸೇವಾ ಸಮಿತಿಯ ಅಧ್ಯಕ್ಷ ವೀರುಪಾಕ್ಷಿ ಮಿರ್ಜಿ ಪ್ರಕಟನೆಯಲ್ಲಿ ಕೋರಿದ್ದಾರೆ.

# ವಿವಿಧ ಬೆಳೆಗಳಲ್ಲಿ ಬೆಳೆ ಸ್ಪರ್ಧೆಗೆ ಅರ್ಜಿ ಆಹ್ವಾನ

**ಧಾರವಾಡ :** ಕೃಷಿ ಇಲಾಖೆಯು 2024-25 ನೇ ಸಾಲಿನ ಹಿಂಗಾರು ಹಂಗಾಮಿನ ರಾಜ್ಯ, ಜಿಲ್ಲೆ, ತಾಲ್ಲೂಕು ಮಟ್ಟದಲ್ಲಿ ನಿಗದಿಪಡಿಸಿದ ವಿವಿಧ ಬೆಳೆಗಳಲ್ಲಿ ಬೆಳೆ ಸ್ಪರ್ಧೆಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ರೈತರು ಸಿಟಿಜನ್ ಲಾಗಿನ್ ಅಥ-ವಾ ಆರ್‌ಎಸ್‌ಕೆ ಲಾಗಿನ್ ಮೂಲಕ ಹತ್ತಿರದ ರೈತ ಸಂಪರ್ಕ ಕೇಂದ್ರ, ಸೇವಾಕೇಂದ್ರ, ಸ್ವತಃ ಪ್ರತ್ಯೇಕವಾಗಿ ಕೆ-ಕಿಸಾನ್ ಪೋರ್ಟಲ್ (K-kisan Portal) ರಡಿ ಅಗತ್ಯ ದಾಖಲಾತಿಗಳೊಂದಿಗೆ ತಮ್ಮ ಎಫ್‌ಐಡಿ (ಈಡಿಣುಣ ಖಜಜಟಿಣುಜಿಥಿಚಿಣುಠಟಿ) ಯನ್ನು ಬಳಸಿಕೊಂಡು ನವೆಂಬರ 30, 2024 ರೊಳಗಾಗ ಅರ್ಜಿ ಸಲ್ಲಿಸಬಹುದು.

ರಾಜ್ಯ ಮಟ್ಟದ ಬೆಳೆ ಸ್ಪರ್ಧೆ: ಹಿಂಗಾರು ಹಂಗಾಮಿಗೆ ಜೋಳ (ಮಳೆ ಆಶ್ರಿತ) ಮತ್ತು ಕಡಲೆ (ಮಳೆ ಆಶ್ರಿತ) ಬೆಳೆಗಳನ್ನು ನಿಗದಿಪಡಿಸಲಾಗಿದೆ.

ಜಿಲ್ಲಾ ಮಟ್ಟದ ಬೆಳೆ ಸ್ಪರ್ಧೆ: ಹಿಂಗಾರು ಹಂಗಾಮಿಗೆ ಕಡಲೆ (ಮಳೆ ಆಶ್ರಿತ) ನಿಗದಿಪಡಿಸಲಾಗಿದೆ.

ತಾಲ್ಲೂಕು ಮಟ್ಟದ ಬೆಳೆ ಸ್ಪರ್ಧೆ: ಧಾರವಾಡ, ಹುಬ್ಬಳ್ಳಿ, ಹುಬ್ಬಳ್ಳಿನಗರ, ನವಲಗುಂದ, ಅಣ್ಣಿಗೇರಿ ಹಾಗೂ ಕುಂದಗೋಳ ತಾಲ್ಲೂಕುಗಳಿಗೆ ಕಡಲೆ (ಮಳೆ ಆಶ್ರಿತ) ಬೆಳೆ ಮತ್ತು ಕಲಘಟಗಿ ತಾಲೂಕಿಗೆ ಜೋಳ (ಮಳೆ ಆಶ್ರಿತ) ಬೆಳೆ ನಿಗದಿಪಡಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಾರ್ಯಾಲಯ ಅಥವಾ ರೈತ ಸಂಪರ್ಕ ಕೇಂದ್ರವನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಿಎಫ್ : 27 ರಂದು ಜಿಲ್ಲಾ ಜಾಗೃತಿ ಶಿಬಿರ

**ಬಾಗಲಕೋಟೆ:** : ಭವಿಷ್ಯನಿಧಿ, ಪಿಂಚಣಿ ಇತ್ಯಾದಿಗಳಿಗೆ ಸಂಬಂಧಿಸಿದ ಕುಂದು ಕೊರತೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ನವೆಂಬರ 27 ರಂದು ಬೆಳಿಗ್ಗೆ 9.30 ರಿಂದ ಸಂಜೆ 4 ಗಂಟೆವರಗೆ ಪ್ರೋಗ್ರೆಸ್ಸಿವ್ ಎಡುಕೇಶನ್ ಟ್ರಸ್ಟ, ಬಂಡಾರಿ & ರಾಟಿ ಕಾಲೇಜ, ಬಾಗಲಕೋಟೆ ರೋಡ ಇಲ್ಲಿ ಜಿಲ್ಲಾ ಮಟ್ಟದ ಜಾಗೃತಿ ಶಿಬಿರ ಹಮ್ಮಿಕೊಳ್ಳಲಾಗಿದೆ. ಪಿಂಚಣಿದಾರರು, ಉದ್ಯೋಗಿಗಳು ಮತ್ತು ಉದ್ಯೋಗದಾತರು ತಮ್ಮ ಕುಂದುಕೊರತೆಗಳ ಪರಿಹಾರ ಕಂಡುಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ sro.raichur@epfindia.gov.in, do.bagalkot@epfindia.gov.in ಗೆ ಸಂಪರ್ಕಿಸುವಂತೆ ರಾಯಚೂರು ಪ್ರಾದೇಶಿಕ ಕಚೇರಿಯ ಪಿಎಫ್ ಕಮೀಷನರ್-2 ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಾನುವಾರು ಸರ್ವೆ ಕರ ಪತ್ರ ಬಿಡುಗಡೆ ಮಾಡಿದ ಸಂಸದ



**ಮೂಡಲಗಿ :** ಪ್ರತಿ ಐದು ವರ್ಷಗಳಿಗೊಮ್ಮೆ ಆಧುನಿಕ ತಂತ್ರಜ್ಞಾನದ ಮೂಲಕ ನಿಖರವಾಗಿ ಜಾನುವಾರು ಗಣತಿ ಮಾಡುವುದ-ರಿಂದ ಗ್ರಾಮಗಳಲ್ಲಿರುವ ಜಾನುವಾರುಗಳ ಸಂಖ್ಯೆಯ ನಿಖರ ಮಾಹಿತಿ ಸಿಗಲಿದೆ. ಇದಕ್ಕನುಗುಣವಾಗಿ ಮೇವು ಅಗತ್ಯತೆ ಹಾಗೂ ನೀತಿ ರೂಪಿಸಲು ಈ ಸಮೀಕ್ಷಾ ವರದಿಯು ಪಶುಸಂಗೋಪನೆ ಅಭಿವೃದ್ಧಿ ಮತ್ತು ಆರೋಗ್ಯ, ಉತ್ಪಾದಕತೆ ಹೆಚ್ಚಿಸಲು ಸಹಕಾರಿಯಾಗಲಿದೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಹೇಳಿದರು.

ಮಂಗಳವಾರ ಕಲ್ಲೋಳಿ ಪಟ್ಟಣದ ಸಂಸದರ ಜನಸಂಪರ್ಕ ಕಾರ್ಯಾಲಯದಲ್ಲಿ ಮೂಡಲಗಿ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಆಯೋಜಿಸಿದ 21ನೇ ರಾಷ್ಟ್ರೀಯ ಜಾನುವಾರು ಗಣತಿ ಸಮೀಕ್ಷೆಗೆ ಚಾಲನೆ ನೀಡಿ, ಕರ ಪತ್ರಗಳನ್ನು ಬಿಡುಗಡೆಗೊಳಿಸಿ ಮಾತನಾಡಿದರು.

ಪ್ರತಿ ಐದು ವರ್ಷಕ್ಕೊಮ್ಮೆ ಜಾನುವಾರು ಸಮೀಕ್ಷೆ ನಡೆಸಲಾಗುತ್ತೆ. ಗಣತಿದಾರರು ಮನೆ ಮನೆಗೆ ಭೇಟಿ ನೀಡಿ ಜಾನುವಾರುಗಳ ಲಿಂಗ, ವಯಸ್ಸು, ಆರೋಗ್ಯದ ಸ್ಥಿತಿಗತಿ, ಯಾವ ತಳಿ, ಅದನ್ನು ಸಾಕುತ್ತಿರುವ ರೈತ ಕುಟುಂಬಗಳ ವಿವರಗಳು ಸೇರಿದಂತೆ ಇತ್ಯಾದಿ ಮಾಹಿತಿಯನ್ನು ಮೊಬೈಲ್ ಆಪ್‌ನಲ್ಲೆ ದಾಖಲಿಸಲಿದ್ದಾರೆ. ಜಾನುವಾರು ಸಮೀಕ್ಷೆ ಫೆಬ್ರವರಿ 2025ರ ವರೆಗೆ ನಡೆಯಲಿದೆ ಎಂದರು. ಜಾನುವಾರು ಸಾಕಣೆದಾರರು ಸಾಕಿರುವ ದನ, ಎತ್ತು, ಎಮ್ಮೆ, ಹಸು, ಮೇಕೆ, ಕುರಿ, ಕೋಳಿ, ನಾಯಿ, ಕುದುರೆ, ಹಂದಿ, ಬಾತುಕೋಳಿ ಮತ್ತು ಎಮು ಪಕ್ಷಿಗಳ ಮಾಹಿತಿ ಪಡೆಯಲಾಗುವುದು. ಬಿಡಾಡಿ ದನಗಳು ಮತ್ತು ಬೀದಿ ನಾಯಿ ಹಾಗೂ ಸಾಕು ನಾಯಿಗಳ ಮಾಹಿತಿಯನ್ನೂ ಕಲೆ ಹಾಕಲಾಗುತ್ತದೆ. ಜಾನುವಾರು ಹೊಂದಿರುವ ರೈತರಿಗೆ ಈ ಗಣತಿಯಿಂದ ಅನುಕೂಲವಾಗಲಿದೆ. ಇದರಿಂದ ಉತ್ತಮ ಯೋಜನೆ ರೂಪಿಸಿ ಜಾನುವಾರುಗಳ ಅಭಿವೃದ್ಧಿಗಾಗಿ ಸೇವೆ ನೀಡಲು ಸಾಧ್ಯವಾಗಲಿದೆ ಎಂದರು.

ತಾಲೂಕಾ ಪಶುಪಾಲನಾ ಮತ್ತು ಪಶು ವೈದ್ಯಕೀಯ ಇಲಾಖೆ ಸಹಾಯಕ ನಿರ್ದೇಶಕ ಡಾ ಮೋಹನ ಕಮತ, ಪ್ರಮುಖರಾದ ಬಸವರಾಜ ಕಡಾಡಿ, ಡಾ. ಸುರೇಶ ತಪಶೆಟ್ಟಿ, ಡಾ. ಶಿವಾನಂದ ಸಂಸುದ್ದಿ ಸೇರಿದಂತೆ ಇಲಾಖೆ ಸಿಬ್ಬಂದಿಗಳು, ರೈತರು ಉಪಸ್ಥಿತರಿದ್ದರು.

## ವಿಶ್ವ ಶೌಚಾಲಯ ದಿನಾಚರಣೆ : ನಮ್ಮ ಶೌಚಾಲಯ- ನಮ್ಮ ಗೌರವ

# ಆರೋಗ್ಯಕ್ಕಾಗಿ ಶೌಚಾಲಯ ಬಳಸಿ : ಡಾ.ಪುನಿತ್




**ಬಾಗಲಕೋಟೆ:** : ಉಲ್ಲಾಸಮಯ ಜೀವನ ಹಾಗೂ ಉತ್ತಮ ಆರೋಗ್ಯಕ್ಕಾಗಿ ಪ್ರತಿಯೊಬ್ಬರೂ ಶೌಚಾಲಯ ಬಳಕೆ ಮಾಡಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಪುನಿತ್ ಬಿ.ಆರ್ ಹೇಳಿದರು.

ತಾಲೂಕಿನ ಬೇವಿನಮಟ್ಟಿ ಗ್ರಾಮದ ಉನ್ನತೀಕರಿಸಿದ ಸರಕಾರಿ ಪ್ರೌಢಶಾಲೆಯಲ್ಲಿ ಮಂಗಳವಾರ ಜಿಲ್ಲಾ ಪಂಚಾಯತ ಗ್ರಾಮ ಪಂಚಾಯತ ಸಹಯೋಗದಲ್ಲಿ ಆಯೋಜಿಸಿದ್ದ ವಿಶ್ವ ಶೌಚಾಲಯ ದಿನಾಚರಣೆ ಹಾಗೂ ಮಾನವ ಹಕ್ಕುಗಳ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಶೌಚಾಲಯ ನಿರ್ಮಿಸಿಕೊಳ್ಳಲು ಸರಕಾರ ಸಹಾಯಧನ ನೀಡುತ್ತಿದ್ದು, ಈ ಸಹಾಯಧನ ಪಡೆದುಕೊಂಡು ಪ್ರತಿಯೊಂದು ಮನೆಗೆ ಶೌಚಾಲಯ ನಿರ್ಮಿಸಿಕೊಳ್ಳಬೇಕು ಎಂದರು.

ಈಗಾಗಲೇ ನಿರ್ಮಿಸಿದ ಶೌಚಾಲಯಗಳು ಶಿಥಿಲಗೊಂಡಿದ್ದರೆ ದುರಸ್ಥಿ ಮಾಡಿಕೊಂಡು ಬಳಸಲು ಮುಂದಾಗಬೇಕು. ವ್ಯಯಕ್ತಿಕ ಮತ್ತು ಸಮುದಾಯ ಶೌಚಾಲಯಗಳನ್ನು ಉಪಯೋಗಿಸಿ ಕೊಳ್ಳುವುದರ ಜೊತೆಗೆ ಸ್ವಚ್ಚತೆ ಕಾಪಾಡಿಕೊಳ್ಳಬೇಕು. ವ್ಯಯಕ್ತಿಕ ಸಮುದಾಯ ಶೌಚಾಲಯಗಳನ್ನು ಉತ್ತಮವಾಗಿಟ್ಟುಕೊಂಡವರಿಗೆ ಗ್ರಾಮ, ತಾಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಪುರಸ್ಕಾರ ನೀಡಿ ಬಹುಮಾನ ನೀಡಲಾಗುತ್ತದೆ ಎಂದು ತಿಳಿಸಿದರು.

ವಿಷಮ ಶೀಥ ಜ್ವರ (ಟೈಪಾಯಿಡ್) ಕ್ಕೆ ಮೂಲ ಕಾರಣ ಬಯಲು ಶೌಚಾಲಯ ಕಾರಣವಾಗಿದ್ದು, ಇದಕ್ಕಾಗಿ ಹತ್ತರಲ್ಲಿ ಐದರಷ್ಟು ಮಕ್ಕಳು ಬಲಿಯಾಗುತ್ತಿದ್ದಾರೆ. ಆದ್ದರಿಂದ ಶೌಚಾಲಯದ ಬಗ್ಗೆ ಜಾಗೃತಿ ವಹಿಸಬೇಕಿದೆ. ಮನೆಯಲ್ಲಿ ಶೌಚಾಲಯ ಇಲ್ಲದಿದ್ದಲ್ಲಿ ಪಾಲಕರಲ್ಲಿ ಒತ್ತಾಯ ಮಾಡಿ ಶೌಚಾಲಯ ನಿರ್ಮಿಸಿಕೊಳ್ಳಲು ಮುಂದಾಗಬೇಕು ಎಂದು ಹೇಳಿದರು. ಪ್ರಾಸ್ತಾವಿಕವಾಗಿ ಮಾತನಾಡಿದ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಸುಭಾಷ ಸಂಪಗಾವಿ ಗ್ರಾಮೀಣ ಮಟ್ಟದಲ್ಲಿ ಶೌಚಾಲಯದ ಬಗ್ಗೆ ಅರಿವು ಮೂಡಿಸುವುದು ಮುಖ್ಯವಾದ ಉದ್ದೇಶವಾಗಿದ್ದು, ನಮ್ಮ ಶೌಚಾಲಯ, ನಮ್ಮ ಗೌರವ ಎಂಬ ದ್ಯೇಯ ವಾಕ್ಯದೊಂದಿಗೆ ಪ್ರತಿಯೊಬ್ಬರಲ್ಲಿ ಜಾಗೃತಿ ಮೂಡಿಸುವ ಕೆಲಸವಾಗಬೇಕು. ಈ ಶೌಚಾಲಯ ಸಮರ್ಪಕವಾಗಿ ನಿರ್ವಹಿಸಿ ಇಬ್ಬರನ್ನು ಪ್ರತಿ ಗ್ರಾಮ ಪಂಚಾಯತ ಮಟ್ಟದಲ್ಲಿ ಆಯ್ಕೆ ಮಾಡಲಾಗುತ್ತಿದೆ. ಅದರಂತೆ ಸಮುದಾಯ ಶೌಚಾಲಯಗಳನ್ನು ಉತ್ತಮವಾಗಿ ಬಳಸಿದಲ್ಲಿ ಅಂತವರನ್ನು ಗುರುತಿಸಿ ಸೂಕ್ತ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಬೇವಿನಮಟ್ಟಿ ಗ್ರಾಮ ಪಂಚಾಯತ ಅಧ್ಯಕ್ಷೆ ರುಕ್ಮವ್ವ ಗೌಡರ, ಸಹಾಯಕ ಯೋಜನಾಧಿಕಾರಿ ಭೀಮಪ್ಪ ತಳವಾರ, ಕ್ಷೇತ್ರ ಶಿಕ್ಷಣಾಧಿಕಾರಿ ಎಂ. ಎಸ್.ಬಡದಾನಿ, ಶಿಕ್ಷಣಾಧಿಕಾರಿ ಮಿರ್ಜಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ರಮೇಶ ಸೂಳಿಕೇರಿ, ಪಂಚಾಯತ ರಾಜ್ ಇಲಾಖೆಯ ಸಹಾಯಕ ನಿರ್ದೇಶಕ ಪರಮೇಶ್ವರ ಚಲವಾದಿ, ಅಂಗನವಾಡಿ ಮೇಲ್ವಿಚಾರಕಿ ರೂಪಾ ಇದ್ದಲಗಿ ಸೇರಿದಂತೆ ಇತರರು ಉಪಸ್ಥಿತರಿದ್ದರು. ಶಾಲಾ ಮುಖ್ಯೋಪಾದ್ಯಾಯ ಎಂ.ಬಿ.ಬಾಲರೆಡ್ಡಿ ಸ್ವಾಗತಿಸಿದರು.

# ಕರ್ನಾಟಕ ಲೋಕಾಯುಕ್ತ ಇಂದು ಮತ್ತು ನಾಳೆ ಸಾರ್ವಜನಿಕರ ಕುಂದುಕೊರತೆ ಅಹವಾಲು ಸ್ವೀಕಾರ

**ಧಾರವಾಡ :** ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ ಅವರು ನವೆಂಬರ 21 ರಿಂದ 23 ವರೆಗೆ ಧಾರವಾಡ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ನವೆಂಬರ 21, 2024 ರಂದು ಬೆಳಿಗ್ಗೆ 10 ರಿಂದ 1:30 ರವರೆಗೆ ಮತ್ತು ಮಧ್ಯಾಹ್ನ 2:30 ರಿಂದ 5 ರವರೆಗೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಸಾರ್ವಜನಿಕರ ಕುಂದುಕೊರತೆ ಅಹವಾಲುಗಳನ್ನು ಸ್ವೀಕರಿಸಿ, ವಿಚಾರಣೆ ನಡೆಸಲಿದ್ದಾರೆ.

ಸರ್ಕಾರಿ ಅಧಿಕಾರಿ, ನೌಕರರಿಂದ ಕಾನೂನು ರೀತ್ಯಾ ಆಗಬೇಕಾದ ಕೆಲಸದಲ್ಲಿ ವಿಳಂಬವೇನಾದರೂ ಆಗಿದ್ದಲ್ಲಿ ಅಥವಾ ಅಧಿಕಾರಿ, ನೌಕರರು ನ್ಯಾಯಯುತವಾಗಿ ಮಾಡಿಕೊಡಬೇಕಾದ ಕೆಲಸಗಳಲ್ಲಿ ವೃಥಾ ತೊಂದರೆ ಕೊಡುವುದು ಅಥವಾ ಇನ್ಯಾವುದೇ ತರಹದ ದುರಾಡಳಿತದಲ್ಲಿ ತೊಡಗಿದ್ದರೆ, ಅದ-ರಿಂದ ತೊಂದರೆಗೊಳಗಾದ ಸಾರ್ವಜನಿಕರು ತಮ್ಮ ಅಹವಾಲುಗಳನ್ನು ಲಿಖಿತ ರೂಪದಲ್ಲಿ ದಾಖಲೆ ಸಾಕ್ಷಾಧಾರಗಳೊಂದಿಗೆ ಸಲ್ಲಿಸಬಹುದು.

ನವೆಂಬರ 22, 2024 ರಂದು ಬೆಳಿಗ್ಗೆ 10 ರಿಂದ 1:30 ರವರೆಗೆ ಮತ್ತು ಮಧ್ಯಾಹ್ನ 2:30 ರಿಂದ 5 ರವರೆಗೆ ಆಲೂರು ವೆಂಕಟ-ರಾವ್ ಸಾಂಸ್ಕೃತಿಕ ಭವನದಲ್ಲಿ ಜಿಲ್ಲೆಗೆ ಸಂಬಂಧಪಟ್ಟಂತೆ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ (ಉಪಲೋಕಾಯುಕ್ತರ ಕಾರ್ಯವ್ಯಾಪ್ತಿಗೆ ಒಳಪಡುವ ಪ್ರಕರಣಗಳಲ್ಲಿ) ತನಿಖೆ, ವಿಚಾರಣೆಗೆ ಬಾಕಿಯಿರುವ ಪ್ರಕರಣಗಳಿಗೆ ಸಂಬಂಧಿಸಿದ ದೂರುದಾರರು ಹಾಗೂ ಎದುರುದಾರರ ಸಮ್ಮುಖದಲ್ಲಿ ಕಾನೂನು ರೀತ್ಯಾ ವಿಚಾರಣೆ ನಡೆಸಲಾಗುವುದು. ದೂರುದಾರರು ನಿಗದಿತ ಸಮಯದಲ್ಲಿ ಹಾಜರಿದ್ದು, ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಕರ್ನಾಟಕ ಲೋಕಾಯುಕ್ತ ಧಾರವಾಡ ಜಿಲ್ಲಾ ಅಧೀಕ್ಷಕರು ಜಂಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರದ ಯೋಜನೆಗಳನ್ನು ಅಲೆಮಾರಿ ಸಮುದಾಯಗಳ ಜನರಿಗೆ ತಲುಪಿಸುವ ಜವಾಬ್ದಾರಿ ಅಧಿಕಾರಿಗಳ ಮೇಲಿದೆ - ಪಲ್ಲವಿ. ಜಿ



**ಕೊಪ್ಪಳ.** ಅಲೆಮಾರಿ ಸಮುದಾಯದಗಳ ಜನರು ಸಮಾಜದಲ್ಲಿ ಅತಿ ಹಿಂದುಳಿದಿದ್ದು ಅವರಿಗೆ ಸರ್ಕಾರದ ಯೋಜನೆಯ ಲಾಭ ಸಮರ್ಪಕವಾಗಿ ತಲುಪಿಸುವ ಜವಾಬ್ದಾರಿ ಅಧಿಕಾರಿಗಳ ಮೇಲಿದೆ ಎಂದು ಕರ್ನಾಟಕ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಲ್ಲವಿ ಜಿ ಹೇಳಿದರು.

ಅವರು ಮಂಗಳವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿಗಳು. ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಹಾಗೂ ಜಿಲ್ಲಾ ಅನುಷ್ಠಾನ ಸಮಿತಿಯ ಸದಸ್ಯರೊಂದಿಗೆ ಪ್ರಗತಿ ಪರಿಶೀಲನೆ ಸಭೆ ನಡೆಸಿ ಮಾತನಾಡಿದರು.

ಅಲೆಮಾರಿ ಸಮುದಾಯಗಳ ಜನರು ಮೂಲಭೂತ ಸೌಲಭ್ಯಗಳಿಂದ ವಂಚಿತರಾಗಿದ್ದಾರೆ. ಅವರಿಗೆ ಇರಲು ಸರಿಯಾದ ಮನೆಯಿಲ್ಲ. ರೇಷನ್ ಕಾರ್ಡ್ ಇಲ್ಲ. ಹೀಗೆ ಹಲವಾರು ಸಮಸ್ಯೆಗಳು ಇವೆ. ಅಲೆಮಾರಿ ಸಮುದಾಯದ ಜನರು ನಮ್ಮಂತೆ ಮನುಷ್ಯರು ಅಲ್ವಾ ಅವರ ಸಮಸ್ಯೆಗಳಿಗೆ ಅಧಿಕಾರಿಗಳು ಪ್ರಥಮ ಆದ್ಯತೆ ನೀಡಬೇಕೆಂದು ಹೇಳಿದರು.

ಅಲೆಮಾರಿ ಅಭಿವೃದ್ಧಿ ನಿಗಮದಿಂದ ಹಲವಾರು ಯೋಜನೆಗಳನ್ನು ಜಾರಿಗೆ ತರಲಾಗಿದೆ ಇವುಗಳನ್ನು ಜನರಿಗೆ ತಲುಪಿಸುವ ಕೆಲಸ ಅಧಿಕಾರಿಗಳು ಮಾಡಬೇಕು. ಅಧಿಕಾ-ರಿಗಳು ಒಂದು ಭಾರಿಯೂ ನಮಗೆ ಭೇಟಿಯಾಗಿಲ್ಲ ನಮ್ಮ ಸಮಸ್ಯೆಗಳಿಗೆ ಸರಿಯಾಗಿ ಸ್ಪಂದಿಸಿಲ್ಲ ಎಂದು ಹಲವಾರು ದೂರುಗಳು ನಮಗೆ ಬಂದಿವೆ. ಕೊಪ್ಪಳ ಜಿಲ್ಲೆಯಲ್ಲಿ 43 ಸಾವಿರಕ್ಕಿಂತ ಹೆಚ್ಚಿನ ಅಲೆಮಾರಿ ಸಮುದಾಯಗಳ ಜನರು ಈ ಜಿಲ್ಲೆಯಲ್ಲಿ ಇದ್ದಾರೆ ಎಂದು ಹೇಳಿದರು.

ಇಲ್ಲಿಯವರೆಗೆ ಜಿಲ್ಲೆಯಲ್ಲಿ ಎಷ್ಟು ಜನ ಅಲೆಮಾರಿಗಳಿಗೆ ಭೂಮಿ ಮತ್ತು ಮನೆ ಇಲ್ಲದವರನ್ನು ಗುರುತಿಸಲಾಗಿದೆ. ಕಳೆದ 3 ವರ್ಷಗಳಿಂದ ಅಲೆಮಾರಿ ಅಭಿವೃದ್ಧಿ ನಿಗಮದಿಂದ ಯಾವುದೇ ಫಲಾನುಭವಿಗಳಿಗೆ ಹಕ್ಕುಪತ್ರಗಳನ್ನು ಜಿಲ್ಲೆಯಲ್ಲಿ ನೀಡಿಲ್ಲ. ಶಾಲೆಯಲ್ಲಿ ಕಲಿಯುವ ಅಲೆಮಾರಿ ಮಕ್ಕಳಿಗೆ ವಸತಿ ನಿಲಯಗಳಲ್ಲಿ ಇರಲು ಶೇ. 10 ಪ್ರತಿಶತ ಮೀಸಲಾತಿ ಇದೆ ಇದನ್ನು ಹೆಚ್ಚಿಸಲು ನಮ್ಮ ನಿಗಮದಿಂದ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು.

ಸಾಮಾಜಿಕ ಪ್ರಜ್ಞೆ ಇಲ್ಲದ ಸಣ್ಣ- ಸಣ್ಣ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಅಲೆಮಾರಿ ಸಮುದಾಯಗಳನ್ನು ಸಮಾಜದ ಮುಖ್ಯ ವಾಹಿನಿಗೆ ತರಲು ಸರಕಾರ ಅಲೆಮಾರಿ ಅಭಿವೃದ್ಧಿ ಕೋಶದಿಂದ ಈಗ ಅಭಿವೃದ್ಧಿ ನಿಗಮವನ್ನಾಗಿ ಪರಿವರ್ತನೆ ಮಾಡಿದೆ. ಪಾರದರ್ಶಕವಾಗಿ ನಮ್ಮ ನಿಗಮದಿಂದ ಫಲಾನುಭವಿಗಳಿಗೆ ಸರ್ಕಾರದ ಲಾಭ ಸಿಗಬೇಕು. ಪ್ರತಿವರ್ಷ ನಮ್ಮ ನಿಗಮದಿಂದ ಆನಲೈನ್ ಮೂಲಕ ಅರ್ಜಿಗಳನ್ನು ಕರೆಯಲಾಗುತ್ತದೆ. ಸ್ವಾತಂ ಸಿಕ್ಕು 78 ವರ್ಷಗಳಾದರು ಇನ್ನೂ ಅಲೆಮಾರಿ ಸಮಾಜ ನಿರ್ಲಕ್ಷಿತ ಸಮುದಾಯವಾಗಿದೆ ಎಂದು ಹೇಳಿದರು.

ಅಲೆಮಾರಿ ನಿಗಮದ ಅಧ್ಯಕ್ಷರು ಮಂಗಳವಾರ ಬೆಳಿಗ್ಗೆ ಕೊಪ್ಪಳ ನಗರದಲ್ಲಿ ಅಲೆಮಾರಿ ಸಮುದಾಯಗಳ ಜನರು ವಾಸಿಸುವ ಕಾಲೋನಿಗಳಿಗೆ ಭೇಟಿ ನೀಡಿ ಅವರ ಸಮಸ್ಯೆಗಳನ್ನು ಆಲಿಸಿದರು.

ಈ ಸಭೆಯಲ್ಲಿ ಜಿಲ್ಲಾಧಿಕಾರಿ ನಲಿನ್ ಅತುಲ್. ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಅಜ್ಜಪ್ಪ ಸೊಗಲದ. ಅಧ್ಯಕ್ಷರ ವಿಶೇಷ ಕರ್ತವ್ಯಾಧಿಕಾರಿ ಆನಂದ ಏಕಲವ್ಯ. ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ. ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ರೇಷ್ಮಾ ಹಾನಗಲ್. ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಹೇಮಂತ ಕುಮಾರ. ಅಲೆಮಾರಿ ಅಭಿವೃದ್ಧಿ ನಿಗಮದ ಜಿಲ್ಲಾ ಅನುಷ್ಠಾನ ಸಮಿತಿ ಸದಸ್ಯರು ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾ-ರಿಗಳು ಮತ್ತು ಅಲೆಮಾರಿ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

# ಕ್ರೀಡಾ ಇಲಾಖೆ : ವಿವಿಧ ತರಬೇತಿ ಶಿಬಿರಕ್ಕೆ ಅರ್ಜಿ

**ಬಾಗಲಕೋಟೆ:** : ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಪ್ರಸಕ್ತ ಸಾಲಿಗೆ ಪರಿಶಿಷ್ಟ ಜಾತಿ ಉಪ ಯೋಜನೆಯಡಿ ಹೊಲಿಗೆ ತರಬೇತಿ, ವಿಡಿಯೋಗ್ರಾಫಿ ಹಾಗೂ ಜಿಮ್, ಫಿಟ್ನೆಸ್ ತರಬೇತಿ ನೀಡುವ ಸಲುವಾಗಿ ಪರಿಶಿಷ್ಟ ಜಾತಿ ಯುವಕ, ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ನವೆಂಬರ 28 ರಿಂದ ಡಿಸೆಂಬರ 17 ವರೆಗೆ ಒಟ್ಟು 20 ದಿನಗಳ ಕಾಲ ಹೊಲಿಗೆ ತರಬೇತಿ ನಡೆಯಲಿದ್ದು, ಎಸ್.ಎಸ್.ಎಲ್.ಸಿ (ಪಾಸ್/ಫೆಲ್) ಡಿಸೆಂಬರ 6 ರಿಂದ 17 ವರೆಗೆ 12 ದಿನಗಳ ಕಾಲ ವಿಡಿಯೋಗ್ರಾಫಿ ತರಬೇತಿಗೆ ದ್ವಿತೀಯ ಪಿಯುಸಿ (ಪಾಸ್/ಫೆಲ್) ಕನಿಷ್ಟ 18 ರಿಂದ 40 ವರ್ಷದೊಳಗಿರಬೇಕು. ತರಬೇತಿಯನ್ನು ಕುಂಬಳಗೋಡು ತರಬೇತಿ ಕೇಂದ್ರ, ಬೆಂಗಳೂರುನಲ್ಲಿ ನಡೆಸಲಾಗುತ್ತಿದೆ. ಡಿಸೆಂಬರ 3 ರಿಂದ 17 ವರೆಗೆ 15 ದಿನಗಳ ಕಾಲ ಜಿಮ್/ಪಿಟ್ನೆಸ್ ತರಭೇತಿಗೆ ದ್ವಿತೀಯ ಪಿಯುಸಿ (ಪಾಸ್/ಫೇಲ್) ಕನಿಷ್ಟ 18 ರಿಂದ 40 ವರ್ಷದೊಳಗಿರಬೇಕು. ತರಬೇತಿ ಕಂಠಿರವ ಕ್ರೀಡಾಂಗಣ ಬೆಂಗಳೂರಿನಲ್ಲಿ ನಡೆಸಲಾಗುತ್ತದೆ.

ತರಬೇತಿ ಶಿಬಿರದಲ್ಲಿ ಹಾಜರಾಗುವ ಅಭ್ಯರ್ಥಿಗಳಿಗೆ ಊಟೋಪಚಾರ, ಪ್ರಮಾಣ ಪತ್ರ ಹಾಗೂ ಸಾಮಾನ್ಯ ವಸತಿ ವ್ಯವಸ್ಥೆ ನೀಡಲಾಗುತ್ತದೆ. ನಿಗದಿತ ಅರ್ಜಿ ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ನವೆಂಬರ 22 ರಂದು ಸಂಜೆ 4 ಗಂಟೆಯೊಳಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ನವನಗರ, ಬಾಗಲಕೋಟೆ ಇವರಿಗೆ ಸಲ್ಲಿಸುವಂತೆ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮುದಾಯ ಭವನದ ಉದ್ಘಾಟನೆ



**ಮೂಡಲಗಿ** : ದಿವಂಗತ ಸಂಗಣ್ಣನಬಸವ ಸ್ವಾಮೀಜಿಗಳ ಸತತ ಪ್ರಯತ್ನದ ಫಲವಾಗಿ ಬಳೋಬಾಳ ಮತ್ತು ಸುತ್ತಮುತ್ತಲಿನ ಗ್ರಾಮಸ್ಥರ ಶ್ರದ್ಧಾ ಕೇಂದ್ರವಾಗಿ ಬಸವ ಯೋಗ ಮಂಟಪ ಇಂದು ಅತ್ಯುತ್ತಮವಾಗಿ ಬೆಳೆಯುತ್ತಿದೆ. ಇದು ಬರುವ ದಿನಗಳಲ್ಲಿ ಬಸವ ತತ್ವ ಅನುಷ್ಠಾನದ ಮಹಾನ ಕೇಂದ್ರವಾಗಿ ಬೆಳೆಯಲಿ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಶುಭ ಹಾರೈಸಿದರು.


ಮಂಗಳವಾರ ಅರಭಾವಿ ಮತಕ್ಷೇತ್ರದ ಬಳೋಬಾಳ ಗ್ರಾಮದ ಬಸವ ಯೋಗ ಮಂಟಪದ ಹತ್ತಿರ ರಾಜ್ಯಸಭಾ ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ನಿರ್ಮಾಣಗೊಂಡ ಸಮುದಾಯ ಭವನದ ಉದ್ಘಾಟನೆ ನೇರವೇರಿಸಿ ಮಾತನಾಡಿದರು.

ಮಠ ಮಂದಿರಗಳು ಜನರ ಧಾರ್ಮಿಕತೆಯ ಶ್ರದ್ಧಾ ಕೇಂದ್ರಗಳು ಜೊತೆಗೆ ನಮ್ಮ ಸನಾತನ ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಮಹತ್ವದ ಕಾರ್ಯವನ್ನು ಮಾಡುತ್ತಿವೆ. ಹೀಗಾಗಿ ಸಮಾಜದ ಪ್ರತಿಯೊಬ್ಬ ವ್ಯಕ್ತಿಯೂ ಬಸವ ಯೋಗ ಮಂಟಪದಂತಹ ಕೇಂದ್ರಗಳನ್ನು ಉಳಿಸಿ ಬೆಳೆಸುವಲ್ಲಿ ವಿಶೇಷ ಕಾಳಜಿ ವಹಿಸಬೇಕೆಂದು ವಿನಂತಿಸಿದರು.

ಸದ್ಗುರು ಮಾತಾ ನೀಲಾಂಬಿಕಾದೇವಿ, ಸದ್ಗುರು ಮಾತಾ ನೀಲಲೋಚನ ತಾಯಿ ಸಾನಿಧ್ಯ ವಹಿಸಿದ್ದರು.

ಪ್ರಮುಖರಾದ ಭಗವಂತ ಪಾಟೀಲ, ಸುನೀಲ ಈರೇಶನವರ, ಅಶೋಕ ಚಿಮ್ಮಡ, ಯಲ್ಲಪ್ಪ ಪಾಟೀಲ, ಗುರುಸಿದ್ದ ಮುರಾರಿ, ರಾಮಲಿಂಗ ಬೆಳವಿ, ಲಕ್ಕಪ್ಪ ಕಳಸನ್ನವರ, ನಿರುಪಾದ ರೆಡ್ಡಿ, ವಿಠ್ಠಲ ಸುಣಧೋಳಿ, ರೂಪೇಶ ಮಾಲದಿನ್ನಿ, ಗುರುಸಿದ್ದ ಮಲ್ಲಾಪೂರ, ಗುರುಸಿದ್ದ ದುರ್ಗಿ, ಮಾರುತಿ ಕಾಡಗಿ, ರಾಮಗೊಂಡ ಪಾಟೀಲ, ಶಿವಪುತ್ರ ಚಿಮ್ಮಡ, ಅಡಿವೆಪ್ಪ ಕುರಬೇಟ ಸೇರಿದಂತೆ ಸ್ಥಳೀಯ ಮುಖಂಡರ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಬಡವರಿಗೆ ಉಚಿತ ಸೇವೆ ಶ್ಲಾಘನೀಯ: ತಿಮ್ಮಾಪೂರ



**ಮುಧೋಳ:** ಮಾನವನ ಯಾವದೇ ಅಂಗ ಕ್ಷೀಣತೆ ಆದಾಗ ಈಗಿನ ದುಬಾರಿ ಆಸ್ಪತ್ರೆ ಖರ್ಚು ಭರಿಸಿ ಚಿಕಿತ್ಸೆ ಪಡೆಯುವದು ತುಂಬಾ ಕಷ್ಟಕರ ಸ್ಥಿತಿಯಲ್ಲಿ ಬಡವರಿಗಾಗಿ ಅನುಕೂಲ ಆಗಲೆಂದು ಉಚಿತ ಕಣ್ಣಿನ ತಪಾಸನೆ, ಶಸ್ತ್ರಚಿಕಿತ್ಸೆ ವ್ಯವಸ್ಥೆ ಯುವಕರು ಹಮ್ಮಿಕೊಂಡಿದ್ದು ಶ್ಲಾಘನೀಯ ಕಾರ್ಯ ಎಂದು ಅಬಕಾರಿ ಸಚಿವ ಆರ್.ಬಿ. ತಿಮ್ಮಾಪೂರ ಹೇಳಿದರು.

ಬುಧವಾರ ಜನತಾಪ್ಲಾಟ್ ಪ್ರಗತಿ ಶಾಲಾ ಆವರಣದಲ್ಲಿ ಕನ್ನಡ ರಾಜ್ಯೋತ್ಸವ ಹಾಗು ಜನತಾ ಸುಲ್ತಾನ ಇವರ 10.ನೇ ವಾರ್ಷಿಕೋತ್ಸವ ಅಂಗವಾಗಿ ಸಮಸ್ತ ಜನತೆಗೆ ಉಚಿತ ಕಣ್ಣಿನ ತಪಾಸಣೆ, ಶಸ್ತ್ರಚಿಕಿತ್ಸೆ ಹಾಗು ರಕ್ತದಾನ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಲು ಅನೇಕ ಯುವಕರು ಮುಂದಾಗಿದ್ದು ಸೌಹಾರ್ದತೆಗೆ ಸಾಕ್ಷಿಯಾಗಿದೆ, ತುರ್ತು ಚಿಕಿತ್ಸಾ ಸಂದರ್ಭದಲ್ಲಿ ಯಾವ ಜಾತಿಯವನದು ರಕ್ತ ಎಂದು ನೋಡುವದಿಲ್ಲ ಪರಸ್ಪರ ಹಂಚಿಕೊಳ್ಳುತ್ತಾರೆ. ಎಲ್ಲರ ರಕ್ತ ಒಂದೇ ಇರುವಾಗ ನಾವೆಲ್ಲ ಮಾನವ ಕುಲ ಒಂದೇ ಎಂಬ ಭಾವನೆಯಿಂದ ನಡೆಯಬೇಕಾಗಿದೆ ಎಂದು ತಿಮ್ಮಾಪೂರ ತಿಳಿಸಿದರು. 136 ಜನರ ತಪಾಸಣೆ : ಉಚಿತ ಕಣ್ಣಿನ ತಪಾಸಣೆಗಾಗಿ 136.ಜನ ತಮ್ಮ ಹೆಸರು ನೊಂದಾಯಿಸಿದ್ದರು, ವೀರಭದ್ರೇಶ್ವರ ರಕ್ತ ಕೇಂದ್ರದ ಸಹಯೋಗದಲ್ಲಿ ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಲು ಆಗಮಿಸಿದ್ದ 26.ಯುವಕರಿಗೆ ಸಚಿವ ಆರ್.ಬಿ. ತಿಮ್ಮಾಪುರ ಕುಶಲೋಪಚಾರ ಆಲಿಸಿ ಪ್ರೋತ್ಸಾಹ ನೀಡಿದರು.

**ಹಾಲು ಹಣ್ಣು ವಿತರಣೆ** : ನಗರದ ಅನಾಥಾಶ್ರಮ ಹಾಗು ಬುದ್ಧಿಮಾಂದ್ಯ ಮಕ್ಕಳಿಗೆ ಅಲ್ಪೋಪಾಹಾರ ಮತ್ತು ಸರಕಾರಿ ಆಸ್ಪತ್ರೆಗೆ ತೆರಳಿ ಹಾಲು, ಹಣ್ಣು-ಹಂಪಲ, ಬ್ರೇಡ್ ನೀಡಿದ್ದು, ಎಲ್ಲ ಕಾಯಕ್ರಮಗಳು ಸರಳ, ಅರ್ಥಪೂರ್ಣ ವಾರ್ಷಿಕೋತ್ಸವವನ್ನು ಜನತಾ ಸುಲ್ತಾನದ ಯುವಕರು ಆಚರಿಸಿಕೊಂಡಿದ್ದು ಜನ ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದರು.

# ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಐಕ್ಯತಾ ಪ್ರಮಾಣ ವಚನ ಸ್ವೀಕಾರ



**ಕೊಪ್ಪಳ** : ರಾಷ್ಟ್ರೀಯ ಐಕ್ಯತಾ ಸಪ್ತಾಹ ಕಾರ್ಯಕ್ರಮದ ನಿಮಿತ್ತ ಕೊಪ್ಪಳ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ "ರಾಷ್ಟ್ರೀಯ ಐಕ್ಯತಾ ಪ್ರಮಾಣ ವಚನ" ಸ್ವೀಕರಿಸಲಾಯಿತು.

ನ.19 ರಿಂದ ನ.25 ರವರೆಗೆ "ರಾಷ್ಟ್ರೀಯ ಐಕ್ಯತಾ ಸಪ್ತಾಹ"ವನ್ನು ಆಚರಿಸುವಂತೆ ಸರ್ಕಾರವು ನಿರ್ಧರಿಸಿದ್ದು, ಅದರಂತೆ ರಾಷ್ಟ್ರದ ಸ್ವಾತಂ ಹಾಗೂ ಐಕ್ಯತೆಯನ್ನು ಬಲಪಡಿಸಲು, ದೇಶದಲ್ಲಿ ಹೆಚ್ಚುತ್ತಿರುವ ಹಿಂಸಾಚಾರ ಮತ್ತು ಕೋಮು ದ್ವೇಷವನ್ನು ತಡೆಗಟ್ಟುವುದಕ್ಕಾಗಿ ಈ ಸಪ್ತಾಹವನ್ನು ಹಮ್ಮಿಕೊಂಡು ರಾಷ್ಟ್ರೀಯ ಐಕ್ಯತಾ ಪ್ರಮಾಣ ವಚನ ಸ್ವೀಕರಿಸುವ ಕುರಿತಾದ ಸರ್ಕಾರದ ನಿರ್ದೇಶನದಂತೆ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರ ನೇತೃತ್ವದಲ್ಲಿ ಎಲ್ಲಾ ಅಧಿಕಾರಿಗಳು, ಸಿಬ್ಬಂದಿ ರಾಷ್ಟ್ರೀಯ ಐಕ್ಯತಾ ಪ್ರಮಾಣ ವಚನವನ್ನು ಸ್ವೀಕರಿಸಿದರು.

ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ಕೃಷ್ಣಮೂರ್ತಿ ದೇಸಾಯಿ ಅವರು ಎಲ್ಲರಿಗೂ ಪ್ರಮಾಣ ವಚನ ಬೋಧಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಜಂಟಿ ಕೃಷಿ ನಿರ್ದೇಶಕ ರುದ್ರೇಶಪ್ಪ ಟಿ.ಎಸ್., ಪ್ರಾದೇಶಿಕ ಸಾರಿಗೆ ಅಧಿಕಾರಿ ಎಲ್.ಬಿ.ನಾಲವಾರ, ಜಿಲ್ಲಾ ಕಾರ್ಮಿಕ ಅಧಿಕಾರಿ ಸುಧಾ ಗರಗ, ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ಕರ್ನಾಟಕ ರತ್ನ ಪ್ರಶಸ್ತಿ ಪ್ರದಾನ: ಗೌರವ ಸನ್ಮಾನ



**ಮುದ್ದೇಬಿಹಾಳ:** ಪಟ್ಟಣದ ಅಮನಾತ್ ಸಹಕಾರಿ ಬ್ಯಾಂಕಿನ ಅಧ್ಯಕ್ಷ ಹಾಗೂ ಸಾಮಾಜಿಕ ಕಾರ್ಯಕರ್ತ ಲಾಡ್ಲೆಮಶಾಕ್ ನಾಯ್ಕೋಡಿ ಅವರಿಗೆ ಬೆಂಗಳೂರಿನ ಸುವರ್ಣ ಕರ್ನಾಟಕ ಕಾರ್ಮಿಕರ ವೇದಿಕೆಯಿಂದ ಹೆಮ್ಮೆಯ ಕರ್ನಾಟಕ ರತ್ನ ಪ್ರಶಸ್ತಿ ಪ್ರದಾನ ಮಾಡಲಾಗಿದೆ. ಸಾಮಾಜಿಕ ಸೇವೆ ಹಾಗೂ ಸಹಕಾರ ಸಂಘದಲ್ಲಿ ಮುಂಚೂಣಿಯಲ್ಲಿರುವ ನಾಯ್ಕೋಡಿ ಅವರು ವಿವಿಧ ಸಮಾಜಗಳ ಜೊತೆ ಹೊಂದಿರುವ ಸೌಹಾರ್ದ ಸಂಬಂಧ ಪರಿಗಣಿಸಿ ಬೆಂಗಳೂರಿನ ಸೈಟ್ಸ್ ಅಂಡ್ ಗಾರ್ಡ್ಸ್ ಹತ್ತಿರದ ಕೊಂಡೋಜಿ ಬಸಪ್ಪ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪತ್ರ ನೀಡಿ ಗೌರವ ಸನ್ಮಾನ ಮಾಡಲಾಗಿದೆ. ಸಂಸ್ಥೆಯ ಅಧ್ಯಕ್ಷ ಡಾ.ಹುಸೇನ್ ಬಾಷಾ ಕೆರೂರು ಉಪಸ್ಥಿತರಿದ್ದರು.

ಸ್ಥಳೀಯ ಗಣ್ಯರು ಚೈತನ್ ಶೀಲ ಗೆಳೆಯರ ಸಂಘದ ಸದಸ್ಯರು ಹರ್ಷ ವ್ಯಕ್ತಪಡಿಸಿದ್ದಾರೆ.

## ರಾಜ್ಯೋತ್ಸವ- ಸುವರ್ಣ ಮಹೋತ್ಸವ ಪ್ರಶಸ್ತಿ ಪುರಸ್ಕೃತ ಪತ್ರಕರ್ತರಿಗೆ ಅಭಿನಂದನೆ

# ಅರ್ಹ ಪತ್ರಕರ್ತರಿಗೆ ರಾಜ್ಯೋತ್ಸವ ಪ್ರಶಸ್ತಿಗಳು ಸಂದಿವೆ : ಕೆ.ವಿ. ಪ್ರಭಾಕರ್

**ಬೆಂಗಳೂರು,** ಮಾಧ್ಯಮ ಕ್ಷೇತ್ರದಲ್ಲಿ ಸಾಧನೆಗೈಯುತ್ತಿರುವ ನೂರಾರು ಪತ್ರಕರ್ತರಿದ್ದಾರೆ.

ಇಚ್ಛಾಶಕ್ತಿ ಮತ್ತು ಬದ್ಧತೆಯಿಂದ ಕಾರ್ಯಪ್ರವೃತ್ತರಾಗಿರುವ ಅರ್ಹ ಪತ್ರಕರ್ತರಿಗೆ ಈ ಬಾರಿ ರಾಜ್ಯೋತ್ಸವ-ಸುವರ್ಣ ಮಹೋತ್ಸವ ಪ್ರಶಸ್ತಿಗಳು ಸಂದಿವೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅಭಿಪ್ರಾಯಪಟ್ಟರು.

ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ(ಕೆಯುಡಬ್ಲ್ಯೂಜೆ) ಮತ್ತು ಪ್ರೆಸ್‌ಕ್ಲಬ್ ವತಿಯಿಂದ ಕನ್ನಡ ರಾಜ್ಯೋತ್ಸವ ಹಾಗೂ ಸುವರ್ಣ ಮಹೋತ್ಸವ ಪ್ರಶಸ್ತಿ ಪುರಸ್ಕೃತ ಪತ್ರಕರ್ತರಿಗೆ ಏರ್ಪಡಿಸಿದ್ದ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ರಾಜ್ಯೋತ್ಸವ ಪುಸ್ಕೃತರಾಗಿರುವ ಹಿರಿಯರಾದ ಸನತ್ ಕುಮಾರ್ ಬೆಳಗಲಿ, ಎನ್.ಎಸ್.ಶಂಕರ್, ಎ.ಜಿ.ಕಾರಟಗಿ, ರಾಮಕೃಷ್ಣ ಅವರೆಲ್ಲರೂ ನನಗೆ ಅಷ್ಟೆ ಅಲ್ಲ, ಪತ್ರಿಕಾ ವೃತ್ತಿಯ ಸಾಕ್ಷಿಪ್ರಜ್ಞೆಯಾಗಿದ್ದಾರೆ ಎಂದರು.

ಸುವರ್ಣ ಮಹೋತ್ಸವ ಪ್ರಶಸ್ತಿ ಪುರಸ್ಕೃತರಲ್ಲಿ ನನ್ನ ಸಹದ್ಯೋಗಿಗಳು, ಸಮಕಾಲೀನರೂ ಇದ್ದಾರೆ. ನಾವೆಲ್ಲಾ ಒಟ್ಟೊಟ್ಟಿಗೇ ಒಡನಾಡಿಕೊಂಡು ಪತ್ರಿಕೋದ್ಯಮದ ಭಾಗ ಆಗಿದ್ದವರು. ಬೇರೆ ಬೇರೆ ಸಾಮಾಜಿಕ ಹಿನ್ನಲೆಯಿಂದ ಬಂದು ಪತ್ರಿಕಾ ವೃತ್ತಿಯನ್ನು ಅರ್ಥಪೂರ್ಣಗೊಳಿಸಿದ್ದಾರೆ, ಪತ್ರಿಕಾ ವೃತ್ತಿಯ ವಿಶ್ವಾಸಾರ್ಹತೆ ಕಾಪಾಡಲು ಇಷ್ಟೂ ಮಂದಿ ತಮ್ಮ ಪಾಲನ್ನು ಒದಗಿಸಿದ್ದಾರೆ ಎಂದರು.

ಪತ್ರಕರ್ತರಿಗೆ ಆರೋಗ್ಯ ಸಂಜೀವಿನಿ:



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಹೋರಾಟದ ಫಲವಾಗಿ ಗ್ರಾಮೀಣ ಪತ್ರಕರ್ತರಿಗೆ ಬಸ್‌ಪಾಸ್ ಯೋಜನೆಯನ್ನು ಸರ್ಕಾರ ಜಾರಿಗೊಳಿಸಿದೆ. ಸದ್ಯದಲ್ಲೇ ಅದು ಪತ್ರಕರ್ತರಿಗೆ ಸಿಗಲಿದೆ. ಮತ್ತೊಂದು ಬೇಡಿಕೆಯಾಗಿರುವ ಆರೋಗ್ಯ ಸೌಲಭ್ಯ ಕಲ್ಪಿಸಲು ಪ್ರತಯತ್ನ ನಡೆದಿದೆ. ಪತ್ರಕರ್ತ ಸಮುದಾಯಕ್ಕೆ ಮತ್ತು ಪತ್ರಕರ್ತರ ಕುಟುಂಬಗಳಿಗೆ ಆರೋಗ್ಯ ಸಂಜೀವಿನಿ ಸೌಲಭ್ಯವನ್ನು ಆದಷ್ಟು ಬೇಗ ಒದಗಿಸಿಕೊಡುವ ನಿಟ್ಟಿನಲ್ಲಿ ಸಿಎಂ ಜೊತೆಗೆ ಮಾತನಾಡಿ ಕ್ರಮ ವಹಿಸಲಾಗುವುದು ಎಂದರು.

ಒತ್ತಡದ ವೃತ್ತಿಜೀವನದ ಪತ್ರಕರ್ತರ ಹಿತದೃಷ್ಟಿಯಿಂದ ಪತ್ರಕರ್ತರಿಗೆ ಆರೋಗ್ಯ ವಿಮಾ ಸೌಲಭ್ಯವನ್ನು ಕಲ್ಪಿಸಬೇಕೆಂದು ಕೆಯುಡಬ್ಲ್ಯೂಜೆ ನಿರಂತರವಾಗಿ ಮನವಿ ಸಲ್ಲಿಸುತ್ತಿದೆ. ಪ್ರೆಸ್ ಕಲ್ಬ್ ಕೂಡ ಈ ಬಗ್ಗೆ ಗಮನ ಸೆಳೆದಿದೆ ಎಂದರು. ಪತ್ರಕರ್ತರ ಶಕ್ತಿ ಕೆ.ವಿ.ಪ್ರಭಾಕರ್: ಪ್ರಾಸ್ತಾವಿಕ ಮಾತುಗಳನ್ನಾಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಈ ಬಾರಿ ರಾಜ್ಯೋತ್ಸವದಲ್ಲಿ ಹೆಚ್ಚು ಪತ್ರಕರ್ತರಿಗೆ ರಾಜ್ಯೋತ್ಸವ ಮತ್ತು ಸುವರ್ಣ ಮಹೋತ್ಸವ ಪ್ರಶಸ್ತಿ ಸಿಗಲಿ ಎನ್ನುವುದು ಸಂಘದ ಹಕ್ಕೋತ್ತಾಯವಾಗಿತ್ತು. ಈ ನಿಟ್ಟಿನಲ್ಲಿ ಸಿಎಂ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರು ಅದಕ್ಕೆ ನ್ಯಾಯ ಒದಗಿಸಿದ್ದಾರೆ. ಅದಕ್ಕಾಗಿ ಸಂಘಟನೆಯಿಂದ ಸಿಎಂ ಮತ್ತು ಅವರಿಗೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

ಸ್ವತಃ ಪತ್ರಕರ್ತರಾಗಿದ್ದ ಪ್ರಭಾಕರ್ ಅವರಿಗೆ ಪತ್ರಕರ್ತರ ನಿಜಸ್ಥಿತಿ ಗೊತ್ತಿದೆ. ಹಾಗಾಗಿ ನಮ್ಮ ಮನವಿಗಳಿಗೆ ನಿರಂತರವಾಗಿ ಸ್ಪಂದಿಸಿ ಸರ್ಕಾರದಿಂದ ಪತ್ರಕರ್ತರಿಗೆ ಸೌಲಭ್ಯ ದೊರಕಿಸಿಕೊಡಲು ತೋರುತ್ತಿರುವ ಇಚ್ಛಾಶಕ್ತಿ ನಿಜಕ್ಕೂ ಶ್ಲಾಘನೀಯ ಎಂದರು.

ಸೂಕ್ತ ಆಯ್ಕೆ: ಕರ್ನಾಟಕ ಮಾಧ್ಯಮ ಅಕಾಡಮಿಯ ಅಧ್ಯಕ್ಷೆ ಆಯೇಷಾ ಖಾನಂ ಮಾತನಾಡಿ, ಈ ಸಲದ ರಾಜ್ಯೋತ್ಸವ ಮತ್ತು ಸುವರ್ಣ ಮಹೋತ್ಸವ ಪ್ರಶಸ್ತಿ ಆಯ್ಕೆ ಪ್ರಕ್ರಿಯೆಯಲ್ಲಿ ವಿವಿಧ ಜಾತಿ-ಪಂಗಡ, ವಿವಿಧ ಪ್ರದೇಶಗಳಿಗೂ ಸೂಕ್ತ ನ್ಯಾಯ ದೊರೆತಿದೆ ಎಂದರು.

ಅಭಿನಂದನೆ: ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಪತ್ರಕರ್ತರಾದ ಎನ್.ಎಸ್.ಶಂಕರ್, ಎ.ಜಿ.ಕಾರಟಗಿ, ರಾಮಕೃಷ್ಣ ಬಡಶೇಷಿ ಹಾಗೂ ಸುವರ್ಣ ಮಹೋತ್ಸವ ಪ್ರಶಸ್ತಿ ಪುರಸ್ಕೃತರಾದ ಎಚ್.ಬಿ.ಮದನಗೌಡ, ಎಂ.ಸಿದ್ಧರಾಜು, ಆರ್.ಜಿ.ಹಳ್ಳಿ ನಾಗರಾಜ್, ಭಾರತಿ ಹೆಗಡೆ, ಶಾಂತಕುಮಾರಿ, ಮಂಜುನಾಥ ಅದ್ದೆ, ರಾಜು ಮಳವಳ್ಳಿ, ಪತ್ರಿಕಾ ವಿತರಕ ಲಕ್ಷ್ಮೀನರಸಪ್ಪ ಮುಂತಾದವರನ್ನು ಅಭಿನಂದಿಸಲಾಯಿತು.

ಸ್ಮರಣ ಸಂಚಿಕೆ ಬಿಡುಗಡೆ: ಇದೇ ಸಂದರ್ಭದಲ್ಲಿ ಪತ್ರಕರ್ತರ ಸಮ್ಮೇಳನ ಸಂದರ್ಭದಲ್ಲಿ ಹೊರ ತಂದಿರುವ ವೇಳೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸ್ಮರಣ ಸಂಚಿಕೆಯನ್ನು ಬಿಡುಗಡೆಗೊಳಿಸಲಾಯಿತು.

ಅಮ್ಮ ಪ್ರಶಸ್ತಿಗೆ ಗೌರವ: ಇದೇ ಸಂದರ್ಭದಲ್ಲಿ ಕೋವಿಡ್ ಕಥೆಗಳ ಪುಸ್ತಕಕ್ಕೆ ಅಮ್ಮ ಪ್ರಶಸ್ತಿ ಲಭ್ಯವಾಗಿರುವ ಹಿನ್ನೆಲೆಯಲ್ಲಿ ಕೆಯುಡಬ್ಲೂಣಟಿಜಜ-ಜುಟಿಜಜಜೆ ಅಧ್ಯಕ್ಷ ಶಿವಾನಂದ ತಗಡೂರು ಅವರನ್ನು, ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಷಖಾನಂ ಅವರನ್ನು ಸನ್ಮಾನಿಸಲಾಯಿತು.

ಪ್ರೆಸ್‌ಕ್ಲಬ್ ಅಧ್ಯಕ್ಷ ಆರ್.ಶ್ರೀಧರ್, ಪ್ರಧಾನ ಕಾರ್ಯದರ್ಶಿ ಜೆ.ಸಿ.ಲೋಕೇಶ್, ಕೆಯುಡಬ್ಲ್ಯೂಜೆ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಕಾರ್ಯದರ್ಶಿ ಸೋಮಶೇಖರ್ ಕೆರೆಗೋಡು, ನಿಂಗಪ್ಪ ಚಾವಡಿ, ಖಜಾಂಚಿ ವಾಸುದೇವ ಹೊಳ್ಳ, ಪದಾಧಿಕಾರಿಗಳಾದ ದೇವರಾಜು, ವಿ.ಮುನಿರಾಜು, ನಗರ ಜಿಲ್ಲಾ ಘಟಕದ ಪದಾಧಿಕಾರಿಗಳಾದ ನರೇಂದ್ರ ಪಾರೇಕಟ್, ಕೆ.ಎಂ.ಜಕ್ರಿಯಾ, ಶಿವರಾಜು, ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ವಿಶ್ವ ವಿಕಲಚೇತನ ದಿನಾಚರಣೆ ಪೂರ್ವಭಾವಿ ಸಭೆ

**ಬೆಳಗಾವಿ** : ವಿಶ್ವ ವಿಕಲಚೇನತ ದಿನಾಚರಣೆ ಅಂಗವಾಗಿ ವಿಕಲಚೇತನರ ಜಿಲ್ಲಾ ಮಟ್ಟದ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳನ್ನು ಹಾಗೂ ಜಿಲ್ಲಾ ಮಟ್ಟದ ಕಾರ್ಯಕ್ರಮ ಏರ್ಪಡಿಸುವ ಕುರಿತಂತೆ ಬುಧವಾರ (ನ.20) ರಂದು ಅಪರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ನಡೆದ ವಿಶ್ವ ವಿಕಲಚೇತನ ದಿನಾಚರಣೆಯ ಪೂರ್ವಭಾವಿ ಸಭೆಯು ಅಪರ ಜಿಲ್ಲಾಧಿಕಾರಿಗಳಾದ ವಿಜಯಕುಮಾರ ಹೊನಕೇರಿ ಅವರ ಅಧ್ಯಕ್ಷತೆಯಲ್ಲಿ ಜರುಗಿತು.

ಸದರಿ ಸಭೆಯಲ್ಲಿ ಮಹಾನಗರ ಪಾಲಿಕೆ ಉಪ ಆಯುಕ್ತರು, ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಉಪ ನಿರ್ದೇಶಕರು, ಕ್ರೀಡೆ ಮತ್ತು ಯುವ ಸಬಲೀಕರಣ ಇಲಾಖೆ ಹಾಗೂ ಬೆಳಗಾವಿ ಜಿಲ್ಲೆಯಲ್ಲಿ ವಿಕಲಚೇತನರ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಹಾಗೂ ವಿಶೇಷ ಶಾಲೆಗಳನ್ನು ನಡೆಸುತ್ತಿರುವ ಎಲ್ಲಾ ಸ್ವಯಂ-ಸೇವಾ ಸಂಸ್ಥೆಗಳ ಮುಖ್ಯಸ್ಥರುಗಳು, ವಿಕಲಚೇತನ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಅವರು ಸಭೆಯಲ್ಲಿ ಉಪಸ್ಥಿತರಿದ್ದರು.

## ಅರ್ಜಿ ಆಹ್ವಾನ

ಬೆಳಗಾವಿ : ಗ್ರಾಮೀಣ ಭಾಗದ ನಿರುದ್ಯೋಗ ಯುವಕ ಹಾಗೂ ಯುವತಿಯರಿಗಾಗಿ ಡಿಸೆಂಬರ್ ತಿಂಗಳಲ್ಲಿ ಜೆ.ಸಿ.ಬಿ ಚಾಲನ ತರಬೇತಿ ಮತ್ತು ಜನೇವರಿ ತಿಂಗಳಲ್ಲಿ ಟ್ರಾವೆಲ್ ಮತ್ತು ಟೂರಿಸ್ಟ್ ಗೈಡ್ ಹಾಗೂ ಫೆಬ್ರವರಿ ತಿಂಗಳಲ್ಲಿ ಮೊಬೈಲ್‌ಫೋನ್ ರಿಪೇರಿ ಮತ್ತು ಸರ್ವಿಸಿಂಗ್ ಉಚಿತ ತರಬೇತಿಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಮೊದಲು ಬಂದವರಿಗೆ ಹಾಗೂ ಗ್ರಾಮೀಣ ಭಾಗದವರಿಗೆ ಮೊದಲ ಆದ್ಯತೆ ನೀಡಲಾಗುವುದು, ತರಬೇತಿಯಲ್ಲಿ ಕೌಶಲ್ಯ ಸಾಧನಾ ಪ್ರೇರಣಾ ತರಬೇತಿ, ಉದ್ಯಮಶೀಲತೇಯ ದಕ್ಷ ಗುಣಗಳು, ಹೊಸ ಉದ್ಯಮದ ಸ್ಥಾಪನೆ ಬಗ್ಗೆ ಮಾಹಿತಿ, ಮಾರುಕಟ್ಟೆ ಸಮೀಕ್ಷೆ, ಮಾರಾಟದ ತಂತ್ರಗಳು, ಯಶಸ್ವಿ ಉದ್ಯಮಗಳಿಂದ ಅನುಭವ ಹಂಚಿಕೆ, ಕ್ಷೇತ್ರ ಭೇಟಿ, ಸಾಫ್ಟ್ ಸ್ಕಿಲ್ಸ್, ಯೋಗ ತರಬೇತಿ ಹಾಗೂ ಬ್ಯಾಂಕಿನಿಂದ ಸಾಲ ಪಡೆದು ಸ್ವ-ಉದ್ಯೋಗ ಪ್ರಾರಂಭಿಸಲು ಬೇಕಾಗುವ ಜ್ಞಾನ, ಸರಕಾರಿ ಯೋಜನೆಗಳು ಮತ್ತು ಯೋಜನಾ ವರದಿ ತಯಾರಿಕೆ ಇನ್ನಿತರ ಮಾಹಿತಿಗಳನ್ನು ಉಚಿತವಾಗಿ ನೀಡಲಾಗುತ್ತದೆ. ಆಸಕ್ತ ಅಭ್ಯರ್ಥಿಗಳು ನ. 30 ರೊಳಗಾಗಿ ವೆಬ್‌ಸೈಟ್ www.rsetihaliyal.org ಮೂಲಕ ಅರ್ಜಿ ಸಲ್ಲಿಸಬಹುದು. ಹಳಿಯಾಳ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆಯ ದೂರವಾಣಿ. 8217236973, 9483485489, 9482188780 ಸಂಖ್ಯೆಗಳಿಗೆ ಸಂಪರ್ಕಿಸಲು ಕೆನರಾ ಬ್ಯಾಂಕ್ ದೇಶ ಪಾಂಡೆ ಆರ್‌ಸೆಟ್ ಸಂಸ್ಥೆಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಪರಿಚಿತ ಶವ ಪತ್ತೆ



ಬೆಳಗಾವಿ : ಜಿಲ್ಲೆಯ ಸಾಂಬ್ರಾ ರೈಲು ನಿಲ್ದಾಣದ ಮಧ್ಯ ನ. 19 ರಂದು ಅಪರಿಚಿತ ಗಂಡಸು ಎಕ್ಸಪ್ರೆಸ್ ರೈಲಿನ ಮುಂದೆ ಬಿದ್ದು ಮೃತಪಟ್ಟಿದ್ದು, ಬೆಳಗಾವಿ ರೈಲ್ವೆ ಪೋಲೀಸ್ ಠಾಣೆಯಲ್ಲಿ ರೀತ್ಯಾ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿರುತ್ತದೆ.

ಮೃತನ ವಿವರ: 55 ರಿಂದ 60 ವರ್ಷ ವಯಸ್ಸು, 5'6 ಇಂಚು ಎತ್ತರ, ಕಪ್ಪು ಮೈಬಣ್ಣ, ಮೈಯಿಂದ ಸದೃಡ, ಬಲ ಮುಂಗೈ ಮೇಲೆ ಓಂ ಅಂತ ಹಚ್ಚೆ ಗುರುತು ಮತ್ತು ಕೈಯಲ್ಲಿ ಕಡಗ ಕಪ್ಪು ಬಣ್ಣದ ರಬ್ಬರ್ ಬ್ಯಾಂಡ್ ಹಾಗೂ ಕೊರಳಲ್ಲಿ ಬಿಳಿದಾರ ಅದರಲ್ಲಿ ರುದ್ರಾಕ್ಷಿ ಇದ್ದು, ಕೆಸರಿ ಬಣ್ಣದ ಫೂಲ್ ಶರ್ಟ, ಬೂದು ಬಣ್ಣದ ಹಾಪ್ ಚಡ್ಡಿ, ಕಪ್ಪು ಮತ್ತು ಕೆಂಪು ಬಣ್ಣದ ಹೂವಿನ ಡಿಸೈನ್ ಇರುವ ಲುಂಗಿ, ಸೋಂಟದಲ್ಲಿ ಕೆಂಪು ಉಡದಾರ ಇದ್ದು, ಮುಖದ ಭಾಗ ಪೂರ್ತಿಯಾಗಿ ರೈಲಿಗೆ ಸಿಲುಕಿ ಜಜ್ಜಿಹೋಗಿದ್ದು ಗುರುತಿಸಲು ಬಾರದಂತೆ ಆಗಿರುತ್ತದೆ.

ಅಪರಿಚಿತ ವ್ಯಕ್ತಿಯ ವಾರಸುದಾರರು ಯಾರೂ ಪತ್ತೆಯಾಗಿರುವುದಿಲ್ಲ. ಈ ಚಹರೆ ಪಟ್ಟಿ ಹೋಲುವ ಗಂಡಸು ಕಾಣೆಯಾದ ಬಗ್ಗೆ ತಮ್ಮ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದರೆ ಅಥವಾ ಮೃತನ ರಕ್ತ ಸಂಬಂಧಿಗಳು ಯಾರಾದರೂ ಪತ್ತೆಯಾದರೆ ಬೆಳಗಾವಿ ರೈಲ್ವೆ ಪೋಲಿಸ್ ಠಾಣೆ ದೂರವಾಣಿ. 08312405273 ಪಿ.ಎಸ್.ಐ ಮೊಬೈಲ ನಂ: 9480802127 ಅಥವಾ ರೈಲ್ವೆ ಪೋಲೀಸ್ ನಿಯಂತ್ರಣ ಕೊಠಡಿ ದೂರವಾಣಿ. 08022871291 ಸಂಖ್ಯೆಗಳಿಗೆ ಸಂಪರ್ಕಿಸಲು ಬೆಳಗಾವಿ ರೈಲ್ವೆ ಪೋಲೀಸ್ ಠಾಣೆ ಆರಕ್ಷಕ ಉಪನಿರೀಕ್ಷಕರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದಿರಾಗಾಂದಿ ಜನ್ಮ ದಿನ : ಪೌರ ಕಾರ್ಮಿಕರಿಗೆ-ರೋಗಿಗಳಿಗೆ ಹಣ್ಣು ವಿತರಣೆ

**ಮೂಡಲಗಿ** : ಕಮಲಾ ನೆಹರೂ ಸ್ಮರಣಾರ್ಥ ಆಸ್ಪತ್ರೆ, ಗಾಂಧಿ ಸ್ಮಾರಕ್ ನಿಧಿ ಮತ್ತು ಕಸ್ತೂರ ಬಾ ಮೆಮೊರಿಯಲ್ ಟ್ರಸ್ಟ್ ಹೀಗೆ ಹಲವಾರು ಸಂಸ್ಥೆಗಳ ಜತೆ ಶ್ರೀಮತಿ. ಇಂದಿರಾ ಗಾಂಧಿ ನಿಕಟ ಸಂಪರ್ಕ ಹೊಂದಿದ್ದರು. ಅವರು ಸ್ವರಾಜ್ ಭವನ ಟ್ರಸ್ಟ್ ಅಧ್ಯಕ್ಷೆಯಾಗಿದ್ದರು. ಬಾಲ ಸಹಯೋಗ್ , ಬಾಲ ಭವನ ಮಂಡಳಿ ಮತ್ತು ಮಕ್ಕಳ ರಾಷ್ಟ್ರೀಯ ಸಂಗ್ರಹಾಲಯಗಳ ಜತೆಯೂ ಉತ್ತಮ ಸಂಬಂಧ ಹೊಂದಿದ್ದರು ಎಂದು ಕಾಂಗ್ರೆಸ್ ಮುಖಂಡ ಇಜಾಜ್ ಅಹ್ಮದ್ ಕೊಟ್ಟಲಗಿ ಹೇಳಿದರು

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಇಂದಿರಾಗಾಂಧಿಯವರ ಜನ್ಮದಿನದ ಪ್ರಯುಕ್ತ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಮಾತನಾಡಿದರು,

ಕಾಂಗ್ರೆಸ್ ಮಹಿಳಾ ಘಟಕದ ಕಾರ್ಯಾಧ್ಯಕ್ಷೇ ಸುಜಾತಾ ಹಿರೇಮಠ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿ, ಇಂದಿರಾಗಾಂಧಿಯವರು ದೇಶ ಕಂಡ ಅಪ್ರತಿಮ ಪ್ರಧಾನಿಯಾಗಿ ಬಡ ಜನರ ನಾಡಿ



ಮಿಡಿತ ಚೆನ್ನಾಗಿ ಅರಿತು, ಕ್ಷೀರ ಕ್ರಾಂತಿ, ಹಸಿರುಕ್ರಾಂತಿ, ಭೂ ಒಡೆಯದಂತಹ ಕ್ರಾಂತಿಕಾರಿ ಖಾಯ್ದೆಗಳನ್ನು ಜಾರಿಗೆ ತಂದಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಇಂದಿರಾಗಾಂಧಿಯವರ ಜನ್ಮದಿನದ ಪ್ರಯುಕ್ತ ಆಶಾಕಾರ್ಯಕರ್ತೆಯರಿಗೆ, ಪೌರ ಕಾರ್ಮಿಕರಿಗೆ, ರೋಗಿಗಳಿಗೆ ಹಣ್ಣು ಹಾಗೂ ಪತ್ರಿಕಾ ವಿತರಕರಿಗೆ ಪೆನ್, ನೋಟ್ ಬುಕ್ ವಿತರಿಸಲಾಯಿತು.

ಈ ಸಂದರ್ಭದಲ್ಲಿ ವೈದ್ಯಾಧಿಕಾರಿ ಡಾ.ಭಾರತಿ ಕೋಣಿ, ಕಾಂಗ್ರೆಸ್ ಅರಭಾವಿ ಮಂಡಲದ ಅಧ್ಯಕ್ಷ ಸುರೇಶ್ ಮಗದುಮ್, ರಫೀಕ್ ಪೈಲ್ವಾನ್, ವಾಯ್.ಎಮ್. ಉದ್ದಪ್ಪನವರ್, ಲಲಿತಾ ಜಾಧವ, ಕೌಸರ್ ತಹಶೀಲ್ದಾರ್, ದಿಲ್ ಶಾದ ಹವಾಲ್ದಾರ್, ರೇಶ್ಮಾ ಕಡಬಿಶಿವಾಪೂರ್, ಶ್ರೀಧರ್ ಹಿರೇಮಠ್, ದಾವಲ್ ಡಾಂಗೆ, ಸೋಹೆಲ್ ಮುಲ್ಲಾ ಸೇರಿದಂತೆ ಅನೇಕ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಆಸ್ಪತ್ರೆ ಸಿಬ್ಬಂದಿ ಉಪಸ್ಥಿತರಿದ್ದರು.

# ಯುವಕರು ಸಾರ್ವಜನಿಕ ಗ್ರಂಥಾಲಯಗಳ ಸದ್ಬಳಕೆ ಮಾಡಿಕೊಳ್ಳಬೇಕು

**ರಬಕವಿ-ಬನಹಟ್ಟಿ** : ಯುವಕರು ಸಾರ್ವಜನಿಕರ ಗ್ರಂಥಾಲಯಗಳ ಸದ್ಬಳೆ ಮಾಡಿಕೊಳ್ಳಬೇಕು ಎಂದು ಬಾಗಲಕೋಟೆ ಜಿಲ್ಲಾ ಕೇಂದ್ರ ಗ್ರಂಥಾಲಯ ಪ್ರಾಧಿಕಾರದ ಸದಸ್ಯ ಯಶವಂತ ವಾಜಂತ್ರಿ ತಿಳಿಸಿದರು.

ಇಲ್ಲಿನ ಸಾರ್ವಜನಿಕ ಗ್ರಂಥಾಲಯದಲ್ಲಿ ಗ್ರಂಥಾಲಯದ ಸಪ್ತಾಹದ ಅಂಗವಾಗಿ ಹಮ್ಮಿಕೊಳ್ಳಲಾದ ಪುಸ್ತಕ ಪ್ರದರ್ಶನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಸ್ಥಳೀಯ ಗ್ರಂಥಾಲಯದಲ್ಲಿ ಅಂದಾಜು 23 ಸಾವಿರಕ್ಕೂ ಹೆಚ್ಚು ವಿವಿಧ ಪ್ರಕಾರದ ಗ್ರಂಥಗಳು ಇವೆ. ಇಂದಿನ ದಿನಗಳಿಗೆ ಅವಶ್ಯಕವಾಗಿರುವ ಸ್ಪರ್ಧಾತ್ಮಕ ಪರೀಕ್ಷೆಗಳ ಗ್ರಂಥಗಳು ಕೂಡಾ ದೊರೆಯುತ್ತವೆ. ದಿನ ಪತ್ರಿಕೆಗಳು, ವಾರ ಪತ್ರಿಕೆಗಳು ದೊರೆಯುವುದರಿಂದ ಜ್ಞಾನಾರ್ಜನೆಗೆ ಸಹಾಯವಾಗುತ್ತದೆ ಎಂದು ಯಶವಂತ ವಾಜಂತ್ರಿ ತಿಳಿಸಿದರು.

ಮಕ್ಕಳ ಸಾಹಿತಿ ಜಯವಂತ ಕಾಡದೇವರ ಮಾತನಾಡಿ, ಸ್ಥಳೀಯ ಗ್ರಂಥಾಲಯದಲ್ಲಿ ಸಾಕಷ್ಟು ಮೌಲ್ಯಯುತವಾದ ಗ್ರಂಥಗಳ ಸಂಗ್ರಹವಿದೆ. ಸಂಬಂಧಪಟ್ಟ



ಇಲಾಖೆಯವರು ಇತ್ತ ಗಮನ ನೀಡಿ ಗ್ರಂಥಾಲಯಕ್ಕೆ ನಿವೇಶನ ನೀಡುವುದರ ಜೊತೆಗೆ ಸ್ವಂತ ಕಟ್ಟಡವಾದರೆ ಗ್ರಂಥಾಲಯದಲ್ಲಿರುವ ಮಹತ್ವದ ಪುಸ್ತಕಗಳನ್ನು ರಕ್ಷಣೆ ಮಾಡಲು ಸಾಧ್ಯವಾಗುತ್ತದೆ. ದಿನ ಪತ್ರಿಕೆಗಳ ಓದಿನಿಂದ ನಮ್ಮ ಜ್ಞಾನ ಹೆಚ್ಚಾಗುತ್ತದೆ. ಆದ್ದರಿಂದ ಪ್ರತಿಯೊಬ್ಬರು ದಿನಪತ್ರಿಕೆಗಳನ್ನು ಓದುವುದನ್ನು ರೂಢಿಸಿಕೊಳ್ಳಬೇಕು. ಕಾದಂಬರಿ ಮತ್ತು ಪಠ್ಯ ಪುಸ್ತಕಗಳ ಸಂಗ್ರಹ ಕೂಡಾ ಇದೆ ಎಂದು ತಿಳಿಸಿದರು.

ಗ್ರಂಥಪಾಲಕ ಎಂ.ಡಿ.ಭಜಂತ್ರಿ, ಸಹಾಯಕ ಸತೀಷ ಬಡಿಗೇರ, ನಗರದ ಮುಖಂಡ ಶೇಖರ ಹಕ್ಕಲದಡ್ಡಿ, ಪ್ರಕಾಶ ಬಾಣಕಾರ, ಪ್ರಕಾಶ ಅರಳಿಕಟ್ಟಿ, ಶೇಖರ ಪರೀಟ, ಸಂತೋಷ ಸುಟ್ಟಟ್ಟಿ ಸೇರಿದಂತೆ ಅನೇಕರು ಇದ್ದರು.

# ದಿ.3-4 ರಂದು ಇಂಚಗೇರಿ ಸಪ್ತಾಹ ಕಾರ್ಯಕ್ರಮ

**ರಬಕವಿ-ಬನಹಟ್ಟಿ**ನ ಇಂಚಗೇರಿ ಆಧ್ಯಾತ್ಮ ಸಾಂಪ್ರದಾಯದ ಭಕ್ತಿ ಪ್ರಚಾರಕರಾಗಿದ್ದ ಬಸಲಿಂಗಪ್ಪ ಮಹಾರಾಜರ ಹಾಗು ಕಾಡಪ್ಪ ಮಹಾರಾಜರ ಪುಣ್ಯತಿಥಿ ಅಂಗವಾಗಿ ಸಪ್ತಾಹ ಕಾರ್ಯಕ್ರಮವು ಡಿ.3 ಮತ್ತು 4 ರಂದು ಬನಹಟ್ಟಿಯ ಕೆಎಚ್‌ಡಿಸಿ ಹತ್ತಿರದ ಧ್ಯಾನಾಶ್ರಮದಲ್ಲಿ ನಡೆಯಲಿದೆ ಎಂದು ಯಲ್ಲಪ್ಪ ಮಹಾರಾಜರು ತಿಳಿಸಿದರು.

ಬುಧವಾರ ಕಾರ್ಯಕ್ರಮದ ಪರಿಕರ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಡಿ.3 ರಂದು ಸಂಜೆ ಗಂಟೆಗೆ ಜರುಗುವ ಕಾರ್ಯಕ್ರಮದಲ್ಲಿ ಕರಿಕಟ್ಟಿಯ ಡಾ. ಬಸವರಾಜ ಮಹಾಸ್ವಾಮಿಜಿ, ತೇರದಾಳದ ಗುರುಪಾದೇಶ್ವರ ಶ್ರೀ, ಯಲ್ಲಟ್ಟಿಯ ಬಸಪ್ಪ ಮಹಾರಾಜರು, ಜಗದಾಳದ ಈರಪ್ಪ ಮಹಾರಾಜರು, ಅಸ್ಕಿಯ ಸತ್ಯಪ್ಪ ಮಹಾರಾಜರು,



ರಾಮಪೂರದ ಶಿವಾನಂದ ಭಸ್ಮೆ, ಗಿರಮಲ್ಲಪ್ಪ ಚನಾಳ ಮಹಾರಾಜರು ಉಪಸ್ಥಿತರಿರುವರು.

ಡಿ.4 ಬುಧವಾರದಂದು ಬೆಳಿಗ್ಗೆ 10 ಗಂಟೆಗೆ ಜರುಗುವ ಕಾರ್ಯಕ್ರಮದ ಸಾನಿಧ್ಯವನ್ನು ರೇವಣಸಿದ್ದೇಶ್ವರ ಮಹಾರಾಜರು, ಅಂಬಿಗರ ಚೌಡಯ್ಯ ಪೀಠದ ಶಾಂತಭೀಷ್ಮ ಅಂಬಿಗರ ಚೌಡಯ್ಯ ಸ್ವಾಮೀಜಿ, ಬಂಡಿಗಣಿಯ ಅನ್ನದಾನೇಶ್ವರ ಶ್ರೀಗಳು ವಹಿಸಲಿದ್ದಾರೆ.

ಅತಿಥಿಗಳಾಗಿ ಶಾಸಕ ಸಿದ್ದು ಸವದಿ, ಸಿದ್ದನಗೌಡ ಪಾಟೀಲ, ಸುರೇಶ ಚಿಂಡಕ, ಸತೀಶ ಹಜಾರೆ, ಸಿದ್ರಾಮ ಸವದತ್ತಿ, ರವಿ ಕರಲಟ್ಟಿ, ರಾಮಣ್ಣ ಭದ್ರನ್ನವರ, ಮಲ್ಲಿಕಾರ್ಜುನ ಬಾಣಕಾರ, ಓಂಪ್ರಕಾಶ ಕಾಬರಾ, ಗೋವಿಂದ ಡಾಗಾ ಭಾಗವಹಿಸಲಿದ್ದಾರೆ.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 06, Issue : 240, Postal Reg No. PMG/KA/NK/BM/135/22-24 / POST AT Vantamury Colony Post Office